ಸಂಪುಟ: 05 ಸಂಚಿಕೆ: 356 ಪುಟಗಳು: 08 ಮಂಗಳವಾರ 10 ಮಾರ್ಚ್ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಕಷ್ಟದಿಂದ ಪಾರಾಗುವ ದಾರಿಯನ್ನು ತೋರಿಸುವವನೇ ಮಾನವ ಕೋಟಿಯ ಸ್ನೇಹಿತ..


## ವಿನ್ಯಾಸಗಾರರು ಬೇಕಾಗಿದ್ದಾರೆ

ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ



ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ

9448225696

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com


**ಇರಾನ್-ಇಸ್ರೇಲ್, ಅಮೆರಿಕ ನಡುವಣ ಯುದ್ಧದಿಂದ ಸಂಕಷ್ಟಕ್ಕೆ ಸಿಲುಕಿರುವ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧ ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ರಾಜ್ಯಸಭೆಯಲ್ಲಿ ಹೇಳಿದರು.ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಬಿಕ್ಕಟ್ಟಿನ ಕುರಿತು ರಾಜ್ಯಸಭೆಯಲ್ಲಿ ಮಾಹಿತಿ ನೀಡಿದರು. ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಎಲ್ಲರಿಗೂ ಆತಂಕದ ವಿಷಯವಾಗಿದೆ. ಸಮಸ್ಯೆಗಳನ್ನು ಬಗೆಹರಿಸಲು ಸಂವಾದ ಮತ್ತು ಚರ್ಚೆಯೇ ಸರಿಯಾದ ಮಾರ್ಗ. ಫೆಬ್ರವರಿ 20ರಂದು ಪತ್ರ ಬರೆದು ಸಹನಶೀಲತೆ ತೋರಿಸಿ ಉದ್ವಿಗ್ನತೆ ಕಡಿಮೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿತ್ತು. ಪ್ರಧಾನಿ ಪರಿಸ್ಥಿತಿಯನ್ನು ಗಮನಿಸುತ್ತಿದ್ದಾರೆ ಎಂದು ತಿಳಿಸಿದರು.**

**ಇರಾನ್, ಇಸ್ರೇಲ್ ಯುದ್ಧ - ಸಂಕಷ್ಟಕ್ಕೀಡಾದ ಭಾರತೀಯರ ರಕ್ಷಣೆಗೆ ಕೇಂದ್ರ ಬದ್ಧ**

**ಭಾರತೀಯರ ಸುರಕ್ಷತೆಗೆ ಕ್ರಮ, ಇರಾನ್-ಇಸ್ರೇಲ್ ಯುದ್ಧದ ನಡುವೆ ಗಲ್ಫ್ ರಾಷ್ಟ್ರಗಳಲ್ಲಿ ಆತಂಕ**

# ರಕ್ಷಣೆಗೆ ಬದ್ಧ

## ಶಾಂತಿ ಸ್ಥಾಪನೆಗೆ ಸಿದ್ಧ

• ಉದಯವಾಹಿನಿ, ನವದೆಹಲಿ

ಭಾರತೀಯ ನಾಗರಿಕರ ಸುರಕ್ಷತೆ ಮತ್ತು ರಾಷ್ಟ್ರೀಯ ಹಿತಾಸಕ್ತಿ ರಕ್ಷಣೆ. ಭಾರತ ಶಾಂತಿ ಮತ್ತು ಸ್ಥಿರತೆಯನ್ನು ಪುನಃಸ್ಥಾಪಿಸುವ ಪ್ರಯತ್ನಗಳನ್ನು ಬೆಂಬಲಿಸುತ್ತದೆ. ನಾಗರಿಕರ ಸುರಕ್ಷತೆಯನ್ನು ಖಚಿತಪಡಿಸುವ ಕ್ರಮ ಕೈಗೊಳ್ಳಬೇಕು ಎಂದು ಕರೆ ನೀಡಿದರು.


ಇರಾನ್ ನೌಕೆಯ ಡಾಕಿಂಗ್ ಕುರಿತು ಮಾತನಾಡಿದ ಅವರು, ಆ ಪ್ರದೇಶದಲ್ಲಿದ್ದ ಮೂರು ಹಡಗುಗಳಿಗೆ ನಮ್ಮ ಬಂದರಿಗೆ ಬರಲು ಇರಾನ್ ಅನುಮತಿ ಕೇಳಲಾಗಿತ್ತು. ಈ ಅನುಮತಿಯನ್ನು ಮಾರ್ಚ್ 3ರಂದು ನೀಡಲಾಯಿತು. ಐರಿಸ್ ಲಾವನ್ ಮಾರ್ಚ್ 4ರಂದು ಕೊಚ್ಚಿ ಬಂದರಿಗೆ ತಲುಪಿತು. ಹಡಗಿನ ಸಿಬ್ಬಂದಿ ಈಗ ಭಾರತೀಯ ನೌಕಾಪಡೆಯ ಸೌಲಭ್ಯಗಳಲ್ಲಿ ಇದ್ದಾರೆ. ಇದು ಮಾನವೀಯ ದೃಷ್ಟಿಯಿಂದ ಸರಿಯಾದ ಕ್ರಮವಾಗಿದೆ. ಈ ಮಾನವೀಯ ಸಹಾಯಕ್ಕಾಗಿ ಇರಾನ್ ವಿದೇಶಾಂಗ ಸಚಿವರು ತಮ್ಮ ದೇಶದ ಪರವಾಗಿ ಧನ್ಯವಾದ ತಿಳಿಸಿದ್ದಾರೆ.

ಪಶ್ಚಿಮ ಏಷ್ಯಾದ ಉದ್ವಿಗ್ನತೆ ಹೆಚ್ಚಾಗುತ್ತಿರುವ ಸೂಚನೆಗಳ ಹಿನ್ನೆಲೆಯಲ್ಲಿ ಭಾರತ ಸರ್ಕಾರ ಇರಾನ್‌ನಲ್ಲಿದ್ದ ಭಾರತೀಯರಿಗೆ ಎಚ್ಚರಿಕೆ ನೀಡಿತ್ತು. ಜನವರಿಯಲ್ಲಿ ಇರಾನ್‌ಗೆ ಅಗತ್ಯವಲ್ಲದ ಪ್ರಯಾಣವನ್ನು ತಪ್ಪಿಸಲು ಸೂಚಿಸಲಾಗಿತ್ತು. ಭಾರತೀಯರು ತಮ್ಮ ವಿವರಗಳನ್ನು ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬೇಕು ಹಾಗೂ ರಾಯಭಾರಿ ಕಚೇರಿಯ ವೆಬ್‌ಸೈಟ್ ಮತ್ತು ಸಾಮಾಜಿಕ ಜಾಲತಾಣಗಳನ್ನು ಗಮನಿಸಬೇಕು ಎಂದು ಸಲಹೆ ನೀಡಲಾಗಿತ್ತು.

ಫೆಬ್ರವರಿ 14ರಂದು ರಾಯಭಾರಿ ಕಚೇರಿ ಮತ್ತೊಂದು ಸೂಚನೆ ನೀಡಿ, ಸಾಧ್ಯವಾದ ಎಲ್ಲಾ ಸಾರಿಗೆ ಮಾರ್ಗಗಳ ಮೂಲಕ ಇರಾನ್ ತೊರೆಯುವಂತೆ ಭಾರತೀಯರಿಗೆ ಮನವಿ ಮಾಡಿತ್ತು. ಫೆಬ್ರವರಿ 23ರಂದು ಮತ್ತೊಮ್ಮೆ ಇದೇ ಸಲಹೆಯನ್ನು ನೀಡಲಾಯಿತು ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರ ಗಲ್ಫ್ ಪ್ರದೇಶದಲ್ಲಿರುವ ಭಾರತೀಯರೊಂದಿಗೆ ನಿರಂತರ ಸಂಪರ್ಕದಲ್ಲಿದೆ. ಟೆಹ್ರಾನ್ ನ ಭಾರತೀಯ ರಾಯಭಾರಿ ಕಚೇರಿ ಸಂಪೂರ್ಣವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಂಘರ್ಷದ ನಡುವೆ ಸಿಲುಕಿರುವ ವಿದ್ಯಾರ್ಥಿಗಳಿಗೆ ಸಹಾಯ ಮಾಡುತ್ತಿದೆ. ಕೆಲ ವಿದ್ಯಾರ್ಥಿಗಳನ್ನು ಈಗಾಗಲೇ ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಗಿದೆ. ಕತಾರ್ ಮತ್ತು ಜೋರ್ಡನ್ ಸೇರಿದಂತೆ ಕೆಲವು ದೇಶಗಳಲ್ಲಿ ಸಿಲುಕಿರುವ ಭಾರತೀಯರನ್ನು ಸುರಕ್ಷಿತವಾಗಿ ಮರಳಿ ತರಲು ಕೂಡ ಕ್ರಮಗಳು ನಡೆಯುತ್ತಿವೆ ಎಂದು ಅವರು ಹೇಳಿದರು.

**ಸಮರ್ಥಿಸಿಕೊಂಡ ಎಸ್.ಜೈಶಂಕರ್:** ಹಿಂದೂ ಮಹಾಸಾಗರದಲ್ಲಿದ್ದ ಇರಾನ್‌ನ ಐಆರ್ ಐಎಸ್ ದೇನಾ ನೌಕೆ ಮೇಲಿನ ದಾಳಿಯನ್ನು ದುರದೃಷ್ಟಕರ ಎಂದು ಬಣ್ಣಿಸಿದ ಕೇಂದ್ರ ವಿದೇಶಾಂಗ ಸಚಿವ ಎಸ್.ಜೈಶಂಕರ್ ನೌಕೆಗೆ ಅನುಮತಿ ನೀಡುವ ಮೂಲಕ ನಾನು ಸರಿಯಾದದ್ದನ್ನೇ ಮಾಡಿದ್ದೇವೆ ಎಂದು ಸರ್ಕಾರದ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ. ಯುಎಸ್-ಇಸ್ರೇಲ್ ಯುದ್ಧದ ಮಧ್ಯೆ, ಇರಾನಿನ ನೌಕಾ ಹಡಗು 'ಐರಿಸ್ ಲವನ್'ಗೆ ಶುಕ್ರವಾರ ಕೇರಳದ ಕೊಚ್ಚಿಗೆ ಡಾಕಿಂಗ್‌ಗೆ ಬಂದಿತು. ತಾಂತ್ರಿಕ ಲೋಪದ ವರದಿ ಬಂದ ನಂತರ ಭಾರತ ತುರ್ತು ಅನುಮತಿ ನೀಡಿತ್ತು. ಭೌಗೋಳಿಕ ರಾಜಕೀಯ ಬದಲಾವಣೆಗಳನ್ನು ಅನುಸರಿಸಿದಾಗ ಈ ಘಟನೆ ಸಂಭವಿಸಿದೆ. ಇತ್ತೀಚಿನ ಘಟನೆಯಲ್ಲಿ, ಇರಾನಿನ ಯುದ್ಧನೌಕೆ ಅಮೆರಿಕದ ಜಲಾಂತರ್ಗಾಮಿ ನಡೆಸಿದ ಟಾರ್ಪಿಡೊ ದಾಳಿಯಿಂದ ಮುಳುಗಿತು. ಇದೇ ವಿಚಾರವಾಗಿ ದೆಹಲಿಯಲ್ಲಿ ನಡೆದ 2026ರ ರೈಸಿನಾ ಸಂವಾದದಲ್ಲಿ ಮಾತನಾಡಿದ ವಿದೇಶಾಂಗ ಸಚಿವ ಜೈಶಂಕರ್, ಐಆರ್ ಐಎಸ್ ದೇನಾ ನೌಕೆ ಮುಳುಗುವಿಕೆಯು ದುರದೃಷ್ಟಕರ. ಇರಾನಿಯನ್ನರು ಮತ್ತೊಂದು ಇರಾನಿನ ಯುದ್ಧನೌಕೆ ಐರಿಸ್ ಲವನ್‌ಗಾಗಿ ವಿನಂತಿಯನ್ನು ಕಳುಹಿಸಿದಾಗ ಭಾರತವು ಮಾನವೀಯ ಆಧಾರದ ಮೇಲೆ ಅನುಮತಿ ನೀಡಿತು ಎಂದರು.



**ಯುದ್ಧದ ಸಮಯದಲ್ಲಿ ಜನಸಾಮಾನ್ಯರ ಸ್ಥಿತಿ**

ಇನ್ನು, ಈ ಯುದ್ಧದಿಂದಾಗಿ ವಿಮಾನ ನಿಲ್ದಾಣದ ಮೇಲೆ ದಾಳಿಯಿಂದ ಹಾನಿಗೊಳಗಾಗಿದೆ. ಪ್ರತಿದಾಳಿಯಿಂದ ಡ್ರೋನ್ - ಕ್ಷಿಪಣಿ ಅವಶೇಷಗಳು ಜನವಸತಿ ಪ್ರದೇಶದಲ್ಲೂ ಬಿದ್ದಿದೆ. ಅಮೇರಿಕಾದ ಸೇನೆಗೂ ಹಾನಿಯಾಗಿದೆ. ಇಲ್ಲಿ ಮೊದಲ ದಿನವೇ ಇಲ್ಲಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮುಚ್ಚಿದ್ದು ಯಾವುದೇ ವಿಮಾನಗಳ ಹಾರಾಟ ನಡೆಯುತ್ತಿಲ್ಲ. ಜೊತೆಗೆ ಶಾಲಾ-ಕಾಲೇಜುಗಳು, ವಿಶ್ವವಿದ್ಯಾಲಯಗಳು, ಭಾರತೀಯ ಶಾಲಾ-ಕಾಲೇಜುಗಳು ಯುದ್ಧ ಪ್ರಾರಂಭದ ದಿನದಿಂದ ಬಂದ್ ಮಾಡಿಲಾಗಿದೆ. ಇವುಗಳಲ್ಲಿ 196 ಶೆಲ್ಟರ್ ಆಗಿ ಘೋಷಿಸಿದ್ದಾರೆ. ಉಳಿದಂತೆ ಖಾಸಗಿ ಕಚೇರಿ, ಕಂಪೆನಿ, ಮಾಲ್, ಹೋಟೆಲ್, ಕೈಗಾರಿಕೋದ್ಯಮಗಳು ಕಾರ್ಯ ನಿರ್ವಹಿಸುತ್ತಿದೆ. ಜನರು ಹಾಜರಾಗುತ್ತಿದ್ದಾರೆ. ಜನಜೀವನ ಸಾಮಾನ್ಯವಾಗಿದೆ. ಖಾಸಗಿ ಹಾಗೂ ಸಾರ್ವಜನಿಕ ಸಾರಿಗೆ ವ್ಯವಸ್ಥೆಗೆ ಯಾವುದೇ ತೊಂದರೆ ಆಗಿಲ್ಲ. ಇಲ್ಲಿನ ಸರಕಾರಿ ಕಚೇರಿಗಳಲ್ಲಿ 30% ಹಾಜರಾತಿ ಉಳಿದ 70% ಮನೆಯಿಂದಲೇ ಕಾರ್ಯ ನಿರ್ವಹಿಸಲು ಸರಕಾರ ಪ್ರಕಟಣೆ ಹೊರಡಿಸಿದೆ.



**ಇರಾನ್ ಉದ್ವಿಗ್ನತೆ ನಡುವೆ ಹೇಗಿದೆ ಕುವೈತ್ ಪರಿಸ್ಥಿತಿ**

ಫೆ.28ರ ಶನಿವಾರ ಬೆಳಿಗ್ಗೆ 11:00 ಘಂಟೆಗೆ ದಾಳಿಗಳು ಆರಂಭವಾಗಿದ್ದು, ಇದರಿಂದಾಗಿ ಪ್ರಾರಂಭವಾದ ಸೈರನ್ ಸದ್ದು, ಡ್ರೋನ್ -ಕ್ಷಿಪಣಿಗಳ, ಯುದ್ಧ ವಿಮಾನಗಳ ಹಾರಾಟ, ಕ್ಷಿಪಣಿ-ಡ್ರೋನ್‌ಗಳ ಹೊಡೆದುರುಳಿಸುವಿಕೆ ಆಗಸದಲ್ಲಿ ನಡೆಯುವುದು ನಿರಂತರವಾಗಿ ಕಾಣುತ್ತಲೆ ಇದೆ. ಡ್ರೋನ್ ಕ್ಷಿಪಣಿ ಹೊರಟಿರುವ ಸೂಚನೆಯಾಗಿ, ಕೆಲವು ಘಂಟೆಗಳ ಅಂತರದಲ್ಲಿ ಸೈರನ್ ಮೊರೆತ ನಿರಂತರವಾಗಿ ನಡೆಯುತ್ತಲೇ ಇದೆ. ಯುದ್ಧ ಪ್ರಾರಂಭದ ದಿನ ಜನರು ಎಟಿಎಂ ಮುಂದೆ, ಅವಶ್ಯಕ ನಾಗರೀಕ ವಸ್ತುಗಳ ಸಂಗ್ರಹಣೆಗೆ ಆತುರ ತೋರಿದರೂ, ಸರಕಾರವೇ ಅವಶ್ಯಕ ವಸ್ತುಗಳ ಸಂಗ್ರಹವಿದೆ ಎಂದು ಪ್ರಕಟಣೆ ಹೊರಡಿಸಿದ ನಂತರ ಕಡಿಮೆಯಾಗಿದೆ.ಇನ್ನು, ಯುದ್ಧ ಆರಂಭವಾದಾಗಿನಿಂದಲೂ ಇಸ್ರೇಲ್ ಹಾಗೂ ಗಲ್ಫ್ ರಾಷ್ಟ್ರಗಳಲ್ಲಿರುವ ಅಮೆರಿಕಾದ ರಾಯಭಾರಿ ಕಚೇರಿ, ಸೇನಾನೆಲೆ, ವಾಯುನೆಲೆ, ಅಮೆರಿಕಾದವರ ವಸತಿ ಪ್ರದೇಶಗಳಾಗಿ ಸೇನಾನೆಲೆಗಳ ಮೇಲೆ ಇರಾನ್ ಪ್ರಮುಖ ಮುಖ್ಯ ಗುರಿಯಾಗಿ ಸುತ್ತಿದೆ. ಇವೆಲ್ಲಾ ನಗರದ ಗಡಿ ನಗರದ ಗಡಿ ಪ್ರದೇಶ, ಹೊರವಲಯ ಹೊರವರ್ತುಲಗಳಲ್ಲಿ ಇದೆ. ಅಲ್ಲದೆ, ನಮ್ಮ ಸರಕಾರದ ನಗರ ಯೋಜನೆಯ ಪ್ರಾಜೆಕ್ಟ್ ಗಡಿಪ್ರದೇಶದಲ್ಲಿದ್ದು, ಮರುಭೂಮಿಯ ಮಟ್ಟಸವಾದ ನೆಲವಿರುವುದರಿಂದ, ದಾಳಿ-ಪ್ರತಿದಾಳಿಗಳನ್ನು ನೋಡಬಹುದು, ಕೇಳಬಹುದಾದ ಪರಿಸ್ಥಿತಿ ಇದ್ದು, ಈ ದಾಳಿಗಳಲ್ಲಿ ನಮ್ಮ ಹತ್ತಿರದ ವಾಯುನೆಲೆಯೂ ಹಾನಿಯಾಗಿದೆ.

## ಪಶು ವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಆರಂಭ : ಕೆ.ವೆಂಕಟೇಶ್

• ಉದಯವಾಹಿನಿ, ಬೆಂಗಳೂರು

ಪಶು ಸಂಗೋಪನೆ ಇಲಾಖೆಯಲ್ಲಿ ಖಾಲಿ ಉಳಿದಿರುವ 400 ಪಶು ವೈದ್ಯಾಧಿಕಾರಿಗಳ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ಪಶುಸಂಗೋಪನೆ ಸಚಿವ ಕೆ. ವೆಂಕಟೇಶ್ ಹೇಳಿದ್ದಾರೆ. ಸೋಮವಾರ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಸಿಮೆಂಟ್ ಮಂಜು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, 400 ಪಶು ವೈದ್ಯಾಧಿಕಾರಿಗಳ ಖಾಯಂ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು. ಸಕಲೇಶಪುರ ಕ್ಷೇತ್ರ ವ್ಯಾಪ್ತಿಯಲ್ಲಿ ಪಶುವೈದ್ಯರು ಮತ್ತು ಸಿಬ್ಬಂದಿ ವರ್ಗದ ಹುದ್ದೆಗಳ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿರುವುದರಿಂದಲೇ ಹೆಚ್ಚುವರಿಯಾಗಿ 400 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಹಾಗೂ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿತ್ತು. ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆ ಹಂತದಲ್ಲಿ ಇರುವುದಾಗಿ ಅವರು ಉಲ್ಲೇಖಿಸಿದರು.

## ಸರ್ಕಾರಿ ಶಾಲೆಗೇ ಮಕ್ಕಳ ಪ್ರವೇಶ ಪೋಷಕರ ಮನವೊಲಿಕೆಗೆ ಪತ್ರ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಶಾಲೆಗಳಿಗೇ ತಮ್ಮ ಮಕ್ಕಳನ್ನು ಸೇರಿಸಲು ಪೋಷಕರ ಮನವೊಲಿಸುವಂತೆ ರಾಜ್ಯದ ಎಲ್ಲಾ ಶಾಸಕರು, ಎಸ್‌ಡಿಎಂಸಿ ಅಧ್ಯಕ್ಷರು ಸದಸ್ಯರು, ಶಿಕ್ಷಕರು ಪ್ರಯತ್ನಿಸಬೇಕು ಎಂದು ಕೋರಿ ಪತ್ರ ಬರೆಯಲು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ನಿರ್ಧರಿಸಿದ್ದಾರೆ.

'ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತೆ ಸರ್ಕಾರಿ ಶಾಲೆಗಳನ್ನು ಸಜ್ಜುಗೊಳಿಸಲಾಗುತ್ತಿದೆ. ಒಂದನೇ ತರಗತಿಗೆ ಮಕ್ಕಳ ದಾಖಲಾತಿ ಖಾತ್ರಿಪಡಿಸಲು 6.456 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ತೆರೆಯಲಾಗಿದೆ. ಖಾಸಗಿ ಶಾಲೆಗಳ ದಾಖಲಾತಿ ಹೆಚ್ಚಳಕ್ಕೆ ಪೋಷಕರ ಇಂಗ್ಲಿಷ್ ಭಾಷಾ ಮೋಹವೇ ಕಾರಣ ಎನ್ನುವ ಅಂಶವನ್ನು ಮನಗಂಡು 2025-26ನೇ ಸಾಲಿನಲ್ಲಿ 9.522ಶಾಲೆಗಳಲ್ಲಿ 1ರಿಂದ 5ನೇ ತರಗತಿಯವರೆಗೆ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಆರಂಭಿಸಲಾಗಿದೆ' ಮಕ್ಕಳಿಗೆ ಪೂರ್ವ ಪ್ರಾಥಮಿಕದಿಂದ ದ್ವಿತೀಯ ಪಿಯುವರೆಗೂ ಶಿಕ್ಷಣವನ್ನು ಖಾತ್ರಿಗೊಳಿಸಲು ಒಂದೇ ಸೂರಿನ ಅಡಿ ಶಿಕ್ಷಣಕ್ಕಾಗಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲಾಗಿದೆ. ಪ್ರಸ್ತುತ ಇರುವ 309 ಕೆಪಿಎಸ್‌ನಲ್ಲಿ 2,72,464 ವಿದ್ಯಾರ್ಥಿಗಳು ಇದ್ದಾರೆ. ಮೂರು ವರ್ಷಗಳಲ್ಲಿ 800 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಲಾಗುತ್ತಿದೆ. ಬಡವರು, ಪರಿಶಿಷ್ಟರು, ಹಿಂದುಳಿದ ವರ್ಗಗಳ ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿದ್ದು, ಅವರಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕು ಎನ್ನುವುದು ಸರ್ಕಾರದ ಉದ್ದೇಶ. ಅದಕ್ಕಾಗಿ ಕೆಪಿಎಸ್ ಬಲಪಡಿಸಲಾಗುತ್ತಿದೆ. ದೂರದ ಗ್ರಾಮಗಳಿಂದ ಬರುವ ಮಕ್ಕಳಿಗೆ ಬಿಸಿಯೂಟ, ಉಚಿತ ಪಠ್ಯ ಜತೆಗೆ ಬಸ್ ಸೌಕರ್ಯವನ್ನೂ ಕಲ್ಪಿಸಲಾಗುತ್ತಿದೆ. ಹಾಗಾಗಿ ಪೋಷಕರ ಮನವೊಲಿಸಿ ಮಕ್ಕಳನ್ನು ಸೇರಿಸುವಂತೆ ಮನವೊಲಿಸಬೇಕು ಎಂದು ಮನವಿ ಮಾಡಲಾಗುವುದು. ಈ ಕುರಿತು ಪತ್ರ ಬರೆಯಲಾಗುವುದು ಎಂದರು.

# ಹೆಣ್ಣು ಭ್ರೂಣ ಹತ್ಯೆ: 80 ಪ್ರಕರಣಗಳಲ್ಲಿ ದಂಡ, 5 ನರ್ಸ್‌ಗಳ ಮೇಲೆ ಎಫ್‌ಐಆರ್

## ಸ್ಕ್ಯಾನಿಂಗ್ ಸೆಂಟರುಗಳು ಹೆಚ್ಚು ಇರುವುದರಿಂದ ಬೆಂಗಳೂರಿನಲ್ಲಿ 5 ನೋಡಲ್ ಅಧಿಕಾರಿಗಳನ್ನು ನೇಮಕ

• ಉದಯವಾಹಿನಿ, ಬೆಂಗಳೂರು

ಹೆಣ್ಣು ಭ್ರೂಣ ಹತ್ಯೆ ಗೆ ಸಂಬಂಧಿಸಿದಂತೆ ರಾಜ್ಯದಲ್ಲಿ 80 ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ ಹಾಗೂ 5 ನರ್ಸ್ ಗಳ ಮೇಲೆ ಎಫ್ ಐ ಆರ್ ಮಾಡಲಾಗಿದೆ ಎಂದು ವಿಧಾನಪರಿಷತ್ ನಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದರು.

ಹೆಣ್ಣು ಭ್ರೂಣ ಹತ್ಯೆ ತಡೆಯಲು ಕೈಗೊಂಡ ಕ್ರಮಗಳ ಕುರಿತು ವಿಧಾನಪರಿಷತ್‌ನಲ್ಲಿ ಉಮಾಶ್ರೀಯವರ ಪ್ರಶ್ನೆಗೆ ದಿನೇಶ್ ಗುಂಡೂರಾವ್ ಉತ್ತರಿಸಿದರು.

ಇದೊಂದು ಸಾಮಾಜಿಕ ಪಿಡುಗು. ಕಾನೂನು ಮಾಡುವುದರಿಂದ ಮಾತ್ರ ಇದನ್ನು ತಡೆಯಲು ಸಾಧ್ಯವಿಲ್ಲ. ಗಂಡುಮಕ್ಕಳಿಲ್ಲದಿದ್ದರೆ ನಮ್ಮ ಕುಲವೇ ಮುಗಿದು ಹೋಗುತ್ತದೆ. ಗಂಡು ಮಕ್ಕಳಿದ್ದರೆ ಮಾತ್ರ ನಮ್ಮ ವಂಶ ಬೆಳಗುತ್ತದೆ ಎನ್ನುವ ಭಾವನೆಗಳು ಕೆಲ ಪ್ರದೇಶದಲ್ಲಿ ಇದೆ.



**ಸದನಕ್ಕೆ ಮಾಹಿತಿ ಕೊಟ್ಟ ಸಚಿವ**

ಈಗಾಗಲೇ ಪಿಎನ್ ಟಡಿಟಿ ಸೇರಿದಂತೆ ಹಲವಾರು ಕಾನೂನುಗಳಿದೆ. ಬಾಲಿಕಾ ಸಾಫ್ಟವೇರ್ ಅಡಿ ಎಲ್ಲಾ ಸ್ಕ್ಯಾನಿಂಗ್ ಸೆಂಟರ್ ಕಡ್ಡಾಯವಾಗಿ ನೋಂದಣಿ ಮತ್ತು ನವೀಕರಣ ನಡೆಸಲಾಗುತ್ತಿದೆ. ಈವರೆಗೆ 80 ಪ್ರಕರಣಗಳಲ್ಲಿ ದಂಡ ವಿಧಿಸಿ, 70 ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ. ಈಗಾಗಲೇ 3 ವೈದ್ಯರು, 5 ನರ್ಸ್‌ಗಳ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ. ಗುಪ್ತ ಕಾರ್ಯಾಚರಣೆಯನ್ನು ಇಲಾಖೆಯ ಅಧಿಕಾರಿಗಳು ನಡೆಸುತ್ತಿದ್ದಾರೆ ಎಂದು ಸದನಕ್ಕೆ ತಿಳಿಸಿದರು. ನಮ್ಮ ಅಧಿಕಾರಿಗಳು ಅಲ್ಟ್ರಾಸೌಂಡ್ ಸೆಂಟರ್‌ಗೆ ಹೋಗಿ ನಿಯಮಿತ ತಪಾಸಣೆ ನಡೆಸುತ್ತಾರೆ. ಭಾಗ್ಯಲಕ್ಷ್ಮಿ ಬಾಂಡ್, ಗೃಹಲಕ್ಷ್ಮೀ ಯಂತ ಯೋಜನೆಗಳ ಮೂಲಕ ಹೆಣ್ಣುಮಕ್ಕಳ ಕುರಿತು ಸಕಾರಾತ್ಮಕ ಭಾವನೆ ಮೂಡುವಂತೆ ಎಲ್ಲಾ ಸರ್ಕಾರಗಳು ಪ್ರಯತ್ನ ಮಾಡಿದೆ ಎಂದು ಮಾಹಿತಿ ನೀಡಿದರು. ಮಹಿಳೆಯರಿಗೆ ಉಚಿತ ಶಿಕ್ಷಣ, ಎಲ್ಲಾ ಆದ್ಯತೆ ನೀಡುವ ಮೂಲಕ ಮಹಿಳೆಯರು ಸಾಮಾಜಿಕವಾಗಿ ಸಮಾನರು ಎನ್ನುವುದನ್ನು ಮನವರಿಕೆ ಮಾಡುತ್ತಿದ್ದೇವೆ. ಹೆಚ್ಚೆಚ್ಚು ಪರಿಣಾಮಕಾರಿ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳುತ್ತಿದೆ. ಖಚಿತ ಮಾಹಿತಿ ಆಧರಿಸಿ ಏಳು ಕಡೆ ದಾಳಿ ನಡೆಸಿ ಕಾನೂನು ಪ್ರಕಾರ ಕೇಸ್ ದಾಖಲಿಸಲಾಗಿದೆ. ಪ್ರಕರಣಗಳು ನ್ಯಾಯಾಲದಲ್ಲಿದೆ. ಒಂದು ಲಕ್ಷ ಬಹುಮಾನ ಸಹ ಘೋಷಿಸಲಾಗಿತ್ತು.

ಮೂರು ಜನರು ಸರಿಯಾದ ಮಾಹಿತಿ ನೀಡಿ ಬಹುಮಾನ ಪಡೆದಿದ್ದಾರೆ ಎಂದು ವಿವರ ನೀಡಿದರು.

ಲಿಂಗ ಪತ್ತೆ ಮಾಡುವ ಪ್ರಕ್ರಿಯೆ ಗರ್ಭ ಧರಿಸಿ 12 ವಾರ ಕಳೆದ ನಂತರ ಮಾತ್ರ ಮಾಡಲಾಗುತ್ತದೆ. ಈವರೆಗೂ 12 ವಾರ ಆದ ನಂತರ AMC ರಿಜಿಷ್ಟ್ರೇಶನ್ ಮಾಡಲಾಗುತ್ತಿತ್ತು. ಈಗ ಬದಲಾವಣೆ ಮಾಡಿ 10 ನೇ ವಾರಕ್ಕೆ ರಿಜಿಷ್ಟ್ರೇಶನ್ ಮಾಡಲಾಗುತ್ತದೆ. ಇದರಿಂದ ಭ್ರೂಣ ಹತ್ಯೆ ತಡೆಯಲು ಸಹಾಯಕ. ಭ್ರೂಣ ಹತ್ಯೆ ತಡೆಯಲು ಎಲ್ಲಾ ಜಿಲ್ಲೆಗಳಲ್ಲಿ ಹಿರಿಯ ವೈದ್ಯರನ್ನು ನೋಡಲ್ ಅಧಿಕಾರಿ ನೇಮಕ ಮಾಡಲಾಗಿದೆ.

# ಮಹಿಳಾ ಮೀಸಲಾತಿ: ನನ್ನ ಶ್ರಮಕ್ಕೆ ಮೋದಿ ಅಂತಿಮ ಸ್ಪರ್ಶ ಕೊಟ್ಟರು

## ■ ಡಿಲಿಮಿಟೇಷನ್ ಎಲ್ಲಾ ಸುಗಮವಾಗಿ ನಡೆದರೆ 33% ಮಹಿಳಾ ಮೀಸಲಾತಿ ಬರುತ್ತದೆ ಎಂದ ಮಾಜಿ ಪ್ರಧಾನಿಗಳು

• ಉದಯವಾಹಿನಿ, ಬೆಂಗಳೂರು

ಮಹಿಳಾ ಮೀಸಲಾತಿಯ ಕುರಿತಂತೆ ಮಾಜಿ ಪ್ರಧಾನಿ ಮತ್ತು ರಾಜ್ಯಸಭಾ ಸದಸ್ಯರೂ ಆಗಿರುವ ಎಚ್.ಡಿ.ದೇವೇಗೌಡ ಮಹತ್ವದ ಹೇಳಿಕೆಯೊಂದನ್ನು ನೀಡಿದ್ದಾರೆ. ವಿಧಾನಸಭಾ ಮತ್ತು ಲೋಕಸಭಾ ಚುನಾವಣೆಯಲ್ಲಿ ಮಹಿಳಾ ಮೀಸಲಾತಿ ಬರಬಹುದು ಎಂದು ದೇವೇಗೌಡರು ಅಭಿಪ್ರಾಯ ಪಟ್ಟಿದ್ದಾರೆ.

ನಗರದ ಡಾ. ಬಾಬು ಜಗಜೀವನ ರಾಮ್ ಭವನದಲ್ಲಿ ಜೆಡಿಎಸ್ ಮಹಿಳಾ ಘಟಕ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ದೇವೇಗೌಡರು ಪಾಲ್ಗೊಂಡಿದ್ದರು. ಮುಂಬರುವ ಜಿಬಿಎ ಚುನಾವಣೆಗೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಸ್ಪರ್ಧಿಸಬೇಕೆಂದು ಅವರು ಅಭಿಪ್ರಾಯ ಪಟ್ಟರು.

ಮುಂದಿನ ವಿಧಾನಸಭೆ, ಲೋಕಸಭೆಗೆ ಬಹುಶಃ ಮಹಿಳಾ ಮೀಸಲಾತಿ ಬರಬಹುದು. ಡಿಲಿಮಿಟೇಷನ್ ಎಲ್ಲಾ ಸುಗಮವಾಗಿ ನಡೆದರೆ 33% ಮೀಸಲಾತಿ ಬರುತ್ತದೆ. 75-80 ಜನ ಮಹಿಳೆಯರು ಅಸ್ಸೆಂಬ್ಲಿಗೆ ಸ್ಪರ್ಧಿಸಬೇಕಾಗುತ್ತದೆ ದೇವೇಗೌಡರು ಹೇಳಿದರು.

ಗ್ರೇಟರ್ ಬೆಂಗಳೂರು ಪಾಲಿಕೆ ಚುನಾವಣೆಯಲ್ಲಿ 369ಸ್ಥಾನಗಳ ಪೈಕಿ ಎಷ್ಟು ಸ್ಥಾನಗಳಲ್ಲಿ ಜೆಡಿಎಸ್ ಪಾರ್ಟಿಗೆ ಸ್ಪರ್ಧಿಸುವ ಶಕ್ತಿಯಿದೆ ಎನ್ನುವುದದನ್ನು ಮೊದಲು ನೋಡುತ್ತೇವೆ. ಸುಮ್ಮನೆ ಸ್ಪರ್ಧಿಸಬೇಕು ಎನ್ನುವ ಕಾರಣಕ್ಕಾಗಿ ಅಭ್ಯರ್ಥಿಗಳನ್ನು ಹಾಕುವುದಿಲ್ಲ ಎಂದು ದೇವೇಗೌಡರು ಹೇಳಿದ್ದಾರೆ.



**ಮಹಿಳೆಯರು ಸ್ಪರ್ಧಿಸಿದರೆ ಮಹಿಳಾ ಮೀಸಲಾತಿಗೆ ಅರ್ಥ ಬರುತ್ತದೆ**

ಜಿಬಿಎ ಚುನಾವಣೆಯಲ್ಲಿ ಎಷ್ಟು ಮಹಿಳಾ ಅಭ್ಯರ್ಥಿಗಳಿಗೆ ಅವಕಾಶ ನೀಡಬಹುದು ಎನ್ನುವುದನ್ನು ತೀರ್ಮಾನ ಮಾಡುತ್ತೇವೆ.

**ಮೋದಿಗೆ ಧನ್ಯವಾದ ಹೇಳಿದ ದೇವೇಗೌಡರು**

**ಅಷ್ಟೊಂದು ಮಹಿಳೆಯರಿಗೆ ಟಿಕೆಟ್ ದೊರೆಯುತ್ತದೆ. ಇದಕ್ಕಾಗಿ ನಾನು ಶ್ರಮಿಸಿದೆ. ಪ್ರಧಾನಿ ಮೋದಿ ಅವರು ಅದಕ್ಕೆ ಅಂತಿಮ ಸ್ವರೂಪ ಕೊಟ್ಟರು. ಇದಕ್ಕಾಗಿ ಮೋದಿಯವರಿಗೆ ಹೃದಯಪೂರ್ವಕವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಮಾಜಿ ಪ್ರಧಾನಿಗಳು ಹೇಳಿದರು. ಜಿಬಿಎ ಮೀಸಲಾತಿ ಪಟ್ಟಿ ಅಂತಿಮವಾಗಿ ಪ್ರಕಟವಾಗಿದೆ. ಮುಂಬರುವ ಈ ಚುನಾವಣೆಯಲ್ಲಿ ಜೆಡಿಎಸ್ ಪಕ್ಷದಿಂದ ಹೆಚ್ಚು ಮಹಿಳೆಯರು ಸ್ಪರ್ಧೆ ಮಾಡಬೇಕು ಎಂದು ದೇವೇಗೌಡರು ಕರೆ ನೀಡಿದರು.**

ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಸ್ಪರ್ಧೆ ಮಾಡಿದರೆ ಮಾತ್ರ, ಮಹಿಳಾ ಮೀಸಲಾತಿಗೆ ಒಂದು ಅರ್ಥ ಬರುತ್ತದೆ ಎಂದು ದೇವೇಗೌಡರು ಅಭಿಪ್ರಾಯ ಪಟ್ಟರು. ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಶೇ. 33 ಮಹಿಳಾ ಮೀಸಲಾತಿ ತರುವ ತೀರ್ಮಾನ ಮಾಡಿದ್ದು ನಾವು. ಈಗ, ಈ ಎಲ್ಲಾ ಮೀಸಲಾತಿಗಳು ಜಾರಿಗೆ ಬರುತ್ತಿದೆ. ಈ ಬಗ್ಗೆ ನನಗೆ ತೃಪ್ತಿಯಿದೆ. ನಮ್ಮ ಪಾರ್ಟಿಯ ಮುಖಂಡರು, ಕಾರ್ಯಕರ್ತರು, ಜನರಿಗೆ ಈ ವಿಷಯವನ್ನು ತಲುಪಿಸಬೇಕು ಎಂದು ಮಾಜಿ ಪ್ರಧಾನಿಗಳು ಅಭಿಪ್ರಾಯ ಪಟ್ಟರು.

**ತಾತ್ಕಾಲಿಕ ಉಪಯೋಗ:** ಸಿದ್ದರಾಮಯ್ಯನವರ ಸರ್ಕಾರ ನೀಡುತ್ತಿರುವ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರಿಗೆ ತಾತ್ಕಾಲಿಕ ಉಪಯೋಗವಾಗುತ್ತಿದೆ. ಆದರೆ, ನಮ್ಮ ಪಾರ್ಟಿಯು ಮಹಿಳೆಯರಿಗೆ ದೊಡ್ಡ ಕೊಡುಗೆಯನ್ನು ಕೊಟ್ಟಿದೆ. ಶೇ. 33 ಮಹಿಳಾ ಮೀಸಲಾತಿಗೆ ನಾಂದಿ ಹಾಡಿದವರೇ ದೇವೇಗೌಡರು. ಕುಮಾರಸ್ವಾಮಿಯವರು, ಲಾಟರಿ, ಸಾರಾಯಿ ನಿಷೇಧ ಮಾಡಿ ಎಷ್ಟೋ ಹೆಣ್ಣು ಮಕ್ಕಳ ಜೀವನ ಉಳಿಸಿದರು ಎಂದು ಮಾಜಿ ಶಾಸಕಿ ಅನಿತಾ ಕುಮಾರಸ್ವಾಮಿ ಹೇಳಿದ್ದಾರೆ.

ಗ್ಯಾರಂಟಿ ಯೋಜನೆಗಳಿಂದ ಜೀವನ ರೂಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಎನ್ನುವುದನ್ನು ಜನರು ಇನ್ನಾದರೂ ಅರ್ಥ ಮಾಡಿಕೊಳ್ಳಬೇಕು. ಕಳೆದ ವಿಧಾನಸಭಾ ಚುನಾವಣೆಯ ವೇಳೆ ಪಂಚರತ್ನ ಯೋಜನೆಯ ಭರವಸೆಯನ್ನು ನಾವು ನೀಡಿದ್ದೆವು. ಉಚಿತ ಆರೋಗ್ಯ, ಶಿಕ್ಷಣ ಕೊಡುತ್ತೇವೆ ಎನ್ನುವ ಭರವಸೆಯನ್ನು ಕೊಟ್ಟಿದ್ದೆವು. ಆದರೆ, ಮಹಿಳೆಯರು ಗೃಹಲಕ್ಷ್ಮೀ ಯೋಜನೆಗೆ ಮಾರು ಹೋದರು ಎಂದು ಅನಿತಾ ಕುಮಾರಸ್ವಾಮಿ ಹೇಳಿದರು.

**ಈ ದಿನದ ದರ** ಪೆಟ್ರೋಲ್: 102.92 ₹/L | ಡೀಸೆಲ್ : 91.47 ₹/L | ಬಂಗಾರ: ₹16,168/Gram24ct ₹14,820/Gram22ct | ಬೆಳ್ಳಿ: ₹280.00/Gram

ಅಂತರಾಳದಿಂದ..
EDITORIAL

# ಎನ್‌ಸಿಇಆರ್‌ಟಿ ಪಠ್ಯ ವಿಮರ್ಶೆಯೋ ನ್ಯಾಯಾಂಗ ನಿಂದನೆ ಪಿತೂರಿಯೋ




ನ್ಯಾಯಾಂಗದಲ್ಲಿನ ಭ್ರಷ್ಟಾಚಾರದ ಉಲ್ಲೇಖಗಳನ್ನು ಹೊಂದಿದ್ದ ಎಂಟನೇ ತರಗತಿಯ ಸಮಾಜ ವಿಜ್ಞಾನ ಪಠ್ಯಪುಸ್ತಕದಲ್ಲಿನ ಪಠ್ಯದ ಬಗ್ಗೆ ಸುಪ್ರೀಂ ಕೋರ್ಟ್ ವ್ಯಕ್ತಪಡಿಸಿರುವ ಕಟು ಟೀಕೆ. ಸಾಂಸ್ಥಿಕ ಸಮಗ್ರತೆಯಲ್ಲಿ ಯಾವುದೇ ಕುಸಿತ ಆಗಿರುವುದನ್ನು ನಿರಾಕರಿಸುವ ಸಂಕೇತದಂತಿದೆ. ರಾಷ್ಟ್ರೀಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಮಂಡಳಿ (ಎನ್‌ಸಿಇಆರ್‌ಟಿ) ಪಠ್ಯಪುಸ್ತಕದಲ್ಲಿನ ಅಧ್ಯಾಯವೊಂದು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸೂರ್ಯಕಾಂತ್ ಅವರನ್ನು ಕೆರಳಿಸಿದ್ದು, ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ಕಠಿಣ ಎಚ್ಚರಿಕೆ ನೀಡಲು ಕಾರಣವಾಗಿದೆ. 'ನ್ಯಾಯಾಂಗ ವ್ಯವಸ್ಥೆಯ ವಿವಿಧ ಹಂತಗಳಲ್ಲಿ ಇರುವ ಭ್ರಷ್ಟಾಚಾರ'ದ ಬಗ್ಗೆ ಹಾಗೂ ನ್ಯಾಯಾಲಯಗಳಲ್ಲಿ ಪ್ರಕರಣಗಳು ದೊಡ್ಡ ಪ್ರಮಾಣದಲ್ಲಿ ಬಾಕಿ ಉಳಿದಿರುವ ಬಗ್ಗೆ ಆ ಪಠ್ಯ ಚರ್ಚಿಸಿತ್ತು. ಆ ವಿವರಗಳನ್ನು ನ್ಯಾಯಾಂಗ ನಿಂದನೆ ಎಂದು ಪರಿಗಣಿಸಿದ್ದ ಸಿಜೆಐ, ಪಠ್ಯಪುಸ್ತಕಗಳನ್ನು ತಕ್ಷಣವೇ ಹಿಂಪಡೆಯುವಂತೆ ಆದೇಶಿಸಿದ್ದರು. ನ್ಯಾಯಾಂಗದಲ್ಲಿನ ಭ್ರಷ್ಟಾಚಾರದ ಕುರಿತು ಮಾಹಿತಿಗಳನ್ನು ಒಳಗೊಂಡಿದ್ದ ಅಧ್ಯಾಯವು ನ್ಯಾಯಾಂಗದ ವಿರುದ್ಧ ನಡೆದ ಪಿತೂರಿಯ ರೂಪದಲ್ಲಿ ಕೋರ್ಟ್‌ಗೆ ಕಾಣಿಸಿರುವುದು, ಈ ಪ್ರಕರಣವನ್ನು ಹಲವು ಆಯಾಮಗಳಲ್ಲಿ ನೋಡಲು ಒತ್ತಾಯಿಸುವಂತಿದೆ. ವಿವಾದಕ್ಕೆ ಕಾರಣವಾದ ಪಠ್ಯವನ್ನು ಪ್ರಕಟಿಸಿದ್ದಕ್ಕಾಗಿ ಎನ್ ಸಿಇಆರ್‌ಟಿ ಕ್ಷಮೆ ಕೋರಿದೆ ಹಾಗೂ ಪಠ್ಯಪುಸ್ತಕದ ಎಲ್ಲಾ ಪ್ರತಿಗಳನ್ನು ಹಿಂತೆಗೆದುಕೊಂಡಿರುವುದಾಗಿ ಹೇಳಿದೆ. ವಿವಾದಾಸ್ಪದ ವಿಷಯಗಳನ್ನು ಪಠ್ಯಕ್ಕೆ ಸೇರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಹೇಳಿದ್ದಾರೆ.

ಎನ್‌ಸಿಇಆರ್‌ಟಿ ಪಠ್ಯದ ಬಗೆಗಿನ ಸುಪ್ರೀಂ ಕೋರ್ಟ್ ಅಸಮ್ಮತಿಯನ್ನು 'ಆಯ್ದ ಪ್ರತಿಕ್ರಿಯೆ' ರೂಪದಲ್ಲಿ ನೋಡಬಹುದಾಗಿದೆ ಅತಿರೇಕದ ಪ್ರತಿಕ್ರಿಯೆಯಾಗಿಯೂ ಹಾಗೂ ಸೆನ್ಸಾರ್‌ಶಿಪ್‌ಗೆ ಅವಕಾಶ ಕಲ್ಪಿಸುವ ಕ್ರಮವಾಗಿಯೂ ಅದು ಕಾಣಿಸುವಂತಿದೆ. ನ್ಯಾಯಾಂಗದಲ್ಲಿನ ಭ್ರಷ್ಟಾಚಾರವು ಪ್ರಸ್ತುತ ಸಾರ್ವಜನಿಕ ಚರ್ಚೆಯ ವಿಷಯವಾಗಿದೆ.

ವಿಷಾದದ ಸಂಗತಿಯೆಂದರೆ, ನ್ಯಾಯಾಂಗದಲ್ಲಿಯೂ ಭ್ರಷ್ಟಾಚಾರ ಮತ್ತು ದುರ್ವ್ಯವಹಾರದ ನಿದರ್ಶನಗಳು ಕಾಣಿಸಿಕೊಂಡಿವೆ.. ಇದರಿಂದಾಗಿ ಇಡೀ ವ್ಯವಸ್ಥೆಯ ವಿಶ್ವಾಸಾರ್ಹತೆ ಕುಸಿಯುವ ಸಾಧ್ಯತೆ ಇದೆ ಎನ್ನುವ ನಿವೃತ್ತ ಸಿಜೆಐ ಬಿ.ಆರ್. ಗವಾಯಿ ಅವರ ಹೇಳಿಕೆಯನ್ನು ಎನ್‌ಸಿಇಆರ್‌ಟಿ ಪಠ್ಯ ಒಳಗೊಂಡಿತ್ತು. ಕೆಲವು ನ್ಯಾಯಮೂರ್ತಿಗಳ ಬಗೆಗಿನ ಆರೋಪಗಳೂ ಸಾರ್ವಜನಿಕ ವಲಯದಲ್ಲಿವೆ. ಈ ಅಭಿಪ್ರಾಯಗಳೆಲ್ಲವೂ ಎಂಟನೇ ತರಗತಿಯ ವಿದ್ಯಾರ್ಥಿಗಳಿಗೆ ಅಗತ್ಯವೇ ಎನ್ನುವುದು ಚರ್ಚಾರ್ಹ ವಿಷಯ. ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆಯಂತಹ ಮಾಹಿತಿಯ ಮೂಲಕ ಕಿರಿಯ ವಯಸ್ಸಿನ ವಿದ್ಯಾರ್ಥಿಗಳು ಪೂರ್ವಗ್ರಹ ಪೀಡಿತರಾಗುವ ಹಾಗೂ ಅಭಿಪ್ರಾಯಗಳನ್ನೇ ಸತ್ಯವೆಂದು ಭಾವಿಸುವ ಸಾಧ್ಯತೆಯಿದೆ. ಆದರೂ, ಎನ್‌ಸಿಇಆರ್‌ಟಿ ಪಠ್ಯವನ್ನು ನ್ಯಾಯಾಂಗ ನಿಂದನೆ ಎಂದು ಪರಿಗಣಿಸುವುದು ಅತಿರೇಕವೇ ಸರಿ.

ಎನ್‌ಸಿಇಆರ್‌ಟಿ ಪಠ್ಯಪುಸ್ತಕಗಳನ್ನು ರೂಪಿಸಿದರೂ, ಮಂಡಳಿಯು ಸರ್ಕಾರದ ನಿಯಂತ್ರಣಕ್ಕೆ ಒಳಪಟ್ಟಿರುವುದರಿಂದ ಪಠ್ಯದಲ್ಲಿನ ವಿಷಯಗಳ ಹೊಣೆಗಾರಿಕೆ ಸರ್ಕಾರದ್ದೂ ಆಗಿದೆ. ಎನ್‌ಸಿಇಆರ್‌ಟಿ ಹಾಗೂ ಸಿಬಿಎಸ್‌ಇ, ಕೇಂದ್ರ ಸರ್ಕಾರದ ರಾಜಕೀಯ ಕಾರ್ಯಸೂಚಿಗೆ ತಕ್ಕನಾಗಿ ಪಠ್ಯಗಳನ್ನು ರೂಪಿಸಿರುವ ಉದಾಹರಣೆಗಳೂ ಇವೆ. ಇತಿಹಾಸದ ಕೆಲವು ಭಾಗಗಳನ್ನು ತೆಗೆದುಹಾಕುವ ಅಥವಾ ಸೆನ್ಸಾರ್ ಮಾಡುವ ಕೆಲವು ವಿಷಯಗಳನ್ನು ವಿಜೃಂಭಿಸುವ ಹಾಗೂ ಕೆಲವರನ್ನು ಕೇಡಿನ ರೂಪದಲ್ಲಿ ಚಿತ್ರಿಸುವ ಕೆಲಸವನ್ನೂ ಮಾಡಿವೆ. ಈ ಹಿನ್ನೆಲೆಯಲ್ಲಿ, ಪಠ್ಯದಲ್ಲಿನ ವಿಷಯವನ್ನು ನ್ಯಾಯಾಂಗದ ಬಗೆಗಿನ ಸರ್ಕಾರದ ವಿಮರ್ಶೆಯಂತೆಯೂ ನೋಡಬಹುದಾಗಿದೆ. ಇದೇ ರೀತಿಯ ಅಥವಾ ಇನ್ನೂ ಹಾನಿ ಮಾಡಬಹುದಾದ ಇತರ ವಿಷಯಗಳಿಗೆ ಸಂಬಂಧಿಸಿದಂತೆ ಕೋರ್ಟ್ ಇಷ್ಟೇ ತೀವ್ರವಾಗಿ ಪ್ರತಿಕ್ರಿಯಿಸಿಲ್ಲ ಎನ್ನುವುದನ್ನೂ ಗಮನಿಸಬೇಕು. ಈ ಪ್ರಕರಣದ ಹಿನ್ನೆಲೆಯಲ್ಲಿ, ಸರ್ಕಾರಿ ಸಂಸ್ಥೆಗಳಲ್ಲಿ ಪಾಲುದಾರರಾಗಿರುವ ಜನರು ಕೇಳಬೇಕಾದ ನಿರ್ಣಾಯಕ ಪ್ರಶ್ನೆಯೊಂದಿದೆ. ನ್ಯಾಯಾಂಗದಲ್ಲಿ ಇರಬಹುದಾದ ಭ್ರಷ್ಟಾಚಾರದ ಬಗೆಗಿನ ವಿಶ್ವಾಸಾರ್ಹ ಕಾಳಜಿಗೆ ನ್ಯಾಯಾಲಯದ ಪ್ರತಿಕ್ರಿಯೆಯು ಅಸಹಿಷ್ಣುತೆಯನ್ನು ತೋರಿಸುತ್ತದೆಯೆ

# ರಾಮಾಯಣ



ಸುಗ್ರೀವನು ಸೀತೆ ಹುಡುಕಲು ಕಪಿಗಳನ್ನು ತೆಂಕಣ ದಿಕ್ಕಿಗೆ ಕಳುಹಿಸಿದ್ದು

• ಹಿಂದಿನ ಸಂಚಿಕೆಯಿಂದ

## 121 ನೆಯ ಅಧ್ಯಾಯ

ಅಲ್ಲಿಂದ ಮುಂದೆ ಮಹಾಭಯಂಕರವಾದ ಪಿತೃಲೋಕಗಳಿರುವುವು. ಅಲ್ಲಿ ಅಂಧಕಾರವು ಕವಿದಿರುವ ಯಮನ ಪಟ್ಟಣವಿರುವುದು. ಆ ದಿಕ್ಕು ನಿಮಗೆ ಹೊಕ್ಕು ನೋಡುವುದಕ್ಕೆ ಅಶಕ್ಯವಾದದ್ದು. ಅಲ್ಲಿಂದ ಮುಂದೆ ಯಾರಿಗೂ ಸಂಚರಿಸಲು ಶಕ್ಯವಲ್ಲ. ಈಗ ನಾನು ಹೇಳಿದ ಸಮಸ್ತ ಪ್ರದೇಶಗಳಲ್ಲಿಯೂ ಸೀತಾದೇವಿಯನ್ನು ಹುಡುಕಿಕೊಂಡು ಬನ್ನಿ. ಸೀತಾದೇವಿಯನ್ನು ಕಂಡು ಆ ಸಂತೋಷವಾರ್ತೆಯನ್ನು ಹೇಳುವಾತನಿಗೆ ನನಗಿರುವ ಐಶ್ವರ್ಯಕ್ಕೆ ಸಮಾನವಾದ ಭಾಗ್ಯವನ್ನು ಕೊಟ್ಟು ಸುಖವಾಗಿರುವ ಹಾಗೆ ಮಾಡುವೆನು. ಆತನು ನನ್ನ ಪ್ರಾಣಗಳಿಗಿಂತಲೂ ವೆಗ್ಗಳವಾದ ಪ್ರಿಯಸಖನಾಗುವನು. ಆತನು ಅನೇಕ ಅಪರಾಧಗಳನ್ನು ಮಾಡಿದರೂ ನನ್ನ ಮಿತ್ರನಾಗಿಯೇ ಇರುವನು. ಎಲೈ ಕಪಿನಾಯಕರುಗಳಿರಾ, ನೀವು ಅನೇಕ ಸದುಣಗಳುಳ್ಳವರಾಗಿ ಸತ್ಕುಲಗಳಲ್ಲಿ ಅವತರಿಸಿದವರು.

ಅಪರಿಮಿತವಾದ ಬಲಪರಾಕ್ರಮವುಳ್ಳವರು. ನೀವು ಶ್ರೀರಾಮನ ಪಟ್ಟದ ರಾಣಿಯಾದ ಸೀತಾದೇವಿಯನ್ನು ಅರಸಿ ಕೊಂಡು ಬಂದು ವೆಗ್ಗಳವಾದ ಐಶ್ವರ್ಯವನ್ನೂ ಅವರಿಮಿತವಾದ ಕೀರ್ತಿಯನ್ನೂ ಪಡೆದು ಸುಖವಾಗಿರಿ ಎಂದು ಹೇಳಿದನು.

**ಸುಗ್ರೀವನು ಕಪಿಗಳನ್ನು ಪಡುವಣ ದಿಕ್ಕಿಗೆ ಕಳುಹಿಸಿದ್ದು**


ಈ ಪ್ರಕಾರ ಸುಗ್ರೀವನು ಅಂಗದನೇ ಮೊದಲಾದ ಕಪಿನಾಯಕರನ್ನು ತೆಂಕಣ ದಿಕ್ಕಿಗೆ ನೇಮಿಸಿ ತನಗೆ ಮಾವನಾಗಿ ತಾರಾದೇವಿಗೆ ತಂದೆಯಾಗಿ ಮಹಾಬಲಪರಾಕ್ರಮವುಳ್ಳ ಸುಷೇಣನೆಂಬ ಕಪಿಶ್ರೇಷ್ಠನನ್ನು ತನ್ನ ಮಾವನೆಂಬ ಗೌರವದಿಂದ ಕೈಮುಗಿದು ನಮಸ್ಕರಿಸಿದನು.

ಆಮೇಲೆ ಮರೀಚಿಬ್ರಹ್ಮನ ಮಗನೂ ಆನೇಕ ಕಪಿನಾಯಕರಿಗೆ ಅಧಿಪತಿಯ ಪರಾಕ್ರಮಶಾಲಿಯೂ ಬುದ್ಧಿವಂತನೂ ಗರುತ್ಮಂತನಂತೆ ಅತಿ ವೇಗವುಳ್ಳವನೂ ಆದ ಆರ್ಚಿಷ್ಮಂತನೆಂಬ ಕಪಿನಾಯಕನನ್ನೂ ಆತನ ತಮ್ಮಂದಿರಾದ ಕಪಿನಾಯಕರನ್ನೂ ಕರೆದು ಅವರೆಲ್ಲರನ್ನೂ ಕುರಿತು ಹೀಗೆಂದನು. ಎಲೈ ಕಪಿನಾಯಕರುಗಳಿರಾ, ನೀವು ಸುಷೇಣನನ್ನು ಮುಂದಿಟ್ಟುಕೊಂಡು ಆತನು ಹೇಳಿದಂತೆ ಕೇಳಿಕೊಂಡು ಪಡುವಣ ದಿಕ್ಕಿಗೆ ಹೋಗಿ ಸೀತಾದೇವಿಯನ್ನು ಹುಡುಕಿರಿ ಆ ದಿಕ್ಕಿನಲ್ಲಿರುವ ಸೌರಾಷ್ಟ್ರ ಬಾಹೀಕ ಮಂತಾದ ದೇಶಗಳಿಗೆ ಹೋಗಿ ಅಲ್ಲಿರುವ ಪಟ್ಟಣಗಳಲ್ಲಿಯೂ ಪುನ್ನಾಗ ಕುಕ್ಷಿ ತಾಳೆವನಗಳಲ್ಲಿಯೂ ಸಮುದ್ರಗಾಮಿನಿಗಳಾದ ನದಿಗಳಲ್ಲಿಯೂ ಋಷಿಗಳ ಆಶ್ರಮಗಳಲ್ಲಿಯೂ ಅರಣ್ಯಗಳಲ್ಲಿಯೂ ಪರ್ವತಗಳಲ್ಲಿಯೂ ಕಲ್ಲು ಭೂಮಿಗಳುಳ್ಳ ಸ್ಥಳಗಳಲ್ಲಿಯೂ ನೋಡಿ. ಅಲ್ಲಿಂದ ಸಮುದ್ರತೀರಕ್ಕೆ ಹೋಗಿ ಅಲ್ಲಿ ಅನೇಕವಾಗಿರುವ ತಾಳೆಯ ವನಗಳಲ್ಲಿಯೂ ತೆಂಗಿನ ತೋಪುಗಳಲ್ಲಿಯೂ ಪರ್ವತಗಳಲ್ಲಿಯೂ ವನಾಂತರಗಳಲ್ಲಿಯೂ ನೋಡಿ.

ಮುಂದುವರಿಯುವುದು...

# ಪತಿ ಪತ್ನಿಯರ ಬಾಂಧವ್ಯ...

*ಪತಿಯನ್ನು ಪೂಜಿಸುತ ನಡೆಯುತಿರೆ ಮನೆಯಲಿಯೆ*
*ಸತಿಯಲ್ಲಿ ಪ್ರೀತಿಯನು ತೋರುತಿರಲು*
*ಗತಿಯಿರದೆ ಹೋಗದಿರಿ ಬೇರೆಯದ ಸಂಬಂಧ*
*ಮತಿಯಿನನು ಆಗದಿರಿ ಲಕ್ಷ್ಮಿ ದೇವಿ.*



ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ ಹಾಸನ್
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

ಈ ಮೇಲಿನ ಮುಕ್ತ ಕದಂತೆ ಪತಿಯನ್ನು ಪೂಜಿಸುತ್ತಾ ನಡೆಯುವುದು ನಮ್ಮ ಸಂಸ್ಕೃತಿ. ಅದೇ ರೀತಿ ಸತಿಯನ್ನು ಪ್ರೀತಿಸುತ್ತ ರಕ್ಷಣೆಯನ್ನು ನೀಡುವುದು ಪತಿಯ ಧರ್ಮ. ಇದರಲ್ಲಿ ಯಾವುದೇ ವ್ಯತ್ಯಾಸವಾದರೂ ಸಂಸಾರ ಸಂಸಾರವಾಗಿರುವುದಿಲ್ಲ.ಒಂದು ಕುಟುಂಬ ಎಂದ ಮೇಲೆ ಹಲವಾರು ಸಮಸ್ಯೆಗಳು ಬರುವುದು ಸಹಜ. ಯಾವ ಸಂಸಾರದಲ್ಲಿ ಸಮಸ್ಯೆಗಳಿಲ್ಲ ಹೇಳಿ. ಅದನ್ನೆಲ್ಲ ನಿಭಾಯಿಸಿಕೊಂಡು ಹೋಗುವುದೇ ಜೀವನ .

ಇಂದಿನ ದಿನಮಾನದಲ್ಲಿ ಸಹಜವಾಗಿ ಕಾಣುತ್ತಿರುವುದು. ಅನೈತಿಕ ಸಂಬಂಧಗಳು, ಅಂತಹ ಸಂಬಂಧಗಳಿಗೆ ಬೆಲೆ ಕೊಡದೆ ಸಂಸಾರದಲ್ಲಿ ಸರಿಯಾಗಿ ಜೀವನವನ್ನು ಮಾಡಬೇಕು. ಅನೈತಿಕ ಸಂಬಂಧಗಳಿಂದ ಸಂಸಾರವು ಅಲ್ಲೋಲಕಲ್ಲೋಲವಾಗುತ್ತಿದೆ. ಇಂತಹ ನಡತೆ ಒಳ್ಳೆಯದಲ್ಲ.

ಪುರುಷ, ಸ್ತ್ರೀ ಜೀವನದಲ್ಲಿ ಒಳ್ಳೆಯ ಸದ್ಮಾರ್ಗದಲ್ಲಿ ಬಾಳಬೇಕು ಎಂಬುದು ಈ ಮುಕ್ತಕದ ವಿಷಯವಾಗಿದೆ. ಪ್ರತಿಯೊಂದು ಸಂಬಂಧಕ್ಕೂ ನಂಬಿಕೆ ಮುಖ್ಯ. ಅಂತಹ ನಂಬಿಕೆಯನ್ನು ಉಳಿಸಿಕೊಳ್ಳುವುದು ಬಹಳ ಕಷ್ಟ. ಆ ನಂಬಿಕೆಯನ್ನು ಉಳಿಸಿಕೊಂಡವೆಂದರೆ ಸಂಸಾರದಲ್ಲಿ ಯಾವುದೇ ಅಡೆತಡೆಗಳು ಬಂದರೂ ಎಲ್ಲಾ ಒಗ್ಗಟ್ಟಿನಲ್ಲಿ ಬಗೆಹರಿಸಲು ಸಿದ್ಧರಾಗುತ್ತಾರೆ. ಅಂತಹ ಸಂಬಂಧದಲ್ಲಿ ಪತಿ ಪತ್ನಿಯ ಸಂಬಂಧ ಬಹಳ ಮುಖ್ಯವಾದ ಸಂಬಂಧ.

ಪತಿ ಪತ್ನಿಯಲ್ಲಿ ಹೊಂದಾಣಿಕೆ ಎಂಬುದು ಮುಖ್ಯ. ಅಂತಹ ಹೊಂದಾಣಿಕೆಯನ್ನು ಯಾವುದೇ ಪರಿಸ್ಥಿತಿಯಲ್ಲೂ ಬಿರುಕು ಬೀಳದಂತೆ ನೋಡಿಕೊಂಡು ಜೀವಿಸುವುದು ಮುಖ್ಯ. ಜನುಮ ಜನುಮಕ್ಕು ಇವರೇ ಮತ್ತೆ ಸಿಗುವ ರೀತಿಯಲ್ಲಿ ಸಂಬಂಧ ಇರಬೇಕು. ಎಲ್ಲಾ ಸಂಬಂಧಗಳಲ್ಲಿ ಪವಿತ್ರವಾದ ಸಂಬಂಧವೆಂದರೆ ಗಂಡ ಹೆಂಡತಿಯ ಸಂಬಂಧ.

ಮದುವೆಯಾಯಿತು, ಮಕ್ಕಳಾಯಿತು, ಸಂಸಾರದಲ್ಲಿ ನೆಮ್ಮದಿ ಇಲ್ಲ ಎಂಬುದು ಪ್ರತಿಯೊಬ್ಬರ ಮಾತಿನಲು ಕಾಣುತ್ತೇವೆ. ನೂರರಲ್ಲಿ ಎರಡು ಮೂರು ಸಂಸಾರ ಮಾತ್ರ ನಾನು ಸುಖವಾಗಿದ್ದೇನೆ ಎನ್ನುತ್ತಾರೆ. ಏಕೆಂದರೆ ಅವರಿಗೆ ಯಾವುದೇ ಸಮಸ್ಯೆ ಬಂದರೂ ಎದುರಿಸುವ ಶಕ್ತಿ ಇರುತ್ತದೆ. ನಂಬಿಕೆ ಎಂಬುದು ಬಲವಾಗಿ ನಿಂತಿರುತ್ತದೆ.

ಗಂಡ ಹೆಂಡತಿ ಗಿಳಿ ಮತ್ತು ಮೈನಾದಂತೆ,ಒಂದು ಇನ್ನೊಂದಿಲ್ಲದೆ ಇರಲು ಸಾಧ್ಯವಿಲ್ಲ. ಲಕ್ಷಾಂತರ ಜನರು ಪರಸ್ಪರ ಜಗಳವಾಡುತ್ತಾರೆ. ಮತ್ತೆ ಒಂದಾಗುತ್ತಾರೆ ,ಇಬ್ಬರೂ ಕೊನೆಯವರೆಗೂ ಜೊತೆಗಿರಬೇಕು. ನಿಜವಾದ ಸಂತೋಷ ಕೂಡ ಅದೇ ಎಂದು ನಂಬಲು,ಹೆಂಡತಿ ಇಲ್ಲದವನನ್ನು ಕೇಳಿ ಅವನ ಕಷ್ಟ ಅವನಿಗೆ ತಿಳಿದಿರುತ್ತದೆ.ಅದನ್ನು ತಮಾಷೆಗೆ ತೆಗೆದುಕೊಳ್ಳಬೇಡಿ, ಹೆಂಡತಿ ಇಲ್ಲದವನನ್ನು ಕೇಳಿ. ಅವನ ದಿನನಿತ್ಯದ ಕಷ್ಟಗಳನ್ನು ಎಳೆ ಎಳೆಯಾಗಿ ಹೇಳುತ್ತಾನೆ.ಗಂಡ ಮತ್ತು ಹೆಂಡತಿ ಪರಸ್ಪರ ಬೆಂಬಲವಾಗಿರಬೇಕು. ಪರಸ್ಪರ ನಿಷ್ಠರಾಗಿರಿ, ಜೀವನದಲ್ಲಿ ಕಷ್ಟ ಸುಖ ಎರಡೂ ಸಂಭವಿಸುತ್ತವೆ. ಗಂಡ ಹೆಂಡತಿ ಎಂದರೆ ವೃದ್ಧಾಪ್ಯದ ಹಂತದವರೆಗೂ ಆಸರೆ ಆಗಿರಬೇಕು. ಯಾವುದೇ ಮನೆಯ ಸ್ಥಿತಿ ಪ್ರೀತಿ ವಿಶ್ವಾಸದ ಬುನಾದಿಯಲ್ಲಿರಬೇಕು .ಹೆಂಡತಿ ಇಲ್ಲದೇ ಇರುವ ಗಂಡನಿಗೆ ಹೆಂಡತಿಯ ಸ್ಥಾನದ ಪರಿಪೂರ್ಣ ಅರಿವಿರುತ್ತದೆ.




ಹೆಂಡತಿ ಇಲ್ಲದವನಿಗೆ ಗೊತ್ತು ಸ್ತ್ರೀಯು ಮಹಾ ಲಕ್ಷ್ಮಿ ಅವಳು ಅವನಿಗಿಂತ ಬಲಶಾಲಿ ಎಂದು .ಹೆಂಡತಿ ಇಲ್ಲದೆ ಅನಾಥ ಸ್ಥಿತಿ ತನ್ನದು ಎಂಬುದು ಇಲ್ಲದಿದ್ದಾಗ ಅರಿವಾಗುತ್ತದೆ.

ಹಾಗೆಯೇ ಗಂಡ ಇಲ್ಲದಿದ್ದರೂ ಸ್ತ್ರೀಯು ಮಕ್ಕಳ ಮುಖ ನೋಡಿಕೊಂಡು ಜೀವನ ಪೂರ್ತಿ ಸನ್ಯಾಸಿಯಂತೆ ಮಕ್ಕಳ ಲಾಲನೆ ಪಾಲನೆಯಲ್ಲಿ ಗಮನಹರಿಸುತ್ತ ಜೀವಿಸುತ್ತಾಳೆ , ಈ ರೀತಿಯ ಕಾರ್ಯವನ್ನು ನೀವು ಸಹಾಯ ಮಾಡಿದಾಗ ಜೀವನ ಸಾರ್ಥಕವಾಗುತ್ತದೆ., ಸುಂದರ ಹೆಂಡತಿ ಬೇಕು.

ಒಬ್ಬ ಪುರುಷನು ಹೆಂಡತಿಯಿಲ್ಲದೆ ಅರ್ಧ,ಹೆಂಡತಿ ಇಲ್ಲದೆ ಯಾರೂ ಸಹಾಯ ಮಾಡುವುದಿಲ್ಲ.

ಸೊಸೆ ಮತ್ತು ಮಗ ತಮ್ಮ ಮಕ್ಕಳನ್ನು ನೋಡಿದರು,ಬಡ ಅಪರಿಚಿತರು ಏನು ನೋಡಬೇಕು. ಜೀವನದಲ್ಲಿ ನಿಜವಾದ ಸಂಗಾತಿ, ಗಂಡ ಮತ್ತು ಹೆಂಡತಿ,ಒಬ್ಬರಿಗೊಬ್ಬರು ಗಂಡ ಅಥವಾ ಹೆಂಡತಿಯನ್ನು ಜೊತೆಯಾಗಿ ಜೀವನ ಪೂರ್ತಿ ಬಾಳಲಿ ಎಂಬ ಆಸೆಗೆ ಮದುವೆ ಮಾಡುತ್ತಾರೆ.

ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಮದುವೆಗೆ ವಿಶೇಷ ಸ್ಥಾನವಿದೆ.

ಮುಂದುವರೆಯುವುದು....

**ಕ್ರಿಕೆಟ್ ಎನ್ನುವುದು ಭಾರತದಲ್ಲಿ ಕೇವಲ ಆಟವಲ್ಲ; ಅದು ಕೋಟ್ಯಾಂತರ ಅಭಿಮಾನಿಗಳ ಭಾವನೆಗಳೊಂದಿಗೆ ಬೆಸೆದುಕೊಂಡಿರುವ ಹಬ್ಬದಂತದ್ದು. ಈ ದಿನ ನಡೆದ ಟಿ20 ಪಂದ್ಯದಲ್ಲಿ ಭಾರತ ತಂಡ ನ್ಯೂಜಿಲ್ಯಾಂಡ್ ವಿರುದ್ಧ ಅದ್ಭುತ ಪ್ರದರ್ಶನ ನೀಡಿ ಭರ್ಜರಿ ಜಯ ಸಾಧಿಸಿದೆ. ಆರಂಭದಿಂದ ಅಂತ್ಯದವರೆಗೆ ತಂಡದ ಆಟಗಾರರು ತೋರಿಸಿದ ಶಕ್ತಿ, ಶಿಸ್ತಿನ ಆಟ ಮತ್ತು ಆತ್ಮವಿಶ್ವಾಸ ಈ ಗೆಲುವಿನ ಪ್ರಮುಖ ಕಾರಣಗಳಾಗಿವೆ. ಈ ಪಂದ್ಯವು ಭಾರತೀಯ ಕ್ರಿಕೆಟ್ ಅಭಿಮಾನಿಗಳಿಗೆ ಮರೆಯಲಾಗದ ಕ್ಷಣಗಳನ್ನು ನೀಡಿದೆ.**



ವಿಶ್ವಾಸ್.ಡಿ.ಗೌಡ

# ಭಾರತದ ಅದ್ಭುತ ಜಯ

## ನ್ಯೂಜಿಲ್ಯಾಂಡ್ ವಿರುದ್ಧ ಟಿ20 ಕ್ರಿಕೆಟ್‌ನಲ್ಲಿ ಐತಿಹಾಸಿಕ ಸಾಧನೆ

ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ ಆರಂಭದಲ್ಲೇ ದಿಟ್ಟ ಪ್ರದರ್ಶನ ನೀಡಿತು.

ಆರಂಭಿಕ ಆಟಗಾರರು ದಾಳಿಯುತವಾಗಿ ಬ್ಯಾಟಿಂಗ್ ಮಾಡಿ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ವಿಶೇಷವಾಗಿ ಸಂಜು ಸ್ಯಾಮ್ಸನ್ ಅವರು ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿ ಆಕರ್ಷಕ ಅರ್ಧಶತಕದೊಂದಿಗೆ ತಂಡದ ಮೊತ್ತವನ್ನು ವೇಗವಾಗಿ ಹೆಚ್ಚಿಸಿದರು.

ಅವರ ಶಾಟ್‌ಗಳು ಕ್ರೀಡಾಂಗಣದಲ್ಲಿ ಕುಳಿತಿದ್ದ ಅಭಿಮಾನಿಗಳನ್ನು ರಂಜಿಸಿದವು. ಮತ್ತೊಂದೆಡೆ ಇಶಾನ್ ಕಿಶನ್ ಕೂಡ ವೇಗದ ಬ್ಯಾಟಿಂಗ್ ಮೂಲಕ ತಂಡದ ರನ್‌ಗಳ ವೇಗವನ್ನು ಹೆಚ್ಚಿಸಿದರು. ಇವರಿಬ್ಬರ ಸಹಭಾಗಿತ್ವದಿಂದ ಭಾರತ ದೊಡ್ಡ ಮೊತ್ತವನ್ನು ಕಲೆಹಾಕುವಲ್ಲಿ ಯಶಸ್ವಿಯಾಯಿತು.

ಭಾರತ ತಂಡದ ಮಧ್ಯಮ ಕ್ರಮದ ಬ್ಯಾಟ್ಸ್‌ಮನ್‌ಗಳೂ ಕೂಡ ತಮ್ಮ ಪಾತ್ರವನ್ನು ಚೆನ್ನಾಗಿ ನಿರ್ವಹಿಸಿದರು. ಅವರು ಶಾಂತವಾಗಿ ಆಟ ಆಡುತ್ತಾ ರನ್‌ಗಳನ್ನು ಗಳಿಸಿ ತಂಡದ ಒಟ್ಟು ಮೊತ್ತವನ್ನು ಮತ್ತಷ್ಟು ಬಲಪಡಿಸಿದರು. ಪರಿಣಾಮವಾಗಿ ಭಾರತ ತಂಡ ನಿಗದಿತ 20 ಓವರ್‌ಗಳಲ್ಲಿ ಭಾರೀ ಮೊತ್ತವನ್ನು ಗಳಿಸಿ ನ್ಯೂಜಿಲ್ಯಾಂಡ್ ತಂಡದ ಮೇಲೆ ಒತ್ತಡವನ್ನು ಹೆಚ್ಚಿಸಿತು.

ಬ್ಯಾಟಿಂಗ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಬಳಿಕ ಭಾರತೀಯ ಬೌಲರ್‌ಗಳು ಕೂಡ ತಮ್ಮ ಸಾಮರ್ಥ್ಯವನ್ನು ತೋರಿಸಿದರು. ಜಸ್ಪ್ರೀತ್ ಬುಮ್ರಾ ಅವರ ಬೌಲಿಂಗ್ ಅತ್ಯಂತ ಪರಿಣಾಮಕಾರಿ ಆಗಿತ್ತು. ಅವರ ವೇಗ ಮತ್ತು ನಿಖರತೆ ನ್ಯೂಜಿಲ್ಯಾಂಡ್ ಬ್ಯಾಟ್ಸ್‌ಮನ್‌ಗಳನ್ನು ಸಂಕಷ್ಟಕ್ಕೆ ತಳ್ಳಿತು. ಅವರು ಪ್ರಮುಖ ವಿಕೆಟ್‌ಗಳನ್ನು ಪಡೆದು ಎದುರಾಳಿ ತಂಡದ ಬೆನ್ನು ಮುರಿದರು. ಅಕ್ಷರ್ ಪಟೇಲ್ ಕೂಡ ಸ್ಪಿನ್ ಬೌಲಿಂಗ್ ಮೂಲಕ ಮಹತ್ವದ ವಿಕೆಟ್‌ಗಳನ್ನು ಪಡೆದು ತಂಡಕ್ಕೆ ಬಲ ನೀಡಿದರು.

ನ್ಯೂಜಿಲ್ಯಾಂಡ್ ತಂಡ ಆರಂಭದಲ್ಲೇ ಒತ್ತಡಕ್ಕೆ ಒಳಗಾಯಿತು. ಭಾರತೀಯ ಬೌಲರ್‌ಗಳ ನಿಯಂತ್ರಿತ ಬೌಲಿಂಗ್ ಮತ್ತು ಉತ್ತಮ ಫೀಲ್ಡಿಂಗ್ ಕಾರಣದಿಂದ ಅವರು ದೊಡ್ಡ ಸಹಭಾಗಿತ್ವಗಳನ್ನು ನಿರ್ಮಿಸಲು ಸಾಧ್ಯವಾಗಲಿಲ್ಲ. ಕ್ರಮೇಣ ವಿಕೆಟ್‌ಗಳು ಬೀಳುತ್ತಾ ಬಂದಂತೆ ತಂಡದ ಮೇಲೆ ಒತ್ತಡ ಹೆಚ್ಚಾಯಿತು. ಅಂತಿಮವಾಗಿ ಅವರು ಭಾರತ ನೀಡಿದ ಭಾರೀ ಗುರಿಯನ್ನು ತಲುಪಲು ವಿಫಲರಾದರು.




ಈ ಪಂದ್ಯದಲ್ಲಿ ಭಾರತೀಯ ತಂಡದ ಫೀಲ್ಡಿಂಗ್ ಕೂಡ ಪ್ರಶಂಸನೀಯವಾಗಿತ್ತು. ಆಟಗಾರರು ವೇಗವಾಗಿ ಚೆಂಡುಗಳನ್ನು ಹಿಡಿದು, ರನ್‌ಗಳನ್ನು ತಡೆಯುವ ಮೂಲಕ ಎದುರಾಳಿ ತಂಡದ ಮೇಲೆ ನಿರಂತರ ಒತ್ತಡವನ್ನು ಉಳಿಸಿದರು. ಇದು ತಂಡದ ಒಟ್ಟಾರೆ ಗೆಲುವಿಗೆ ಪ್ರಮುಖ ಕಾರಣವಾಯಿತು. ಈ ಜಯವು ಭಾರತೀಯ ಕ್ರಿಕೆಟ್ ತಂಡದ ಶಕ್ತಿ ಮತ್ತು ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ತಂಡದ ಆಟಗಾರರ ಒಗ್ಗಟ್ಟು, ಶ್ರಮ ಮತ್ತು ಗೆಲ್ಲುವ ಮನೋಭಾವ ಈ ಯಶಸ್ಸಿಗೆ ಕಾರಣವಾಗಿದೆ. ಇಂತಹ ಅದ್ಭುತ ಪ್ರದರ್ಶನಗಳು ಯುವ ಆಟಗಾರರಿಗೆ ಪ್ರೇರಣೆಯಾಗಿ ಪರಿಣಮಿಸುತ್ತವೆ.

ಒಟ್ಟಿನಲ್ಲಿ, ನ್ಯೂಜಿಲ್ಯಾಂಡ್ ವಿರುದ್ಧ ಭಾರತ ಸಾಧಿಸಿದ ಈ ಟಿ20 ಗೆಲುವು ಕ್ರಿಕೆಟ್ ಇತಿಹಾಸದಲ್ಲಿ ಒಂದು ವಿಶೇಷ ಕ್ಷಣವಾಗಿ ಉಳಿಯುತ್ತದೆ.

ಅಭಿಮಾನಿಗಳ ಹೃದಯದಲ್ಲಿ ಸಂತೋಷದ ಅಲೆ ಮೂಡಿಸಿದ ಈ ಜಯ ಮುಂದಿನ ಪಂದ್ಯಗಳಿಗೆ ಮತ್ತಷ್ಟು ಆತ್ಮವಿಶ್ವಾಸವನ್ನು ತುಂಬಲಿದೆ. ಭಾರತೀಯ ತಂಡ ಇದೇ ರೀತಿಯ ಪ್ರದರ್ಶನ ಮುಂದುವರಿಸಿ ವಿಶ್ವಕ್ರಿಕೆಟ್‌ನಲ್ಲಿ ತನ್ನ ಪ್ರಾಬಲ್ಯವನ್ನು ಮತ್ತಷ್ಟು ಬಲಪಡಿಸಲಿ ಎಂಬುದು ಎಲ್ಲಾರ ಆಶಯವಾಗಿದೆ.

# ಅಧಿಕ ನೀರು ಸೇವನೆ ಮಾರಕ

ಕುಟುಂಬ ಪ್ರವಾಸದಲ್ಲಿದ್ದ 35 ವರ್ಷದ, ಎರಡು ಮಕ್ಕಳ ತಾಯಿಯೊಬ್ಬರು ಹೆಚ್ಚು ನೀರು ಕುಡಿದು ಮೃತಪಟ್ಟ ಘಟನೆ ಇಂಡಿಯಾನಾದಿಂದ ವರದಿಯಾಗಿದೆ. ಆಪ್ಲೆ ಸಮ್ಮರ್ಸ್ ಡೀಹೈಡೇಷನ್‌ನಿಂದಾಗಿ ತಲೆನೋವು ಹಾಗೂ ತಲೆ ಹಗುರವಾದ ಅನುಭವ ಆದ ಬಳಿಕ ಅವರು 1.89 ಲೀಟರ್ ನೀರು ಕುಡಿದರು. ಬಳಿಕ ಕುಸಿದು ಬಿದ್ದ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತಾದರೂ ಅವರಿಗೆ ಪ್ರಜ್ಞೆ ಮರುಕಳಿಸಲೇ ಇಲ್ಲ.

ಆಸ್ಪತ್ರೆಯ ವೈದ್ಯರ ತಂಡದ ಪ್ರಕಾರ, ಈ ಮಹಿಳೆಗೆ ವಾಟರ್ ಇನ್‌ಟಾಕ್ಸಿಕೇಶನ್ ಅಥವಾ ಅಧಿಕ ನೀರಿನಿಂದಾಗಿ ವಿಷಪ್ರಾಶನವಾಗಿದೆ. ತೀರಾ ಕಡಿಮೆ ಅವಧಿಯಲ್ಲಿ ಹೆಚ್ಚು ನೀರು ಕುಡಿಯುವುದರಿಂದ ಆಗುವ ಪರಿಸ್ಥಿತಿ ಇದಾಗಿದೆ. ಡೀಹೈಡೇಷನ್ ಅಥವಾ ವಾಟರ್ ಇನ್‌ಟಾಕ್ಸಿಕೇಶನ್ ಎರಡೂ ದೇಹದ ದ್ರವಾಂಶದ ಅಸಮತೋಲನದಿಂದ ಉಂಟಾಗುತ್ತದೆ. ಇವೆರಡೂ ಮಾರಕ. ಜೀವಕ್ಕೆ ನೀರು ಅತ್ಯಗತ್ಯ ದೇಹದ ಕಾರ್ಯಗಳು ಸುಗಮವಾಗಿ ಸಾಗಲು ಮತ್ತು ಒಟ್ಟಾರೆ ಆರೋಗ್ಯ ಕಾಪಾಡಲು ಇದು ಪ್ರಮುಖ ಪಾತ್ರ ವಹಿಸುತ್ತದೆ. ಜೀವನದಲ್ಲಿ ಇತರ ಎಲ್ಲಾ ಅಂಶಗಳಂತೆ ಇದು ಕೂಡಾ ಸಾಧಾರಣವಾಗಿರಬೇಕಾದದ್ದು ಅಗತ್ಯ ದ್ರವಾಂಶದ ಅಸಮತೋಲನದಿಂದ ಉಂಟಾಗುವ ಡೀಹೈಡೇಷನ್ ಹಾಗೂ ವಾಟರ್ ಇನ್‌ಟಾಕ್ಸಿಕೇಶನ್ ಎರಡೂ ಅಪಾಯಕಾರಿ. ಸುಕ್ಷೇಮ ಕಾಪಾಡಲು ಈ ಬಗ್ಗೆ ಅರಿವು ಇರಬೇಕಾದ್ದು ಮುಖ್ಯ ಎನ್ನುತ್ತಾರೆ ಆಂತರಿಕ ಔಷಧ ತಜ್ಞ ಡಾ.ಅನುರಾಗ್ ಅಗಾಲ್.

ವಾಟರ್ ಇನ್‌ಟಾಕ್ಸಿಕೇಶನ್ ಅನ್ನು ಓವರೊಡೇಷನ್ ಅಥವಾ ಜಲ ವಿಷಪ್ರಾಶನ ಎಂದು ಕರೆಯುತ್ತಾರೆ. ಅಧಿಕ ನೀರು ಸೇವಿಸುವುದರಿಂದ ಇದು ಸಂಭವಿಸುತ್ತದೆ. ಇದು ರಕ್ತ ಪ್ರವಾಹಕ್ಕೆ ಅಗತ್ಯವಾದ ಎಲೆಕ್ಟ್ರೋಲೇಟ್‌ಗಳು ದುರ್ಬಲವಾಗಲು ಕಾರಣವಾಗುತ್ತದೆ ಹಾಗೂ ಹಲವು ಗಂಭೀರ ಪರಿಣಾಮಗಳು ಎದುರಾಗುತ್ತವೆ. ತಲೆನೋವು, ವಾಕರಿಕೆ, ಗೊಂದಲದಂಥ ಸೌಮ್ಯ ಲಕ್ಷಣಗಳು ಕಂಡುಬರುತ್ತವೆ. ಇದು ಅಧಿಕವಾದರೆ ವಾಂತಿ, ಪಾಶ್ರವಾಯು, ಕೋಮಾದಂಥ ತೀವ್ರ ಸ್ಥಿತಿಗೂ ಕಾರಣವಾಗಬಹುದು.

ಅಂತೆಯೇ ಡೀಹೈಡೇಷನ್ ಎಂದರೆ ದೇಹದಲ್ಲಿ ನೀರಿನ ಅಂಶ ಕಡಿಮೆಯಾಗಿ ಸಾಮಾನ್ಯ ದೈಹಿಕ ಕಾರ್ಯಗಳಿಗೆ ತೊಂದರೆ ಉಂಟಾಗುವುದು. ಒಣಗಿದ ಬಾಯಿ, ಮಂಪರು, ಸುಸ್ತು ಇತ್ಯಾದಿಗಳು ಇದರ ಲಕ್ಷಣ. ಇದರ ತೀವ್ರ ಸ್ವರೂಪವೆಂದರೆ ಅಂಗಾಂಗ ವೈಫಲ್ಯ

ಈ ಎರಡೂ ಸ್ಥಿತಿಗಳು ಅಪಾಯಕಾರಿ. ಈ ಅಸಮತೋಲನವು ವ್ಯಕ್ತಿಯಿಂದ ವ್ಯಕ್ತಿಗೆ ಬದಲಾಗಬಹುದು. ತೀವ್ರ ಡೀಹೈಡೇಷನ್ ಎಲೆಕ್ಟ್ರೋಲೈಟ್ ಅಸಮತೋಲನ, ಕಿಡ್ನಿ ವೈಫಲ್ಯ ಜೀವಾಪಾಯದ ಸಂಕೀರ್ಣತೆಗಳಿಗೆ ಕಾರಣವಾಗಬಹುದು. ಜಲವಿಶಪ್ರಾಶನ ತೀರಾ ಅಪರೂಪವಾದರೂ, ಎಲೆಕ್ಟ್ರೋಲೈಟ್ ಅಸಮತೋಲನದಿಂದಾಗಿ ಪ್ರಾಣಾಪಾಯ ಅಧಿಕ. ಅಸಮತೋಲನ ಅತ್ಯಧಿಕವಾದಾಗ ಅಂಗಾಂಗ ವೈಫಲ್ಯ ಹಾಗೂ ಮೆದುಳಿನ ಊತ ಕಾಣಿಸಿಕೊಳ್ಳಬಹುದು. ಅಥ್ಲೀಟ್‌ಗಳಿಗೆ ಈ ಅಪಾಯ ಸಾಧ್ಯತೆ ಅಧಿಕ.




# ಅಧಿಕ ರಕ್ತದೊತ್ತಡ ಮೆದುಳಿನ ರಕ್ತಸ್ರಾವದ ಅಪಾಯವನ್ನು ಹೆಚ್ಚಿಸುತ್ತದೆಯೇ

**ಅಧಿಕ ರಕ್ತದೊತ್ತಡವು ಒಂದು ಅಪಾಯಕಾರಿ ಕಾಯಿಲೆಯಾಗಿದ್ದು, ಇದನ್ನು ನಿಯಂತ್ರಣದಲ್ಲಿಟ್ಟುಕೊಳ್ಳದಿದ್ದರೆ ಅದು ಮೆದುಳಿನ ನರವನ್ನು ದುರ್ಬಲಗೊಳಿಸಿ ಮೆದುಳಿನ ಪಾರ್ಶ್ವವಾಯುವಿಗೆ ಕಾರಣವಾಗಬಲ್ಲದು. ಇದನ್ನು ಆಯುರ್ವೇದದ ಮೂಲಕ ಯಾವ ರೀತಿ ನಿಯಂತ್ರಣದಲ್ಲಿಟ್ಟುಕೊಳ್ಳಬಹುದು ತಿಳಿಯೋಣ.**





ಅಧಿಕ ರಕ್ತದೊತ್ತಡವು ದೀರ್ಘಕಾಲದವರೆಗೆ ಅನಿಯಂತ್ರಿತವಾಗಿದ್ದರೆ ಮೆದುಳಿನ ರಕ್ತಸ್ರಾವದ ಅಪಾಯವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಆಯುರ್ವೇದ ದೃಷ್ಟಿಕೋನದಿಂದ, ಅಧಿಕ ರಕ್ತದೊತ್ತಡವನ್ನು ವಾತ ಮತ್ತು ಪಿತ್ತ ದೋಷಗಳ ಅಸಮತೋಲನವನ್ನು ಒಳಗೊಂಡಿರುವ ಮನೋದೈಹಿಕ ಸ್ಥಿತಿ ಎಂದು ಅರ್ಥೈಸಲಾಗುತ್ತದೆ. ಈ ದೋಷಗಳು ಉಲ್ಬಣಗೊಂಡಾಗ, ಅವು ದೇಹದ ಆಂತರಿಕ ಚಾನಲ್‌ಗಳನ್ನು ನಿರ್ಬಂಧಿಸಬಹುದು, ಇದನ್ನು ಸ್ರೋತಗಳು (ದೇಹದ ಮಾರ್ಗಗಳು) ಎಂದು ಕರೆಯಲಾಗುತ್ತದೆ, ಇದು ರಕ್ತನಾಳಗಳಲ್ಲಿ ಒತ್ತಡವನ್ನು ಹೆಚ್ಚಿಸುತ್ತದೆ.

**ಮೆದುಳಿನಲ್ಲಿರುವ ಸೂಕ್ಷ್ಮ ರಕ್ತನಾಳವನ್ನು ದುರ್ಬಲಗೊಳಿಸಬಹುದು**

ಕಾಲಾನಂತರದಲ್ಲಿ ನಿರಂತರ ಅಧಿಕ ರಕ್ತದೊತ್ತಡವು ಮೆದುಳಿನಲ್ಲಿರುವ ಸೂಕ್ಷ್ಮ ರಕ್ತನಾಳಗಳನ್ನು ದುರ್ಬಲಗೊಳಿಸಬಹುದು, ಛಿದ್ರ ಮತ್ತು ಮೆದುಳಿನ ರಕ್ತಸ್ರಾವದ ಸಾಧ್ಯತೆಯನ್ನು ಹೆಚ್ಚಿಸುತ್ತದೆ.

ಇದು ಪಾರ್ಶ್ವವಾಯು, ಮಾತಿನ ಅಸ್ಪಷ್ಟತೆ, ರೋಗಗ್ರಸ್ತವಾಗುವಿಕೆಗಳು, ಸ್ಮರಣಶಕ್ತಿ ಕುಂದುವುದು ಮತ್ತು ಅರಿವಿನ ಸಮಸ್ಯೆಗಳು, ಪ್ರಜ್ಞೆ ಕಳೆದುಕೊಳ್ಳುವುದು ಮತ್ತು ತೀವ್ರತರವಾದ ಸಂದರ್ಭಗಳಲ್ಲಿ ಸಾವಿಗೂ ಕಾರಣವಾಗಬಹುದು ಎನ್ನುತ್ತಾರೆ ಅಪೋಲೋ ಆಯುರ್ವೇದದ ಹಿರಿಯ ಆಯುರ್ವೇದ ವೈದ್ಯೆ ಡಾ. ಸುಜಾತಾ ಕೆ.

**ಅಧಿಕ ರಕ್ತದೊತ್ತಡ**

ಅಧಿಕ ರಕ್ತದೊತ್ತಡ ಇರುವ ರೋಗಿಗಳು ಹೆಚ್ಚು ಚೀಸ್ ತಿನ್ನುವುದರಿಂದ ದೂರವಿರಬೇಕು. ಪನೀರ್‌ನಲ್ಲಿ ಹೆಚ್ಚಿನ ಪ್ರಮಾಣದ ಸೋಡಿಯಂ ಇರುತ್ತದೆ. ಆದ್ದರಿಂದ ಇದರ ಅತಿಯಾದ ಸೇವನೆಯು ಅಧಿಕ ರಕ್ತದೊತ್ತಡಕ್ಕೆ ಕಾರಣವಾಗಬಹುದು.

## ಅಧಿಕ ರಕ್ತದೊತ್ತಡದ ಲಕ್ಷಣಗಳು

- ಅಧಿಕ ರಕ್ತದೊತ್ತಡದ ಲಕ್ಷಣಗಳು ಆಗಾಗ್ಗೆ ತಲೆನೋವು
- ಮಾನಸಿಕ ಒತ್ತಡ
- ಉಸಿರಾಟದ ತೊಂದರೆ
- ನರಗಳ ಜುಮ್ಮೆನಿಸುವಿಕೆ
- ತಲೆತಿರುಗುವಿಕೆ
- ತ್ವರಿತ ಹೃದಯ ಬಡಿತವನ್ನು ಒಳಗೊಂಡಿರುತ್ತವೆ.

**ಆಯುರ್ವೇದ ಚಿಕಿತ್ಸೆ ಹೇಗೆ**

ನಿರ್ವಹಣೆಯು ಹೆಚ್ಚಾಗಿ ಶೋಧನ (ನಿರ್ವಿಶೀಕರಣ ಚಿಕಿತ್ಸೆಗಳು) ನೊಂದಿಗೆ ಪ್ರಾರಂಭವಾಗುತ್ತದೆ, ಇದು ದೇಹದಿಂದ ಸಂಗ್ರಹವಾದ ವಿಷವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಶಮನ ಮೂರು ದೋಷಗಳನ್ನು ಸಮತೋಲನಗೊಳಿಸುವ ಗುರಿಯನ್ನು ಹೊಂದಿರುವ (ಶಾಂತಿ ಚಿಕಿತ್ಸೆಗಳು). ನಂತರ ದೇಹವನ್ನು ಬಲಪಡಿಸಲು ಮತ್ತು ದೀರ್ಘಕಾಲೀನ ಆರೋಗ್ಯವನ್ನು ಬೆಂಬಲಿಸಲು ರಸಾಯನ (ಪುನರುಜ್ಜೀವನ ಚಿಕಿತ್ಸೆಗಳು) ಬಳಸಲಾಗುತ್ತದೆ.

**ಆಯುರ್ವೇದದ ಪ್ರಕಾರ ತಡೆಗಟ್ಟುವುದು ಹೇಗೆ**

ತಡೆಗಟ್ಟುವಿಕೆ ನಿದಾನ ಪರಿವರ್ತನ (ಕಾರಣಕಾರಕ ಅಂಶಗಳನ್ನು ತಪ್ಪಿಸುವುದು) ಮೇಲೆ ಬಲವಾಗಿ ಕೇಂದ್ರೀಕರಿಸುತ್ತದೆ. ಸಮತೋಲಿತ ಆಹಾರವನ್ನು ಕಾಪಾಡಿಕೊಳ್ಳುವುದು, ಒತ್ತಡವನ್ನು ನಿರ್ವಹಿಸುವುದು ಮತ್ತು ಆರೋಗ್ಯಕರ ಜೀವನಶೈಲಿಯ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ. ಬ್ರಾಹ್ಮಿ, ಜಟಮಾನ್ಸಿ, ಅರ್ಜುನ, ಸರ್ಪಗಂಧದಂತಹ ಆಯುರ್ವೇದ ಗಿಡಮೂಲಿಕೆಗಳು ರಕ್ತದೊತ್ತಡದ ಸಮತೋಲನವನ್ನು ಬೆಂಬಲಿಸಬಹುದು.

ಶಿರೋಧರ (ಹಣೆಯ ಮೇಲೆ ಸ್ಥಿರವಾದ ಸ್ಟ್ರೀಮ್ ಎಣ್ಣೆ ಚಿಕಿತ್ಸೆ), ಅಭ್ಯಂಗ (ಚಿಕಿತ್ಸಕ ಎಣ್ಣೆ ಮಸಾಜ್), ವಿರೇಚನ (ಶುದ್ಧೀಕರಣ ಚಿಕಿತ್ಸೆ) ಮತ್ತು ಬಸ್ತಿ (ಔಷಧೀಯ ಎನಿಮಾ ಚಿಕಿತ್ಸೆ) ಇಂತಹ ಪಂಚಕರ್ಮ ಚಿಕಿತ್ಸೆಗಳು ಒತ್ತಡವನ್ನು ಕಡಿಮೆ ಮಾಡಲು, ರಕ್ತಪರಿಚಲನೆಯನ್ನು ಸುಧಾರಿಸಲು ಮತ್ತು ದೋಷಿಕ್ ಸಮತೋಲನವನ್ನು ಪುನಃಸ್ಥಾಪಿಸಲು ಸಹಾಯ ಮಾಡುತ್ತದೆ.

## ರಕ್ತದೊತ್ತಡವನ್ನು ನಿಯಂತ್ರಿಸಲು ಏನು ಮಾಡಬೇಕು

- ರಕ್ತದೊತ್ತಡವನ್ನು ನಿಯಂತ್ರಿಸಲು
- ಸಾಕಷ್ಟು ನೀರು ಕುಡಿಯಿರಿ
- ಒತ್ತಡ-ಒತ್ತಡವನ್ನು ಕಡಿಮೆ ಮಾಡಿ
- ಸಮಯಕ್ಕೆ ಸರಿಯಾಗಿ ಆಹಾರವನ್ನು ಸೇವಿಸಿ
- ಜಂಕ್ ಫುಡ್ ತಿನ್ನಬೇಡಿ
- 6-8 ಗಂಟೆಗಳ ಕಾಲ ನಿದ್ರೆ ಮಾಡಿ ಮತ್ತು ಉಪವಾಸವನ್ನು ತಪ್ಪಿಸಿ.

ಉದಯ ವಾಹಿನಿ
ಪ್ರಾದೇಶಿಕ
ಮಂಗಳವಾರ
10 ಮಾರ್ಚ್ 2026


## ಸೌಹಾರ್ದತೆಯ ಇಫ್ತಿಯಾರ್ ಕೂಟ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಸವನಬಾಗೇವಾಡಿ

ಧರ್ಮಗಳ ಆಚರಣೆಗಳು ಬೇರೆಯಾಗಿದ್ದರೂ ಮನುಷ್ಯತ್ವ ಮತ್ತು ಸೌಹಾರ್ದತೆಯ ಸಂದೇಶ ಒಂದೇ ಆಗಿದೆ. ಬಸವಣ್ಣನವರ ತತ್ವ ಮತ್ತು ಇಸ್ಲಾಂ ಧರ್ಮದ ಸೋದರತ್ವದ ಗುಣಗಳು ಸಮಾಜವನ್ನು ಒಗ್ಗೂಡಿಸುವ ಶಕ್ತಿಯಾಗಿವೆ, ಎಂದು ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಅಭಿಪ್ರಾಯಪಟ್ಟರು.

ಸ್ಥಳೀಯ ಜಾಮಿಯಾ ಶಾದಿ ಮಹಲ್‌ನಲ್ಲಿ ರಾಷ್ಟ್ರೀಯ ಬಸವಸೈನ್ಯ ಹಾಗೂ ಜಮಾತ್-ಎ-ಇಸ್ಲಾಂ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಇಫ್ತಿಯಾರ್ ಸೌಹಾರ್ದ ಕೂಟ'ದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಬಸವಣ್ಣನವರ ಜನ್ಮಭೂಮಿಯಲ್ಲಿ ಇಂತಹ ಸೌಹಾರ್ದ ಕಾರ್ಯಕ್ರಮಗಳು ನಡೆಯುತ್ತಿರುವುದು ಸಂತಸದ ವಿಷಯ. ಜಾತಿ, ಮತದ ಭೇದ ಮರೆತು ಸಹಬಾಳ್ವೆಯ ಸಂದೇಶ ಸಾರಲು ಇಂತಹ ವೇದಿಕೆಗಳು ಅತ್ಯಗತ್ಯ ಎಂದರು. ಕಾರ್ಯಕ್ರಮದಲ್ಲಿ ಮಾತನಾಡಿದ ವಿಶ್ರಾಂತ ಪ್ರಾಶುಪಾಲ ಸುರೇಶಗೌಡ ಪಾಟೀಲ, ಉಪನ್ಯಾಸಕ ಎಂ.ಡಿ. ಬಳಗಾನೂರ, ಹಿರಿಯ ಸಾಹಿತಿ ಲ.ರು. ಗೊಳಸಂಗಿ,ಜಮಾತ್-ಎ-ಇಸ್ಲಾಂ ಅಧ್ಯಕ್ಷ ಸಲೀಂ ಸಯ್ಯದ ಮಾತನಾಡಿದರು. ಶ್ರೀ ಬಸವೇಶ್ವರ ಕೋ-ಆಪ್ ಬ್ಯಾಂಕಿನ ಅಧ್ಯಕ್ಷ ಲೋಕನಾಥ ಅಗರವಾಲ, ಕೃಷಿಕ ಸಮಾಜದ ಜಿಲ್ಲಾ ಅಧ್ಯಕ್ಷ ಶಿವನಗೌಡ ಬಿರಾದಾರ, ಸಂಗಮೇಶ ಓಲೇಕಾರ, ಜಾಮಿಯಾ ಮಸ್ಜಿದ್ ಅಧ್ಯಕ್ಷ ಡಾ. ಶಬ್ಬೀರ ನದಾಫ, ಜನತಾ ಬಜಾರ ಅಧ್ಯಕ್ಷ ಬಾಲಚಂದ್ರ ಮುಂಜಾನೆ, ಮಾಜಿ ಪುರಸಭೆ ಅಧ್ಯಕ್ಷ ಬಸಣ್ಣ ಕಲ್ಲೂರ, ಮುಖಂಡರಾದ ಕಮಲಸಾಬ್ ಕೊರಬು, ಬಸವರಾಜ ಗೊಳಸಂಗಿ, ಶ್ರೀಕಾಂತ ಕೊಟ್ರಶೆಟ್ಟಿ, ಚಾಂದ ಕೊರಬು ಅಲ್ತಾಪ ಮುದ್ದೇಬಿಹಾಳ,ಮಹ್ಮದಅಲಿ ಮಿಲ್ಲಿ. ಸೇರಿದಂತೆ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಜಾಕಿರ ನದಾಫ್ ಅವರು ನಿರೂಪಿಸಿ ವಂದಿಸಿದರು, ಎಲ್ಲರೂ ಒಟ್ಟಾಗಿ ಕುಳಿತು ಫಲಾಹಾರ ಸೇವಿಸುವ ಮೂಲಕ ಸೌಹಾರ್ದತೆಯನ್ನು ಮೆರೆದರು.

### ದಾವಣಗೆರೆ ದಕ್ಷಿಣ ಉಪ ಚುನಾವಣೆ: ಅವನ್ಯಾರು ಮಾತನಾಡೋಕೆ? ಇವೆಲ್ಲ ಸರಿ ಇರಲ್ಲ

## ಜಮೀರ್ ನಡೆಯನ್ನು ಪ್ರಶ್ನೆ ಮಾಡಿದ ಮಲ್ಲಿಕಾರ್ಜುನ್

• ಉದಯವಾಹಿನಿ ದಾವಣಗೆರೆ

ದಾವಣಗೆರೆ ಉಪ ಚುನಾವಣೆ ಅಭ್ಯರ್ಥಿ ಆಯ್ಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್‌ನಲ್ಲಿಯೇ ಆಂತರಿಕ ಭಿನ್ನಮತ ಎದುರಾಗಿದ್ದು, ಚಿಎಸ್‌ಎಸ್ ಮಲ್ಲಿಕಾರ್ಜುನ್ ಅವರು ಸಚಿವ ಜಮೀರ್



ಅಹಮ್ಮದ್ ಖಾನ್ ನಡೆಯನ್ನು ಪ್ರಶ್ನೆ ಮಾಡಿದ್ದಾರೆ. ಅವನ್ಯಾರು ಇಲ್ಲಿ ಬಂದು ಮಾತನಾಡೋಕೆ, ಇವೆಲ್ಲಾ ಸರಿ ಇರಲ್ಲ ಎಂದು ಕಿಡಿಕಾರಿದ್ದಾರೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಇನ್ನೆರಡು ತಿಂಗಳಲ್ಲಿ ನಡೆಯಲಿದೆ ಶಾಮನೂರು ಕುಟುಂಬ, ಅಲ್ಪಸಂಖ್ಯಾತ ವರ್ಗದ ನಡುವೆ ಟಿಕೆಟ್‌ಗೆ ಭಾರೀ ಪೈಪೋಟಿ ಇದೆ. ಈ ನಡುವೆ, ಸಚಿವ ಜಮೀರ್ ಅವರು ಶಿವಶಂಕರಪ್ಪನವರು ಬದುಕಿದ್ದಾಗ ನನ್ನ ಬಳಿಕ ಮುಸ್ಲಿಂ ಸಮುದಾಯಕ್ಕೆ ಟಿಕೆಟ್ ಎಂದು ಮಾತುಕೊಟ್ಟಿದ್ದರು ಎಂದು ಹೇಳಿಕೆ ನೀಡಿದ್ದರು. ಜತೆಗೆ ಹೈಕಮಾಂಡ್ ಮಟ್ಟದಲ್ಲಿಯೂ ಲಾಬಿ ನಡೆಸುತ್ತಿದ್ದರು. ಈ ಬಗ್ಗೆ ಎಸ್‌ಎಸ್ ಮಲ್ಲಿಕಾರ್ಜುನ್ ಬಹಿರಂಗವಾಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಅವನ್ಯಾರು ಇಲ್ಲಿ ಬಂದು ಮಾತನಾಡೋಕೆ?:** ಸೋಮವಾರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಎಸ್‌ಎಸ್ ಮಲ್ಲಿಕಾರ್ಜುನ, ಅವನ್ಯಾರು ಇಲ್ಲಿ ಬಂದು ಮಾತನಾಡೋಕೆ? ಇವು ನಮ್ಮ ಕ್ಷೇತ್ರಗಳು. ಇವೆಲ್ಲ ಸರಿ ಇರಲ್ಲ. ಇಲ್ಲಿ ಬಂದು ಮಾತನಾಡೋಕೆ ಅವನಿಗೆ ಅಧಿಕಾರ ಕೊಟ್ಟವರು ಯಾರು? ಈ ವಿಚಾರವಾಗಿ ಸಭೆ ಕರೆದಾಗ ನಾನು ಈ ಬಗ್ಗೆ ಮಾತನಾಡುತ್ತೇನೆ ಎಂದು ಬೇಸರ ಹೊರ ಹಾಕಿದರು.



**ಪುತ್ರನಿಗೆ ಟಿಕೆಟ್ ಕೇಳಿಲ್ಲ:** ಹೈಕಮಾಂಡ್ ಬಳಿ ನನ್ನ ಪುತ್ರನಿಗೆ ಟಿಕೆಟ್ ಕೇಳಿಲ್ಲ. ನಮ್ಮ ಕುಟುಂಬಕ್ಕೆ ಟಿಕೆಟ್ ಕೊಡಬೇಕು ಎಂದು ಒತ್ತಾಯಿಸಿಲ್ಲ. ಪಕ್ಷದ ಸಭೆ ಕರೆದಾಗ ನಾಯಕರು ಏನು ಹೇಳುತ್ತಾರೆ ಎಂಬುವುದನ್ನು ಕೇಳುತ್ತೇವೆ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರ ಅಂತಿಮವಾಗಿದ್ದು, ನಾವೆಲ್ಲರೂ ಬದ್ಧರಾಗಿ ಕೆಲಸ ಮಾಡುತ್ತೇವೆ ಎಂದು ಮಲ್ಲಿಕಾರ್ಜುನ್ ಹೇಳಿದರು.

**ದಕ್ಷಿಣದ ಅಭ್ಯರ್ಥಿ ಆಯ್ಕೆಗೆ ಸಮಿತಿ ರಚನೆ**

**ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಸಿದ್ಧತೆಯಾಗಿ ಕೆಪಿಸಿಸಿ ಅಭ್ಯರ್ಥಿ ಆಯ್ಕೆ ಸಮಿತಿ ರಚಿಸಿದೆ. ಮಾ.6ರಂದು ಬಿಡುಗಡೆಯಾದ ಅಧಿಕೃತ ಪತ್ರದಲ್ಲಿ ವಿಧಾನ ಪರಿಷತ್ ಸದಸ್ಯ, ಕೆಪಿಸಿಸಿ ಉಪಾಧ್ಯಕ್ಷ ಮಂಜುನಾಥ್ ಭಂಡಾರಿ ಅವರನ್ನು ಸಮಿತಿಯ ಕನ್ವೀನರ್ ಆಗಿ ನೇಮಿಸಲಾಗಿದೆ. ಸಮಿತಿಯಲ್ಲಿಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ , ಸಚಿವರಾದ ಕೆ.ಎಚ್. ಮುನಿಯಪ್ಪ, ಜಮೀರ್ ಅಹ್ಮದ್ ಖಾನ್, ಈಶ್ವರ್ ಖಂಡ್ರೆ, ಕೃಷ್ಣ ಬೈರೆಗೌಡ, ಶರಣಪ್ರಕಾಶ್ ಪಾಟೀಲ, ಪ್ರಿಯಾಂಕ್ ಖರ್ಗೆ, ಲಕ್ಷ್ಮಿ ಹೆಬ್ಬಾಳ್ಕರ್, ಸಂತೋಷ್ ಲಾಡ್, ಮಧು ಸೈಲ್, ಸಲೀಂ ಅಹ್ಮದ್, ತನ್ವೀರ್ ಸೇಠ್, ವಿ.ಆರ್. ಸುದರ್ಶನ್, ಎಚ್.ಎಂ. ರೇವಣ್ಣ ಸೇರಿದಂತೆ ಒಟ್ಟು 16 ಮಂದಿ ಸದಸ್ಯರಿದ್ದಾರೆ. ಸಮಿತಿಯವರು ಪಕ್ಷದ ಕಾರ್ಯಕರ್ತರೊಂದಿಗೆ ಸಂಪರ್ಕಿಸಿ, 2023/2024ರ ಚುನಾವಣಾ ಅನುಭವಗಳನ್ನು ಪರಿಗಣಿಸಿ ಸೂಕ್ತ ಅಭ್ಯರ್ಥಿ ಶಿಫಾರಸು ಮಾಡಬೇಕೆಂದು ಸೂಚಿಸಲಾಗಿದೆ.**

**ದಾವಣಗೆರೆ ಉಪ ಚುನಾವಣೆ ಕಾಂಗ್ರೆಸ್ ಟಿಕೆಟ್ ವಿಚಾರ ದಿನದಿಂದ ದಿನಕ್ಕೆ ದೊಡ್ಡ ಚರ್ಚೆಗೆ ಕಾರಣವಾಗುತ್ತಿದೆ. ಅಲ್ಪಸಂಖ್ಯಾತ ಸಮುದಾಯ ವಹಿಸಿಕೊಂಡು ಮಾತನಾಡಿದ ಸಚಿವ ಜಮೀರ್ ವಿರುದ್ಧ ಎಸ್‌ಎಸ್ ಮಲ್ಲಿಕಾರ್ಜುನ್ ಕಿಡಿಕಾರಿದ್ದಾರೆ. ಅವನ್ಯಾರು ಇಲ್ಲಿ ಬಂದು ಮಾತನಾಡಲು ಎಂದು ಪ್ರಶ್ನೆ ಮಾಡಿದ್ದಾರೆ. ಇನ್ನು ಪುತ್ರನಿಗೆ ಟಿಕೆಟ್ ಕೇಳಿಲ್ಲ ಹೈಕಮಾಂಡ್ ಹೇಳಿದಂತೆ ನಾವು ಪಾಲಿಸುತ್ತೇವೆ.**

**-ಎಸ್‌ಎಸ್‌ಮಲ್ಲಿಕಾರ್ಜುನ್ , ದಕ್ಷಿಣದ ಅಭ್ಯರ್ಥಿ ಆಯ್ಕೆಗೆ ಸಮಿತಿ ರಚನೆ**

## ಮಿನಿ ನ್ಯೂಸ್

### ಜಿಲ್ಲಾಸ್ಪತ್ರೆಯಲ್ಲಿ ತಿಂಗಳ ಎರಡನೇ ಗುರುವಾರ ಉಚಿತ ಮೂತ್ರಕೋಶ ತಪಾಸಣೆ ಶಿಬಿರ ಆಯೋಜನೆ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಮತ್ತು ದಾವಣಗೆರೆಯ ಎಸ್.ಎಸ್.ನಾರಾಯಣ ಹೆಲ್ತ್ ಆಸ್ಪತ್ರೆ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಆಸ್ಪತ್ರೆಯ ಕೊಠಡಿ ಸಂಖ್ಯೆ 15ರಲ್ಲಿ "ಪ್ರತಿ ತಿಂಗಳ ಎರಡನೇ ಗುರುವಾರ ಉಚಿತ ಮೂತ್ರಕೋಶ ತಪಾಸಣಾ ಶಿಬಿರ" ನಡೆಯಲಿದೆ. ಎಸ್.ಎಸ್.ನಾರಾಯಣ ಹೆಲ್ತ್ ಆಸ್ಪತ್ರೆಯ ಮೂತ್ರಕೋಶ ತಜ್ಞ ವೈದ್ಯರಾದ (ಯುರಾಲಾಜಿಸ್ಟ್) ಡಾ.ಯು.ಎಸ್.ಕಾರ್ತಿಕ್ ಅವರು ಅಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವೆಗೆ ಶಿಬಿರದಲ್ಲಿ ಲಭ್ಯವಿದ್ದು, ಮೂತ್ರಕೋಶ ತಪಾಸಣೆ ನಡೆಸುವರು. ಮೂತ್ರಪಿಂಡದಲ್ಲಿ ಕಲ್ಲು, ಹರಳು (ಕಿಡ್ನಿಸ್ಟೋನ್), ಪದೇ ಪದೇ ಮೂತ್ರ ವಿಸರ್ಜನೆ, ಪ್ರೊಸ್ಟೇಟ್‌ನ ಮೂತ್ರದ ತೊಂದರೆ, ಮೂತ್ರ ವಿಸರ್ಜನೆಯಲ್ಲಿ ತೊಂದರೆ, ಮೂತ್ರದಲ್ಲಿ ಸೋಂಕು, ಉರಿ ಮೂತ್ರ, ಮೂತ್ರದಲ್ಲಿ ರಕ್ತ ಕಾಣಿಸುವುದು, ಪುರುಷರ ಬಂಜೆತನ, ಚಿಕ್ಕ ಮಕ್ಕಳ ಮೂತ್ರದ ತೊಂದರೆಗಳು, ತಡೆದ ಮೂತ್ರ ಇತ್ಯಾದಿ ಮೂತ್ರಕೋಶ ಕಾಯಿಲೆಯ ಲಕ್ಷಣಗಳು ಕಂಡುಬಂದರೆ ಸಾರ್ವಜನಿಕರು ಈ ಸೇವೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9535025743, 7259759982ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಬೆಳಗಾವಿಯಲ್ಲೇ 2,900 ಮ್ಯೂಲ್ ಅಕೌಂಟ್ ಪತ್ತೆ: ಪೊಲೀಸ್ ಆಯುಕ್ತ

• ಉದಯವಾಹಿನಿ, ಬೆಳಗಾವಿ

ನಗರದಲ್ಲೇ 2,900 ಮ್ಯೂಲ್ ಅಕೌಂಟ್‌ಗಳು ಕ್ರಿಯಾಶೀಲವಾಗಿವೆ. ಇವೆಲ್ಲವನ್ನೂ ಸೈಬರ್ ಅಪರಾಧ ಕೃತ್ಯಗಳಿಗೆ ಬಳಸಿಕೊಳ್ಳಲಾಗುತ್ತಿದೆ. ಹಲವು ಅಮಾಯಕರು ಗೊತ್ತಿಲ್ಲದೆಯೇ ಈ ಸುಳಿಯಲ್ಲಿ ಸಿಕ್ಕಿಕೊಳ್ಳುವ ಆತಂಕ ಇದೆ ಎಂದು ನಗರ ಪೊಲೀಸ್ ಆಯುಕ್ತ ಭೂಷಣ ಬೊರಸೆ ತಿಳಿಸಿದರು. ನಗರದ ಯುವಕನೊಬ್ಬ ಕಮಿಷನ್ ಆಸೆಗಾಗಿ 9 ಬ್ಯಾಂಕ್ ಖಾತೆಗಳನ್ನು ಸೃಷ್ಟಿಸಿ, ಆ ಖಾತೆಗಳ ವಿವರವನ್ನು ಸೈಬರ್ ವಂಚಕರಿಗೆ ಕೊಟ್ಟಿದ್ದಾನೆ. ಸೈಬರ್ ವಂಚಕರು ಕನ್ನ ಹಾಕಿದ್ದ 80 ಲಕ್ಷ ಹಣವನ್ನು ಈ 9 ಖಾತೆಗಳಿಗೆ ಹಾಕಿದ್ದಾರೆ. ಈ ಖಾತೆಗಳಿಗೆ ಹಣ ಬಂದ ಮೇಲೆ ಅದನ್ನು ತಮ್ಮ ಸ್ವಂತಕ್ಕೆ ವರ್ಗಾವಣೆ ಮಾಡಿಕೊಂಡಿದ್ದಾರೆ. ಸಿಇಎನ್ ಪೊಲೀಸರು ಕೈಗೊಂಡ ತನಿಖೆಯಲ್ಲಿ ಇದು ಹೊರಬಿದ್ದಿದೆ' ಎಂದು ವಿವರಿಸಿದರು. ಹಲವು ಯುವಜನರು ಕಮಿಷನ್ ಸಿಗುತ್ತದೆ ಎಂಬ ಆಸೆಗೆ ಬಿದ್ದು ತಮ್ಮ ಹೆಸರಿನಲ್ಲಿ ಬ್ಯಾಂಕ್ ಖಾತೆಗಳನ್ನು ತೆರೆದು ಅಪರಾಧಿಗಳಿಗೆ ಕೊಡುತ್ತಿದ್ದಾರೆ. ಇದು ಕೂಡ ಅಪರಾಧವೇ ಆಗುತ್ತದೆ. ಅವರು ಖಾತೆಗಳನ್ನು ಯಾವ ಉದ್ದೇಶಕ್ಕೆ ಬಳಸುತ್ತಾರೆ ಎಂಬುದು ಗೊತ್ತಿಲ್ಲದೆಯೂ ಕೆಲವರು ಸಿಕ್ಕಿಕೊಂಡಿದ್ದಾರೆ. ಇಂಥವರ ಬಗ್ಗೆ ಜಾಗೃತರಾಗಿ ಇರಬೇಕು ಎಂದು ಹೇಳಿದರು. ದುಬೈನಲ್ಲಿರುವ ಯುವಕನೊಬ್ಬ ತನ್ನ ತಾಯಿ ಮೂಲಕ ಸ್ವಸಹಾಯ ಸಂಘದ ಹೆಸರಿನಲ್ಲಿ ಬೆಳಗಾವಿಯಲ್ಲಿ ಬ್ಯಾಂಕ್ ಖಾತೆ ತೆರೆದಿದ್ದಾನೆ. ಅದಕ್ಕೆ ವಂಚನೆಯ ಹಣ ವರ್ಗಾಯಿಸಿಕೊಂಡಿದ್ದು ತನಿಖೆಯಿಂದ ಗೊತ್ತಾಗಿದೆ. ಮತ್ತೆ ಕೆಲವರಿಗೆ ಮನೆಯಲ್ಲೇ ಕೆಲಸ ಕೊಡುತ್ತೇವೆ ಎಂದು ನಂಬಿಸಿ, ಕಮಿಷನ್ ಆಸೆ ತೋರಿಸಿ ವಂಚನೆ ಮಾಡಿದ್ದಾರೆ' ಎಂದರು.

### ನಕಲಿ ವಿಮಾ ಪಾಲಿಸಿ: ಆರೋಪಿ ಸೆರೆ

• ಉದಯವಾಹಿನಿ, ಬಳ್ಳಾರಿ

ನಕಲಿ ವಿಮಾ ಪಾಲಿಸಿಗಳನ್ನು ಸೃಷ್ಟಿಸಿ ಸಾರ್ವಜನಿಕರಿಗೆ ವಂಚಿಸುತ್ತಿದ್ದ ಏಜೆಂಟ್‌ರೊಬ್ಬರನ್ನು ಗಾಂಧಿನಗರ ಪೊಲೀಸರುಬಂಧಿಸಿದ್ದಾರೆ. ವಿಜಯನಗರ ಜಿಲ್ಲೆ ಹಡಗಲಿ ತಾಲ್ಲೂಕಿನ ಮೊರಗೇರಿ ಗ್ರಾಮದ ಷಣ್ಮುಖ ಅಣ್ಣೆ (34) ಬಂಧಿತ. ಕಳೆದ 10 ವರ್ಷಗಳಿಂದ 'ದಿ ನ್ಯೂ ಇಂಡಿಯಾ ಅಶೂರೆನ್ಸ್' ಕಂಪನಿಯಲ್ಲಿ ಏಜೆಂಟ್ ಆಗಿ ಕಾರ್ಯನಿರ್ವಹಿಸುತ್ತಿದ್ದ ಈತ, ಹಳೆಯ ಪಾಲಿಸಿಗಳನ್ನು ನವೀಕರಿಸುವಾಗ ಅಕ್ರಮವೆಸಗುತ್ತಿದ್ದ. ಪಿಡಿಎಫ್ ಎಡಿಟರ್ ಅಪ್ಲಿಕೇಶನ್ ಬಳಸಿ ಕಾರು, ಮೋಟಾರ್ ಸೈಕಲ್, ಜಾನುವಾರುಗಳ ನಕಲಿ ವಿಮಾ ಪಾಲಿಸಿಗಳನ್ನು ಸೃಷ್ಟಿಸುತ್ತಿದ್ದ. ಗ್ರಾಹಕರಿಂದ ಹಣ ಪಡೆದು ಕಂಪನಿ, ಸಾರ್ವಜನಿಕರಿಗೆ ಮೋಸ ಮಾಡುತ್ತಿದ್ದಾನೆ ಎಂದು ಕಂಪನಿಯ ಮ್ಯಾನೇಜರ್ ವೆಂಕಟೇಶ್ ಮಾ.1ರಂದು ದೂರು ನೀಡಿದ್ದರು.ಆರೋಪಿಯನ್ನು ಮಾ.6ರಂದು ಬಂಧಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಈತನಿಂದ ವಂಚನೆಗೊಳಗಾದವರ ಸಂಖ್ಯೆ ಹಾಗೂ ಮೊತ್ತವನ್ನು ಪತ್ತೆಹಚ್ಚಲಾಗುತ್ತಿದೆ. ಆರೋಪಿಯ ಮೂಲಕ ಪಾಲಿಸಿ ಪಡೆದವರು ಕೂಡಲೇ ವಿಮಾ ಕಚೇರಿಗೆ ಭೇಟಿ ನೀಡಿ, ನೈಜತೆಯನ್ನು ದೃಢೀಕರಿಸಿಕೊಳ್ಳಬೇಕು. ವಂಚನೆಗೊಳಗಾಗಿದ್ದರೆ ಠಾಣೆಗೆ ದೂರು ನೀಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಮನ್ ಡಿ.ಪಿ ತಿಳಿಸಿದ್ದಾರೆ.

### ಒಳಮೀಸಲಾತಿ; ಸರ್ಕಾರದಿಂದ ಅನ್ಯಾಯ, ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕುಷ್ಟಗಿ


ಪರಿಶಿಷ್ಟ ಜಾತಿಯ ಒಳಮೀಸಲಾತಿ ವಿಚಾರ ಪೂರ್ಣಪ್ರಮಾಣದಲ್ಲಿ ಜಾರಿಗೊಳಿಸುವ ಮೊದಲೇ ವಿವಿಧ ಇಲಾಖೆಗಳ ಹುದ್ದೆಗಳ ನೇಮಕಾತಿಗೆ ಮುಂದಾಗಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ ತಾಲ್ಲೂಕಿನ ಮಾದಿಗ ಮಹಾಸಭಾದ ಕಾರ್ಯಕರ್ತರು ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು. ಕೆಲ ಸಮಯದವರೆಗೆ ಸಾಂಕೇತಿಕವಾಗಿ ಇಲ್ಲಿಯ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ನಂತರ ರಾಜ್ಯ ಹೆದ್ದಾರಿಯಲ್ಲಿ ಧರಣೆ ನಡೆಸಿದರು. ಈ ಸಂದರ್ಭದಲ್ಲಿ ಸರ್ಕಾರ ಹಾಗೂ ಮುಖ್ಯಮಂತ್ರಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು. ಪ್ರಮುಖರು ಮಾತನಾಡಿ, ಶೈಕ್ಷಣಿಕ ಸಂಸ್ಥೆಗಳು ಹಾಗೂ ರಾಜ್ಯಾದ್ಯಂತ ಖಾಲಿ ಹುದ್ದೆಗಳನ್ನು ಭರ್ತಿಗೆ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಂಡಿರುವುದು ಗೊತ್ತಾಗಿದೆ. ಆದರೆ ಸಚಿವ ಸಂಪುಟದ ತೀರ್ಮಾನದಂತೆ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಯಾಗುವವರೆಗೆ ಹೊಸ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಬಾರದು ಎಂದು 2024ರ ನವೆಂಬರ್ 25ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸುತ್ತೋಲೆ ಹೊರಡಿಸಿದೆ. ವಸ್ತುಸ್ಥಿತಿ ಹೀಗಿದ್ದರೂ ಹೊಸದಾಗಿ ನೇಮಕಾತಿ ಪ್ರಕ್ರಿಯೆ ಆರಂಭಿಸುವುದು ಮಾದಿಗ ಸಮುದಾಯಕ್ಕೆ ಸರ್ಕಾರ ದ್ರೋಹ ಬಗೆಯುತ್ತಿದೆ ಎಂದು ಆರೋಪಿಸಿದರು. ಸಮಾಜ ಕಲ್ಯಾಣ ಇಲಾಖೆಯನ್ನು ಸಮರ್ಪಕವಾಗಿ ನಿಭಾಯಿಸುವಲ್ಲಿ ವಿಫಲರಾಗಿರುವ ಸಚಿವ ಎಚ್.ಸಿ. ಮಹಾದೇವಪ್ಪ ಅವರನ್ನು ಸಂಪುಟದಿಂದ ಕೈಬಿಡಬೇಕು. ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದರು.

## ಕಲ್ಲಂಗಡಿಗೆ ಮುಳ್ಳಾದ ವೈರಸ್ ಸೋಂಕು

• ಉದಯವಾಹಿನಿ, ಚಳ್ಳಕೆರೆ

ಬಯಲು ಸೀಮೆಯ ಚಳ್ಳಕೆರೆಯಲ್ಲಿ ಬೇಸಿಗೆಯ ಬಿರು ಬಿಸಿಲ ಝಳಕ್ಕೆ ತತ್ತರಿಸುತ್ತಿರುವ ಜನರ ದೇಹಕ್ಕೆ ತಂಪು ನೀಡುವ ಕಲ್ಲಂಗಡಿ ಹಣ್ಣುಗಳಿಗೆ ಬೇಡಿಕೆ ಹೆಚ್ಚಾಗಿದೆ. ಆದರೆ, ಬೆಳೆ ಬೆಳೆದ ರೈತರಿಗೆ ಅದೃಷ್ಟ ಕೈಕೊಟ್ಟಿದೆ, ವೈರಸ್ ಬಾಧೆಯಿಂದಾಗಿ ಕಲ್ಲಂಗಡಿ ಬೆಳೆ ಒಣಗುತ್ತಿದೆ. ಇತ್ತ ಬಿಸಿಲು ದಿನೇ ದಿನೆ ಹೆಚ್ಚಾಗುತ್ತಿದೆ. ಈ ಬೇಸಿಗೆಯಲ್ಲಿ ಕಲ್ಲಂಗಡಿ ಮಾರಿ ಲಾಭ ಗಳಿಸುವ ನೀರಿಕ್ಷೆಯಲ್ಲಿದ್ದ ರೈತರಿಗೆ ವೈರಸ್ ಮಾರಕವಾಗಿ ಪರಿಣಮಿಸಿದೆ. ಸಾಲ ಮಾಡಿ, ಲಕ್ಷಾಂತರ ರೂ. ವೆಚ್ಚ ಮಾಡಿ ಬೆಳೆದ ಕಲ್ಲಂಗಡಿ ಕೈ ಸೇರುವ ಮುನ್ನವೇ ವೈರಸ್ ದಾಳಿ ಮಾಡಿದ್ದು, ಹಾಕಿದ ಬಂಡವಾಳ ಮಣ್ಣು ಪಾಲಾಗುತ್ತಿದೆ.

ತಾಲ್ಲೂಕಿನ ರೆಡ್ಡಿಹಳ್ಳಿ, ಸಾಣೀಕೆರೆ, ಗೋಸಿಕೆರೆ ಸೇರಿ ಅನೇಕ ಗ್ರಾಮಗಳ ರೈತರ ಕಲ್ಲಂಗಡಿ ಬೆಳೆಯು ವೈರಸ್, ಹಳದಿ ರೋಗಕ್ಕೆ ತುತ್ತಾಗಿದೆ. ರೆಡ್ಡಿಹಳ್ಳಿ ರೈತ ತಿಪ್ಪೇಸ್ವಾಮಿ ಎರಡು ಎಕರೆ ಪ್ರದೇಶದಲ್ಲಿಬೀಜ, ಗೊಬ್ಬರ ಸೇರಿ ಒಂದು ಲಕ್ಷ ರೂ. ವೆಚ್ಚ ಮಾಡಿ ಕಲ್ಲಂಗಡಿ ಬೆಳೆದಿದ್ದು, ಬೆಳೆ ಸಹ ಉತ್ತಮವಾಗಿ ಬಂದಿತ್ತು. ಈಗ ಬೇಸಿಗೆಯಾಗಿರುವ ಕಾರಣ,



ಕಲ್ಲಂಗಡಿ ಹಣ್ಣಿಗೆ ಬಹಳ ಬೇಡಿಕೆಯಿದೆ. ಆದರೆ, ಕಟಾವು ಹಂತದಲ್ಲಿ ರೋಗ ಆವರಿಸಿದೆ. ನಾಲ್ಕು ಲಕ್ಷ ಆದಾಯ ನಿರೀಕ್ಷೆಯಲ್ಲಿದ್ದ ರೈತನಿಗೆ ಬರಸಿಡಿಲು ಬಡಿದಂತಾಗಿದೆ.


**ಬಿಸಿಲಿಗೆ ವೈರಸ್ ಬಾಧೆ ವ್ಯಾಪಕ:** ಕಳೆದ ವರ್ಷ ಶೇಂಗಾ, ಈರುಳ್ಳಿ, ತೊಗರಿ, ಟೊಮೇಟೊ ಬೆಳೆ ನಷ್ಟದಿಂದ ಈಗಾಗಲೇ ಸಾಲದಲ್ಲಿಮುಳುಗಿರುವ ರೈತರು, ಸಂಕಷ್ಟದಲ್ಲಿದ್ದಾರೆ. ಬೇಸಿಗೆ ಆರಂಭದಲ್ಲೇ ನಿರಂತರವಾಗಿ ಬಿಸಿಲು ಹೆಚ್ಚಾಗಿ ಹವಾಮಾನ ಬದಲಾಗುತ್ತಿರುವುದರಿಂದ ವೈರಸ್ ಹೆಚ್ಚಾಗಿ ವ್ಯಾಪಿಸುತ್ತಿದೆ. ಕೆಲ ಬಳ್ಳಿಗಳಲ್ಲಿ ಎಲೆಗಳು ಮುಟುರಿಕೊಂಡು ಹಳದಿ ಮತ್ತು ಬೂದು ಬಣ್ಣಕ್ಕೆ ತಿರುಗಿದ್ದು, ಬೆಳವಣಿಗೆ ಕುಂಠಿತವಾಗಿದೆ. ಈ ಬಾರಿ ಮಾರುಕಟ್ಟೆಯಲ್ಲಿ ಕಲ್ಲಂಗಡಿಗೆ ಉತ್ತಮ ಬೆಲೆ ಸಿಗುತ್ತಿದೆ. ಹಣ್ಣುಗಳನ್ನು ಕಟಾವು ಮಾಡುವ ಹಂತದಲ್ಲೇ ವೈರಸ್ ಸೋಂಕು ಕಾಣಿಸಿಕೊಂಡು ಹಸಿರು ಬಳ್ಳಿಗಳು ಒಣಗುವುದಷ್ಟೇ ಅಲ್ಲದೆ, ಹಣ್ಣುಗಳ ಗಾತ್ರ ಸಣ್ಣದಾಗಿ, ರುಚಿ ಕೂಡ ಕಡಿಮೆಯಾಗಿದೆ. ಎಕರೆಗೆ 20 ಟನ್‌ವರೆಗೂ ಇಳುವರಿ ನೀಡುವ ಕಲ್ಲಂಗಡಿ ಬೆಲೆ ಈ ಬಾರಿ ಕೆಜಿಗೆ 20ರಿಂದ 22 ರೂ. ಇದೆ.

**ಕಲ್ಲಂಗಡಿ 65ರಿಂದ 70 ದಿನಗಳಲ್ಲಿ ಬರುವ ಬೆಳೆ. ಒಮ್ಮೆ ರೋಗ ಬಂದರೆ, ಮೂರೇ ದಿನದಲ್ಲೇ ಇಡೀ ತಾಲ್ಲೂಕನ್ನು ವ್ಯಾಪಿಸುತ್ತದೆ. ಹೀಗಾಗಿ, ಹತ್ತು ದಿನಗಳಿಗೊಮ್ಮೆ ಔಷಧ ಸಿಂಪರಣೆ ಮಾಡಿ, ಬೆಳೆ ನಿರ್ವಹಣೆ ಮಾಡಬೇಕು. ಬಿಸಿಲು ಹೆಚ್ಚಾಗಿರುವುದರಿಂದ ರೋಗ ನಿಯಂತ್ರಣ ಕಷ್ಟ. ರಸ ಹೀರುವ ಕೀಟಗಳು ವೈರಸ್ ಹರಡುತ್ತಿವೆ.**

**-ಎನ್.ಕುಮಾರ್, ಹಿರಿಯ ಸಹಾಯಕ ನಿರ್ದೇಶಕ, ತೋಟಗಾರಿಕೆ ಇಲಾಖೆ**

## ಬಜೆಟ್‌ನಲ್ಲಿ ರಾಮದುರ್ಗ ತಾಲ್ಲೂಕಿಗೆ ಕೊಡುಗೆ

• ಉದಯವಾಹಿನಿ, ರಾಮದುರ್ಗ



ಸಿಎಂ ಸಿದ್ದರಾಮಯ್ಯನವರು ತಮ್ಮ 17ನೇ ಬಜೆಟ್‌ನಲ್ಲಿ ರಾಮದುರ್ಗ ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ 164 ಕೋಟಿ ಅನುದಾನ ನೀಡಿದ್ದಾರೆ ಎಂದು ಸರ್ಕಾರದ ಮುಖ್ಯಸಚೇತಕ ಅಶೋಕ ಪಟ್ಟಣ ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 30 ಕೋಟಿ ಅನುದಾನದಲ್ಲಿ ರಾಮದುರ್ಗದ ಕುದುರೆ ಬಯಲಿನಲ್ಲಿ ಸುಸಜ್ಜಿತ ಹೊಸ ಬಸ್‌ನಿಲ್ದಾಣ, 85 ಕೋಟಿ ವೆಚ್ಚದಲ್ಲಿ ಮಲಪ್ರಭಾ ನದಿಯಿಂದ ತಾಲ್ಲೂಕಿನ ಚಂದರಗಿ, ಮುರಕಟ್ನಾಳ, ತೋರಣಗಟ್ಟಿ, ಕಟಕೋಳ ಸೇರಿದಂತೆ ವಿವಿಧ 8 ಕೆರೆಗಳಿಗೆ ನೀರು ತುಂಬಿಸುವ ಯೋಜನೆ, 40 ಕೋಟಿ ವೆಚ್ಚದಲ್ಲಿ ಮುರಾರ್ಜಿ ದೇಸಾಯಿ ವಸತಿ ಶಾಲೆ ಮಾದರಿಯಲ್ಲಿ ಕಾರ್ಮಿಕರ ಮಕ್ಕಳಿಗಾಗಿ ವಸತಿ ಶಾಲೆ, 9 ಕೋಟಿ ವೆಚ್ಚದಲ್ಲಿ ಮಲಪ್ರಭಾ ನದಿಗೆ ಗೊಣ್ಣಾಗರ ಗ್ರಾಮದ ಹತ್ತಿರ ಅಗತ್ಯವಿರುವ ಸ್ಥಳದಲ್ಲಿ ತಡೆಗೋಡೆ ನಿರ್ಮಾಣಕ್ಕೆ ಸಿದ್ದರಾಮಯ್ಯನವರು ಅನುಮೋದನೆ ನೀಡಿದ್ದಾರೆ. ಕಳೆದ ಬಜೆಟ್‌ನಲ್ಲಿ ಅನುಮೋದಿತಗೊಂಡ 40 ಕೋಟಿ ವೆಚ್ಚದ 100 ಹಾಸಿಗೆಯ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ, ಪುರಸಭೆ ವ್ಯಾಪ್ತಿಯಲ್ಲಿ 20 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಮುಖ್ಯಮಂತ್ರಿಗಳ ವಿಶೇಷ ಅನುದಾನ 37 ಕೋಟಿ ಅನುದಾನದಲ್ಲಿ ಪ್ರಮುಖ ರಸ್ತೆಗಳ ಸುಧಾರಣೆ ಮತ್ತು 13 ಕೋಟಿ ಅನುದಾನದಲ್ಲಿ ರೈತರ ಜಮೀನುಗಳ ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆಗೊಂಡು ಟೆಂಡರ್ ಪ್ರಕ್ರಿಯೆ ನಡೆಯಲಿದೆ ಎಂದರು.

ಸಾಲಾಪೂರ ಮತ್ತು ಮುದೇನೂರದಲ್ಲಿ 110 ಕೆವಿ ವಿದ್ಯುತ್ ವಿತರಣಾ ಕೇಂದ್ರ ಸ್ಥಾಪನೆಗೆ ತಲಾ ರೂ. 25 ಕೋಟಿ ಮಂಜೂರಾಗಿದೆ. ರೈತರ ಬಹು ನಿರೀಕ್ಷಿತ 350 ಕೋಟಿ ಅನುದಾನದ ವೀರಭದ್ರೇಶ್ವರ ಏತ ನೀರಾವರಿ ಯೋಜನೆ ಮರು ಟೆಂಡರ್ ಕರೆದು ಗುತ್ತಿಗೆ ನೀಡಲು ಸರ್ಕಾರ ಸೂಚಿಸಿದೆ. ಸಾಲಾಪೂರದ ಬಸವೇಶ್ವರ ಏತ ನೀರಾವರಿ ಯೋಜನೆ ಶೇ 90 ರಷ್ಟು ಪೂರ್ಣಗೊಂಡಿದ್ದು ರೈತರು ನೀರಾವರಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ಮಲಪ್ರಭಾ ನದಿಗೆ ಹಂಪಿಹೊಳಿ ಹತ್ತಿರ 126 ಕೋಟಿ ವೆಚ್ಚದ ತಡೆಗೋಡೆ ನಿರ್ಮಾಣ ಕಾಮಗಾರಿಯೂ ಸ್ಥಗಿತಗೊಂಡಿತ್ತು ಅದನ್ನು ಸಹ ಪುನಃ ಪ್ರಾರಂಭಿಸಲು ಕ್ರಮಕ್ಕೆಗೊಳ್ಳಲಾಗಿದೆ. ಶಿರಸಂಗಿಯ 26ನೇ ಹಂಚು ಕಾಲುವೆ ಪುನರ್ ನಿರ್ಮಾಣಕ್ಕೆ 94 ಕೋಟಿಯ ಪ್ರಸ್ತಾವ ಸಲ್ಲಿಸಲಾಗಿದೆ. ಇದರಿಂದ ಕಡ್ಲಿಕೊಪ್ಪ, ರೇವಡಿಕೊಪ್ಪ, ಜಾಲಿಕಟ್ಟಿ, ಮುಳ್ಳೂರ ಗ್ರಾಮಗಳ ರೈತರ ಜಮೀನಿಗೆ ನೀರಾವರಿಗೆ ಅನುಕೂಲವಾಗಲಿದೆ ಎಂದರು.

## ಮಕ್ಕಳಲ್ಲಿ ಸಮಾಜದ ಬಗ್ಗೆ ಅಭಿಮಾನ ಮೂಡಿಸುವ ಕಾರ್ಯವಾಗಲಿ

• ಉದಯವಾಹಿನಿ, ಲಕ್ಷ್ಮೇಶ್ವರ

ಶಿಸ್ತುಬದ್ಧವಾದ ಜೀವನ, ಸಂಸ್ಕಾರ ಸಂಸ್ಕೃತಿಗಳನ್ನು ಅಳವಡಿಸಿಕೊಂಡು ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವ ಬ್ರಾಹ್ಮಣ ಸಮಾಜದಲ್ಲಿನ ಮಕ್ಕಳಲ್ಲಿ ಸಮಾಜದ ಬಗ್ಗೆ ಅಭಿಮಾನ ಮೂಡಿಸುವ ಕಾರ್ಯವಾಗಬೇಕು, ಅಲ್ಲದೆ ಸಂಘಟನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಹೇಳಿದರು. ಅವರು ಪಟ್ಟಣದ ಶಂಕರಭಾರತಿಮಠದಲ್ಲಿ ನಡೆದ ಬ್ರಾಹ್ಮಣ ಸಮಾಜದ ಸಭೆಯಲ್ಲಿ ಮಾತನಾಡಿದರು. ಸಮಾಜದಲ್ಲಿ ವಿವಾಹ, ಉದ್ಯೋಗ ಸೇರಿದಂತೆ ಅನೇಕ ಸಮಸ್ಯೆಗಳಿವೆ, ಅವುಗಳಿಗೆ ಪರಿಹಾರ ಕಂಡು ಕೊಳ್ಳುವದು ಸಹ ನಮ್ಮಲ್ಲಿಯೇ ಇದೆ, ಇದೀಗ ಬ್ರಾಹ್ಮಣ ನಿಗಮ ಮಂಡಳಿ ವತಿಯಿಂದ ಸ್ವಯಂ ಉದ್ಯೋಗ ಮಾಡುವವರಿಗೆ, ಶಿಕ್ಷಣಕ್ಕಾಗಿ ಅನೇಕ ರೀತಿಯ ಆರ್ಥಿಕ ಸಹಾಯಗಳು ದೊರೆಯುತ್ತಿವೆ ಅವುಗಳ ಸದುಪಯೋಗಪಡಿಸಿಕೊಳ್ಳುವದು



ಉದಯವಾಹಿನಿ ಚಿತ್ರ

ಅವಶ್ಯವಾಗಿದೆ, ನಮ್ಮ ಸಮಾಜದಲ್ಲಿನ ವಿವಾಹದ ಸಮಸ್ಯೆಗಳಿಗೆ ಪರಿಹಾರ ನೀಡಲು ಜಿಲ್ಲಾ ಮಟ್ಟದಲ್ಲಿ ವಧು-ವರರ ಯೋಚನೆಯಿದೆ ಎಂದು ಹೇಳಿದ ಅವರು ಇದೇ ತಿಂಗಳು 21 ರಿಂದ ಶ್ರೀಕ್ಷೇತ್ರ ಶೃಂಗೇರಿಯಲ್ಲಿ ನಡೆಯುವ ಜಗದ್ಗುರುಗಳ ವರ್ದಂತಿ ಉತ್ಸವ ನಿಮಿತ್ಯ ಗಾಯತ್ರಿ ಜಪಾನುಷ್ಠಾನದಲ್ಲಿ ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವಿಶಿಷ್ಟ ಕಾರ್ಯಕ್ರಮದಲ್ಲಿ ಸೇವೆ ಸಲ್ಲಿಸೋಣ ಎಂದು ಹೇಳಿದರು. ಗದಗ ಜಿಲ್ಲಾ ಶಾಂಕರ ತತ್ವ ಪ್ರಸಾರ ಸಂಚಾಲಕ ಗಿರೀಶ ಪಂತರ ಮಾತನಾಡಿ ಶ್ರೀಕ್ಷೇತ್ರ ಶೃಂಗೇರಿಯಲ್ಲಿ ಜಗದ್ಗುರುಗಳ ವರ್ಧಂತಿ ಉತ್ಸವದ ನಿಮಿತ್ತ ಇದೇ ಮಾ. 21ರಂದು ನಡೆಯಲಿರುವ ಗಾಯತ್ರಿ ಜಪಾನುಷ್ಠಾನಕ್ಕೆ ಈ ಭಾಗದ ಎಲ್ಲಾ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು, ಇಂದಿನ ದಿನಗಳಲ್ಲಿ ಹಿಂದೂ ಧರ್ಮ ಅಧೋಗತಿಯತ್ತ ಸಾಗುತ್ತಿದೆ. ಇದನ್ನು ತಪ್ಪಿಸಲು ಶೃಂಗೇರಿ ಜಗದ್ಗುರುಗಳು ಅನೇಕ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದಾರೆ. ಅದಕ್ಕೆ ಜಿಲ್ಲೆಯಿಂದ ಅನೇಕ ಯುವಕರು, ಹಿರಿಯರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಲಕ್ಷ್ಮೇಶ್ವರ ತಾಲ್ಲೂಕ ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ, ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್ ಮಾತನಾಡಿ ಬ್ರಾಹ್ಮಣ ಸಮಾಜದವರು ಸಂಘಟಿತರಾಗುವದು ಅವಶ್ಯವಾಗಿದೆ, ಸಮಾಜದ ಬಗ್ಗೆ ಚಿಂತನೆ ಮಾಡಬೇಕಾದ ಅವಶ್ಯಕತೆ ಎದುರಾಗಿದೆ, ಅನೇಕ ಸಮಸ್ಯೆಗಳಿದ್ದರೂ ಸಹ ಸ್ವಾಭಿಮಾನದಿಂದ ಜೀವನ ಸಾಗಿಸುವ ಬ್ರಾಹ್ಮಣ ಸಮಾಜ ಬಾಂಧವರು ಸಂಘಟನೆಯ ಶಕ್ತಿಯನ್ನು ತೋರ್ಪಡಿಸಬೇಕಾಗಿದೆ ಎಂದರು.

### ಜಾತಿನಿಂದನೆ ಆರೋಪ: ನಾಲ್ವರ ವಿರುದ್ಧ ಪ್ರಕರಣ

• ಉದಯವಾಹಿನಿ, ಯಾದಗಿರಿ



ತಕರಾರಿರುವ ನಿವೇಶನಕ್ಕೆ ಸಂಬಂಧಿಸಿ ಗ್ರಾಮ ಪಂಚಾಯಿತಿ ಸಿಬ್ಬಂದಿಯಿಂದ ಅಳತೆಗೆ ಕಾರ್ಯದ ವೇಳೆ ಜಾತಿ ನಿಂದನೆ ಮತ್ತು ಹಲ್ಲೆ ನಡೆಸಿದ ಆರೋಪದಡಿ ಕೆಂಬಾವಿ ಪೊಲೀಸ್ ಠಾಣೆಯಲ್ಲಿ ನಾಲ್ವರ ವಿರುದ್ಧ ಪ್ರಕರಣ ದಾಖಲಾಗಿದೆ.

ಜಿಲ್ಲೆಯ ಸುರಪುರ ತಾಲ್ಲೂಕಿನ ಕರಡಕಲ್ ಗ್ರಾಮದ ಭೀಮಣ್ಣ ಅಂಬಿಗೇರ, ಸಿದ್ದಪ್ಪ ಅಂಬಿಗೇರ, ಅಂಬಮ್ಮ ಅಂಬಿಗೇರ, ದೇವಪ್ಪ ಅಂಬಿಗೇರ ವಿರುದ್ಧ ಪ್ರಕರಣ ದಾಖಲಾಗಿದೆ. **ಘಟನೆ:** ಕರಡಕಲ್ ಗ್ರಾಮದ ರೇಣುಕಮ್ಮ ಗುಡಕಲ್ ಅವರ ಜಾಗದ ಕುರಿತ ತಕರಾರಿತ್ತು. ತಕರಾರಿರುವ ನಿವೇಶನವನ್ನು ಫೆ.23 ರಂದು ಅಳತೆ ಮಾಡಲು ಗ್ರಾಮ ಪಂಚಾಯಿಸಿ ಸಿಬ್ಬಂದಿ ಬಂದಿದ್ದರು. ಆ ವೇಳೆ ರೇಣುಕಮ್ಮ ಅವರು ತಮ್ಮೊಡನೆ ಸಂಗಪ್ಪ ಗುಡಿಮನಿ ಅವರನ್ನು ಕರೆದೊಯ್ದಿದ್ದಾರೆ. ಆ ವೇಳೆ ಆರೋಪಿಗಳು ನನ್ನ ಮೇಲೆ ಜಾತಿ ನಿಂದನೆ ಮಾಡಿ ಹಲ್ಲೆ ನಡೆಸಿದ್ದಾರೆ ಎಂದು ಸಂಗಪ್ಪ ಗುಡಿಮನಿ ನೀಡಿದ ದೂರಿನಂತೆ ಪ್ರಕರಣ ದಾಖಲಿಸಿದ್ದಾಗಿ ಪೊಲೀಸ್ ಇಲಾಖೆ ತಿಳಿಸಿದೆ.

## ಅಂತರ್ಜಲ ದುಪ್ಪಟ್ಟು ಮಾಡುವ ಗುರಿ: ಸಚಿವ ಭೋಸರಾಜ್

• ಉದಯವಾಹಿನಿ, ಆಳಂದ್

ಕರ್ನಾಟಕದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ನೀರಿನ ಸಂಕಷ್ಟ ನಿವಾರಣೆಗೆ ಸರ್ಕಾರದ ಚಾಲನೆಯೊಂದಿಗೆ ರಾಜ್ಯಾದ್ಯಂತ 12 ಸಾವಿರ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಇದರಿಂದ ಅಂತರ್ಜಲ ಮಟ್ಟವು ಶೇ.2ರಷ್ಟು ಹೆಚ್ಚಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಭೋಸರಾಜ್ ಅವರು ಘೋಷಿಸಿದರು.

ತಾಲ್ಲೂಕಿನ ಹಳ್ಳಿಸಲಗರ ಗ್ರಾಮದಿಂದ ಕೊಡಲಹಂಗರಗಾ ನಾಲೆಗೆ ಅಡ್ಡಲಾಗಿ ಅಣೆಕಟ್ಟು, ಬಿಸಿಬಿಗಳ ನಿರ್ಮಾಣ, ನಾಲಾ ಅಗೆತ ಕಾಮಗಾರಿಗೆ ಅಡಿಗಲ್ಲು ನಾಟಿ ನೆರವೇರಿಸಿ, ಸುದ್ದಿಗಾರರೊಂದಿಗೆ ಅವರು ಮಾತನಾಡಿದರು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿ ಕಳೆದ ಎರಡೂವರೆ ವರ್ಷಗಳಲ್ಲಿ ಈ ಉಪಕ್ರಮಗಳು ರೈತರ ಭೂಮಿಗಳನ್ನು


ಉದಯವಾಹಿನಿ ಚಿತ್ರ

ಹಸಿರುಗಾರ ಮಾಡುವಲ್ಲಿ ಮಹತ್ವದ ಪಾತ್ರ ವಹಿಸಿವೆ ಎಂದರು. ಸಣ್ಣ ನೀರಾವರಿ ಇಲಾಖೆಯು ರಾಜ್ಯದಲ್ಲಿ ಅಂತರ್ಜಲ ಅಭಿವೃದ್ಧಿಯ ಮುಖ್ಯ ಇಲಾಖೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ಕೆರೆಗಳನ್ನು ನೀರಿನಿಂದ ತುಂಬಿಸುವುದರಿಂದ ಹಿಡಿ ಚೆಕ್ ಡ್ಯಾಮ್‌ಗಳ ನಿರ್ಮಾಣದವರೆಗಿನ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಜಾರಿಗೊಳಿಸಲಾಗುತ್ತಿದೆ.

ಮೇ ತಿಂಗಳಿನಿಂದ ಸಚಿವರಾಗಿ ಸೇರಿದ ನಾನು, ಸಿಎಂ ಸಿದ್ಧರಾಮಯ್ಯ ಅವರ ಮಾರ್ಗದರ್ಶನದಲ್ಲಿ 12 ಸಾವಿರ ಕಾಮಗಾರಿಗಳನ್ನು ನಡೆಸಿದ್ದೇನೆ. ಕಾವೇರಿ, ಕೃಷ್ಣಾ, ತುಂಗಭದ್ರ ಮತ್ತು ನೇತ್ರಾವತಿ ನದಿಗಳಿಂದ ಲಿಫ್ಟ್ ಇರಿಗೇಷನ್ ಮೂಲಕ 428 ಕೆರೆಗಳನ್ನು ತುಂಬಿಸುವ ಕೆಲಸವು ಅಂತರ್ಜಲವನ್ನು ಹೆಚ್ಚಿಸುವಲ್ಲಿ ಉತ್ತಮ ಫಲ ನೀಡಿದೆ,'' ಎಂದು ಸಚಿವರು ಹೇಳಿದರು. ಈ ಕಾಮಗಾರಿಗಳು ಕೇವಲ ನೀರಿನ ಸಂರಕ್ಷಣೆಗೆ ಮಾತ್ರ ಸೀಮಿತವಲ್ಲ, ರೈತರ ಆದಾಯವನ್ನು ದುಪ್ಪಟ್ಟು ಮಾಡುವ ದೃಷ್ಟಿಯಿಂದಲೂ ನೋಡಲಾಗಿದೆ ಎಂದರು.

### ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆ ಬಗ್ಗೆ ಬಿಜೆಪಿ ನಾಯಕರು ಬಾಯಿ ಬಿಡುತ್ತಿಲ್ಲ: ಡಿಕೆ ಶಿವಕುಮಾರ್

## ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ

• ಉದಯವಾಹಿನಿ, ಕಲಬುರಗಿ

ಕೇಂದ್ರ ಸರ್ಕಾರ ಇತ್ತೀಚೆಗೆ ಅಡುಗೆ ಅನಿಲ ಬೆಲೆ ಏರಿಕೆ ಮಾಡಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಡಿಸಿಎಂ ಡಿಕೆ ಶಿವಕುಮಾರ್ ಅವರು, ಈ ಬಗ್ಗೆ ರಾಜ್ಯದ ಬಿಜೆಪಿ ನಾಯಕರು ಯಾಕೆ ಬಾಯಿ ಬಿಡುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ. ಕಲಬುರ್ಗಿಯಲ್ಲಿ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು. ಬಿಜೆಪಿ ಸರ್ಕಾರ ಗ್ಯಾಸ್ ಸಿಲಿಂಡರ್ ಬೆಲೆಯನ್ನ 60 ರೂಪಾಯಿ ಏರಿಕೆ ಮಾಡಿದೆ. ಇದರ ಬಗ್ಗೆ ಒಬ್ಬನೇ ಒಬ್ಬ ಬಿಜೆಪಿ ನಾಯಕರು ಬಾಯಿ ಬಿಡುತ್ತಿಲ್ಲ. ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ ಎಂದು ತಿಳಿಸಿದರು.

**ಕಲಬುರಗಿಗೆ 2 ವರ್ಷದಲ್ಲಿ 2 ಸಾವಿರ ಕೋಟಿ ಹಣ:** ಕಳೆದ ಎರಡು ವರ್ಷಗಳಲ್ಲಿ ಸುಮಾರು 2 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಹಣ ಕಲಬುರಗಿ ಜಿಲ್ಲೆಗೆ ನೀಡಲಾಗಿದೆ. ಸುಮಾರು 2000 ಮನೆಗಳನ್ನು ಕೊಳಚೆ ನಿರ್ಮೂಲನಾ ಮಂಡಳಿಯಿಂದ ಹಂಚಿಕೆ ಮಾಡಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. 365 ಕೋಟಿ ರೂ.ವೆಚ್ಚದಲ್ಲಿ ಬೆಣ್ಣೆತೊರ ಜಲಾಶಯಕ್ಕೆ ಕಾಗಿಣಾ ಮತ್ತು ಭೀಮಾ ನದಿ ಸಂಗಮದಿಂದ ನೀರು ತುಂಬಿಸಲಾಗುತ್ತಿದೆ ಐದು ಗ್ಯಾರಂಟಿಗಳ ಜೊತೆಗೆ ಭೂ ಗ್ಯಾರಂಟಿ ನೀಡಿ ಬಡವರ ಮನೆ ಬೆಳಕಾಗಿದ್ದೇವೆ. 400 ಕ್ಕೂ ಹೆಚ್ಚು ಕೆರೆಗಳನ್ನು ತುಂಬಿಸುವ ಕೆಲಸ ಮಾಡುತ್ತೇವೆ ಆ



ಮೂಲಕ ನೀರಾವರಿ ಗ್ಯಾರಂಟಿ ನೀಡುತ್ತಿದ್ದೇವೆ ಎಂದರು. ಶಿಕ್ಷಣ ಇಲಾಖೆ ಅಡಿಯಲ್ಲಿ ರಾಜ್ಯದಲ್ಲಿ 2000 ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲು ತೀರ್ಮಾನ ಮಾಡಿದ್ದೇವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 330 ಶಾಲೆಗಳನ್ನು ಸ್ಥಾಪಿಸಲಾಗುತ್ತದೆ. ಜೊತೆಗೆ 2.50 ಲಕ್ಷ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ತುಂಬಲಾಗುವುದು. ಸದ್ಯ 56,000ಕ್ಕೂ ಅಧಿಕ ಖಾಲಿ ಹುದ್ದೆ ತುಂಬಲು ಈಗಾಗಲೇ ಕ್ರಮ ವಹಿಸಲಾಗಿದೆ ಎಂದರು. ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದ ಜನರಿಗೆ ನೆಮ್ಮದಿ ಜೀವನ ನಡೆಸಲು ಸರ್ಕಾರ ಪ್ರತಿ ವರ್ಷ 52,000 ಕೋಟಿ ರೂ.ಗೂ ಅಧಿಕ ವೆಚ್ಚ ಮಾಡುತ್ತಿದೆ. ಇದು ನಮ್ಮ ಬದ್ಧತೆ ಎಂದರು.

ಸಾಧನೆ ತನ್ನ ಪಾಡಿಗೆ ಆಗುವುದಿಲ್ಲ. ಅದರ ಹಿಂದೆ ಶ್ರಮ ಇರಬೇಕು, ಛಲ ಇರಬೇಕು. ಜನರ ಬದುಕನ್ನು ಬದಲಾವಣೆ ಮಾಡುತ್ತೇನೆ ಎನ್ನುವ ಹಠ ಇರಬೇಕು. ಜನರ ಕಣ್ಣೀರನ್ನು ಒರೆಸುವ ಕೆಲಸ ಮಾಡಬೇಕು. ಮಲ್ಲಿಕಾರ್ಜುನ ಖರ್ಗೆ ಅವರ ಋಣವನ್ನ ಕಲ್ಯಾಣ ಕರ್ನಾಟಕದ ಜನತೆ ತೀರಿಸಿದ್ದಾರೆ. 371 ಜೆ ಮೂಲಕ ಈ ಭಾಗದ ಜನರ ಬದುಕನ್ನು ಬದಲಾವಣೆ ಮಾಡಿದ್ದಾರೆ. ಈ ಭಾಗದಲ್ಲಿ ಸಂಸತ್ ಸದಸ್ಯರನ್ನು ಗೆಲ್ಲಿಸುವ ಮೂಲಕ ಅವರಿಗೆ ಋಣ ಸಂದಾಯ ಮಾಡಿದ್ದೀರಿ ಎಂದರು.

ಅವರು ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗುತ್ತಿದ್ದಾರೆ. ಕನಕಪುರದ ಜನತೆ ನನಗೆ ಆಶೀರ್ವಾದ ಮಾಡಿದಂತೆ ನೀವು ಕೂಡಾ ಪ್ರಿಯಾಂಕ್ ಖರ್ಗೆ, ರಾಧಾಕೃಷ್ಣ ದೊಡ್ಡಮನಿ ಅವರಿಗೆ ಆಶೀರ್ವಾದ ಮಾಡಬೇಕು ಹಾಗೂ ಅವರ ಕುಟುಂಬದ ಜೊತೆಗೆ ಸದಾ ಇರಬೇಕು ಎಂದು ಮನವಿ ಮಾಡಿದರು. ಮಲ್ಲಿಕಾರ್ಜುನ ಖರ್ಗೆ ಅವರು ಈ ಹಿಂದೆ ನೀರಾವರಿ ಸಚಿವರಾಗಿದ್ದಾಗ ನೂರಾರು ಚೆಕ್ ಡ್ಯಾಂಗಳನ್ನು ನಿರ್ಮಾಣ ಮಾಡಿ ಕೆರೆಗಳನ್ನು ತುಂಬಿಸಿದವರು. ಅನೇಕ ಕಡೆ ಅಂತರ್ಜಲ ಸಾವಿರಾರು ಅಡಿ ತಲುಪಿತ್ತು. ಈಗ 300-400 ಅಡಿಗಳಿಗೆ ನೀರು ದೊರೆಯುತ್ತಿದೆ ಎಂದು ತಿಳಿಸಿದರು.

**ಈ ರಾಜ್ಯದ ರೈತರ ಪರವಾಗಿ ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ. ಜನಸಾಮಾನ್ಯರ ಪರವಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಅವರ ಜೀವನಕ್ಕೆ ನೆರವಾಗಿದೆ. ಐದು ಗ್ಯಾರಂಟಿ ಯೋಜನೆಗಳು ಬದುಕನ್ನು ಹಸನಾಗಿಸಿದೆ. 20 ಸಾವಿರ ಕೋಟಿಯನ್ನ ರೈತರ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಲು ಬಳಸುತ್ತಿದ್ದೇವೆ.**

**-ಡಿ.ಕೆ. ಶಿವಕುಮಾರ್, ಡಿಸಿಎಂ**

**ಪ್ರಿಯಾಂಕ್ ಖರ್ಗೆ ಭವಿಷ್ಯದ ನಾಯಕ**

**ನಮ್ಮ ರಾಜ್ಯಕ್ಕೆ ಭವಿಷ್ಯದ ನಾಯಕರಾಗಿ ಪ್ರಿಯಾಂಕ್ ಖರ್ಗೆ ಅವರನ್ನು ಈ ಕಲಬುರ್ಗಿ ಜನತೆ ನೀಡಿದ್ದಾರೆ. ಅವರಿಗೆ ನಮ್ಮೆಲ್ಲರ ಪರವಾಗಿ ಕೋಟಿ, ಕೋಟಿ ನಮಸ್ಕಾರಗಳು ಎಂದರು. ಸಚಿವ ಪ್ರಿಯಾಂಕ್ ಖರ್ಗೆ ಅವರ ಕಾರ್ಯಕ್ಷಮತೆ ಅತ್ಯುತ್ತಮ ಆಗಿದೆ. ಮಲ್ಲಿಕಾರ್ಜುನ ಖರ್ಗೆ ಸಾಹೇಬರ ಮಾರ್ಗದರ್ಶನದಲ್ಲಿ ಪ್ರಿಯಾಂಕ್ ಖರ್ಗೆ ಉತ್ತಮ ಕೆಲಸ ಮಾಡುತ್ತಿದ್ದಾರೆ. ಯಾವುದೇ ಇಲಾಖೆಯ ಜವಾಬ್ದಾರಿ ನೀಡಿದರು ಅಷ್ಟೇ ದಕ್ಷತೆಯಿಂದ ಕೆಲಸ ಮಾಡುತ್ತಾರೆ. ಪಕ್ಷ, ರಾಜ್ಯದ ಅಭಿವೃದ್ಧಿಗೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದ್ದಾರೆ. ಸರ್ವ ಸಮುದಾಯಗಳ ಏಳಿಗೆಗೆ ದುಡಿಯುತ್ತಿದ್ದಾರೆ ಎಂದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ನಿಮ್ಮ ಹೆಂಡತಿಯ ಜೊತೆ ಪ್ರವಾಸಕ್ಕೆ ಹೋಗಲು ಒಳ್ಳೆಯ ದಿನ.

**ವೃಷಭ** ನಿಮ್ಮ ಅಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ.

**ಮಿಥುನ** ಸಂಗಾತಿಯ ನಿಷ್ಠಾವಂತ ಹೃದಯ, ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಕುಟುಂಬ, ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನೀವು ಏನು ಮಾಡಬೇಕೆಂದು ಆಜ್ಞೆ ನೀಡಿದಲ್ಲಿ ನಿಮ್ಮ ಪ್ರೇಮಿಯ ಜೊತೆ ಸಮಸ್ಯೆಗಳನ್ನು ಹೊಂದುತ್ತೀರಿ.

**ಕರ್ಕಾಟಕ** ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು.ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಸಂಬಂಧಿಗಳು ನಿಮಗೆ ಅನಿರೀಕ್ಷಿತ ಉಡುಗೊರೆ ತಂದರೂ ನೀವೂ ಅವರಿಗೆ ಸಹಾಯ ಮಾಡಬೇಕೆಂದು ನಿರೀಕ್ಷಿಸಬಹುದು.

**ಸಿಂಹ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಥ್ಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ನಿಮ್ಮ ಜೊತೆಗಿರುವ ನಿಮ್ಮೊಂದಿಗೆ ಬಹಳ ಸಂತೋಷದಿಂದಿರುವುದಿಲ್ಲ.

**ಕನ್ಯಾ** ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಈ ರಾಶಿಚಕ್ರದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು. ಸಂಬಂಧಿಗಳು, ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ.

**ತುಲಾ** ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ದೇಹಕ್ಕೆ ಮಸಾಜ್ ಮಾಡಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

**ವೃಶ್ಚಿಕ** ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ, ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ- ನೀವು ಒತ್ತಡ, ಸಂದಿಗ್ಧತೆಯನ್ನು ಬಯಸುವುದಿಲ್ಲ ರಾತ್ರಿಯ ವೇಳೆಯಲ್ಲಿ ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ಧನಸ್ಸು** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ. ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ.

**ಮಕರ** ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಇಂದು ನಿಮಗೆ ದೊರಕುವ ಹೊಸ ಹೂಡಿಕೆಯ ಅವಕಾಶಗಳನ್ನು ಅನ್ವೇಷಿಸಿ-ಆದರೆ ಈ ಯೋಜನೆಗಳ ಕಾರ್ಯಸಾಧ್ಯತೆಯನ್ನು ಅಧ್ಯಯನ ಮಾಡಿದ ನಂತರವೇ ನೀವು ಇದರಲ್ಲಿ ತೊಡಗಿಸಿಕೊಳ್ಳಬೇಕು.

**ಕುಂಭ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಇತರರ ವ್ಯವಹಾರಗಳಲ್ಲಿ ನಿಮ್ಮ ಮೂಗುತೂರಿಸುವಿಕೆಯನ್ನು ಇಂದು ತಡೆಯಬೇಕು.

**ಮೀನ** ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು.

# ಬರಿದಾಗುತ್ತಿದೆ ಚಕ್ರಾ ನದಿ; ಹೆಚ್ಚಾಗ್ತಿದೆ ಬೇಸಿಗೆ ಬವಣೆ

## ಚಕ್ರಾ ನದಿ ಬೇಸಿಗೆ ಪೂರ್ಣವಾಗಿ ಬರಿದಾಗುವ ಲಕ್ಷಣ, ನದಿಪಾತ್ರದ 30ಕ್ಕೂ ಅಧಿಕ ಗ್ರಾಮಗಳಲ್ಲಿ ನೀರಿನ ಕೊರತೆ

• **ಉದಯವಾಹಿನಿ, ಕುಂದಾಪುರ**

ತಾಲ್ಲೂಕಿನ ಮಲೆನಾಡಿನ ಜೀವನದಿ ಎಂದು ಕರೆಯಲ್ಪಡುವ ಚಕ್ರಾ ನದಿ ಈ ವರ್ಷವೂ ಬೇಸಿಗೆ ಪೂರ್ಣವಾಗಿ ಆರಂಭವಾಗುವ ಮುನ್ನವೇ ಬರಿದಾಗುವ ಲಕ್ಷಣ ತೋರಿಸುತ್ತಿದೆ. ಕಡು ಬೇಸಿಗೆಯ ಮುನ್ನವೇ ನದಿಯಲ್ಲಿ ನೀರಿನ ಮಟ್ಟ ಗಣನೀಯವಾಗಿ ಕುಸಿದಿದ್ದು, ಆಳವಿರುವ ಕೆಲವೆಡೆ ಮಾತ್ರ ಅಲ್ಪಸ್ವಲ್ಪ ನೀರು ಉಳಿದಿರುವ ಸ್ಥಿತಿ ಕಂಡುಬಂದಿದೆ. ಪ್ರತಿ ವರ್ಷ ಅವಧಿಗೂ ಮುನ್ನ ನದಿಯಲ್ಲಿ ನೀರು ಬತ್ತುತ್ತಿರುವುದರಿಂದ ನದಿಪಾತ್ರದ 30 ಕ್ಕೂ ಅಧಿಕ ಗ್ರಾಮಗಳಲ್ಲಿ ನೀರಿನ ಕೊರತೆ ಕಾಡುತ್ತಿದೆ. ಹಳ್ಳಿಹೊಳೆಯಿಂದ ವಂಡ್ಸೆ ತನಕ ಹರಡುವ ಅರಣ್ಯ ತಪ್ಪಲಿನ ಹಲವು ಗ್ರಾಮಗಳಿಗೆ ಚಕ್ರಾ ನದಿಯೇ ಪ್ರಮುಖ ಜೀವನಾಡಿಯಾಗಿದೆ.

ಶಿವಮೊಗ್ಗ ಜಿಲ್ಲೆಯ ಸಾವೆಹಕ್ಲು ಪ್ರದೇಶದಲ್ಲಿ ಉದ್ಭವಿಸುವ ಚಕ್ರಾ ನದಿ ಕುಂದಾಪುರ ತಾಲ್ಲೂಕಿನ ವಂಡ್ಸೆ ತನಕ ಹರಿದು ಹೋಗುತ್ತದೆ. ಆದರೆ ಸಾವೆಹಕ್ಲು ಭಾಗದಲ್ಲಿ ಚಕ್ರಾ ನದಿಗೆ ಹರಿಯುವ ನೀರನ್ನು ಲಿಂಗನಮಕ್ಕಿ ಅಣೆಕಟ್ಟೆಗೆ ತಿರುಗಿಸಲಾಗುತ್ತಿರುವುದೇ ನದಿಯಲ್ಲಿ ನೀರಿನ ಮಟ್ಟ ಕುಸಿಯಲು ಪ್ರಮುಖ ಕಾರಣ ಎಂದು ಈ ಭಾಗದ ರೈತರು ಆರೋಪಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ನದಿಯಲ್ಲಿ ನೀರಿನ ಮಟ್ಟ ಗಣನೀಯ ಕುಸಿತ**

ಸ್ಥಳೀಯರಾದ ಬಾಂಡ್ಯ ಸುಭಾಶ್ಚಂದ್ರ ಶೆಟ್ಟಿ ಅವರ ಪ್ರಕಾರ, ನದಿ ಅವಧಿಗೂ ಮುನ್ನವೇ ಬತ್ತುತ್ತಿದೆ. ಸಾವೆಹಕ್ಲುನಿಂದ ಸಾಮಾನ್ಯವಾಗಿ ಚಕ್ರಾ ನದಿಗೆ ಹರಿಯುವ ನೀರಿಗೆ ಮಾಡಿರುವ ಅಡಿತಡೆಗಳನ್ನು ತೆರವುಗೊಳಿಸಬೇಕು. ವಾರಾಹಿ ಯೋಜನೆಯಡಿ ಹೊಸಂಗಡಿ ಕೋಟೆಕೆರೆ ತುಂಬಿಸಿ ಅಲ್ಲಿಂದ ಚಕ್ರಾ ನದಿಗೆ ನೀರು ಹರಿಸಿದರೆ ನದಿ ಹಾಗೂ ನದಿಪಾತ್ರದ ರೈತರ ಬದುಕಿಗೆ ನೆರವಾಗುತ್ತದೆ ಎಂದು ಹೇಳಿದ್ದಾರೆ.

> ಸುಮಾರು 20-30 ಕಿ.ಮೀ ವ್ಯಾಪ್ತಿಯ ಹೊಳೆ ಪ್ರದೇಶದಲ್ಲಿ ಕೆಲವೆಡೆ ನೀರು ಸಂಪೂರ್ಣ ಬರಿದಾಗಿದೆ. ಆಳವಿರುವ ಭಾಗಗಳಲ್ಲಿ ಮಾತ್ರ ಸ್ವಲ್ಪ ನೀರು ಉಳಿದಿದೆ. ಇದರಿಂದ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ಕೃಷಿತೋಟಗಳಿಗೆ ನೀರಿನ ತೀವ್ರ ಕೊರತೆ ಎದುರಾಗುತ್ತಿದೆ. ಅಂದಾಜು 35ಕ್ಕೂ ಹೆಚ್ಚು ಗ್ರಾಮಗಳು ಸಂಕಷ್ಟ ಎದುರಿಸುತ್ತಿವೆ.
>
> -ಮಂಜುನಾಥ್ ನಾಯಕ್, ನದಿಪಾತ್ರದ ಕೃಷಿಕ.

**ನದಿಪಾತ್ರದ ಗ್ರಾಮಗಳಿಗೆ ಸಂಕಷ್ಟ:** ಚಕ್ರಾ ನದಿಯಲ್ಲಿ ನೀರಿನ ಮಟ್ಟ ಕುಸಿದಿರುವುದರಿಂದ ನದಿಪಾತ್ರದ ಸುಮಾರು 30-35 ಗ್ರಾಮಗಳಲ್ಲಿ ನೀರಿನ ಕೊರತೆ ಕಾಣಿಸಿಕೊಂಡಿದೆ.

**ಅಂತರ್ಜಲ ಮಟ್ಟ ಕುಸಿತದ ಆತಂಕ:** ನದಿಯಲ್ಲಿ ಹರಿವು ಕ್ಷೀಣವಾಗುತ್ತಿರುವ ಪರಿಣಾಮ ಸುತ್ತಮುತ್ತಲಿನ ಬಾವಿ ಹಾಗೂ ಕೊಳವೆಬಾವಿಗಳಲ್ಲಿಯೂ ನೀರಿನ ಮಟ್ಟ ಕುಸಿಯುವ ಲಕ್ಷಣಗಳು ಕಂಡುಬರುತ್ತಿವೆ.

**ವನ್ಯಜೀವಿಗಳಿಗೆ ನೀರಿನ ಕೊರತೆ:** ಚಕ್ರಾ ನದಿ ವನ್ಯಜೀವಿಗಳಿಗೆ ಪ್ರಮುಖ ನೀರಿನ ಮೂಲವಾಗಿದೆ. ನೀರು ಕಡಿಮೆಯಾಗುತ್ತಿರುವುದರಿಂದ ಕಾಡುಪ್ರಾಣಿಗಳಿಗೂ ನೀರಿನ ಕೊರತೆ ಎದುರಾಗುತ್ತಿದೆ.

**ನೀರಿನ ಹರಿವು ಮರುಸ್ಥಾಪನೆಗೆ ಆಗ್ರಹ**


ಸಾವೆಹಕ್ಲು ಭಾಗದಲ್ಲಿ ಚಕ್ರಾ ನದಿಗೆ ಹರಿಯುವ ನೀರಿಗೆ ಮಾಡಿರುವ ಅಡಿತಡೆ ತೆರವುಗೊಳಿಸಿ, ವಾರಾಹಿ ಯೋಜನೆಯಡಿ ಹೊಸಂಗಡಿ ಕೋಟೆಕೆರೆ ತುಂಬಿಸಿ ಅಲ್ಲಿಂದ ನದಿಗೆ ನೀರು ಹರಿಸಲು ಸ್ಥಳೀಯರು ಆಗ್ರಹಿಸಿದ್ದಾರೆ.

## ಹಜರತ್ ಸೈಯದ್ ಶಾವಲಿ ಅವರ ಸಂಭ್ರಮದ ಹಿಂದೂ-ಮುಸ್ಲಿಂರ ಭಾವೈಕ್ಯದ ಉರುಸ್

• **ಉದಯವಾಹಿನಿ, ಯಲಬುರ್ಗಾ**

ತಾಲ್ಲೂಕಿನ ಮುಧೋಳ ಗ್ರಾಮದಲ್ಲಿ ಹಿಂದೂ, ಮುಸ್ಲಿಂರ ಮಧ್ಯೆ ಭಾವೈಕ್ಯದ ಬೆಸುಗೆ ಇಲ್ಲಿಯ ಹಜರತ್ ಖಾಜಾ ಸೈಯದ್ ಷಾ ಅಬ್ದುಲ್ ರಹೀಮ್ ಹುಸೇನಿಯವರ ಉರುಸ್ ಸಡಗರ, ಸಂಭ್ರಮ, ವೈಭವದಿಂದ ನಡೆಯಿತು. ಉರುಸ್ ನಿಮಿತ್ತ ಬೆಳಗಿನಿಂದ ಸಂಜೆಯವರೆಗೂ ಹಜರತ್ ಖಾಜಾ ಸೈಯದ್ ಷಾ ಅಬ್ದುಲ್ ರಹೀಮ್ ಹುಸೇನಿಯವರ ದರ್ಗಾಕ್ಕೆ ಅಪಾರ ಸಂಖ್ಯೆಯ ಭಕ್ತರು ಆಗಮಿಸಿ, ಪೂಜೆ ( ಫಾತೆಹ ) ಸಲ್ಲಿಸಿ, ಹರಕೆಯನ್ನು ತೀರಿಸಿದರು.

ಗ್ರಾಮದ ಎಲ್ಲಾ ಆತ್ಮೀಯರನ್ನು ಅಹ್ವಾನಿಸಿ ಸಾಮೂಹಿಕ ಭೋಜನ ಸವಿದರು. ರಾತ್ರಿ ಮುಗ್ಧ ಮನಸ್ಸುಗಳ ಮದರಸ ಮಕ್ಕಳಿಂದ ವೇದಿಕೆ ಕಾರ್ಯಕ್ರಮ ನಡೆಯಿತು. ನಂತರ ಶಿಕ್ಷಕರು ಜೀವನಸಾಬ್ ಬಿನ್ನಾಳ ಕಲಾ ತಂಡದಿಂದ, ಜನಪದ ಹಾಗೂ ಹಾಸ್ಯಮಯ ಕಾರ್ಯಕ್ರಮ ನಡೆಯಿತು. ಸಹಸ್ರಾರು ಜನರು ಪಾಲ್ಗೊಂಡಿದ್ದರು. ಹಜರತ್ ಸೈಯದ್ ಶಾವಲಿ ಅಂಜುಮನ್ ಕಮಿಟಿ ಧರ್ಮದ ಗುರುಗಳು ಹಜರತ್ ಪೀರೆ ತರೀಖತ್ ಖಾಜಿ ಸಯ್ಯದ್ ಮೊಹಮ್ಮದ್ ಅಬ್ದುಲ್ ಖಾಜಿ. ಮದರಸ ಕಲಿಸುವ ಹಜರತರು. ಹಸೇನಾಸಬ್ ವಕೀಲರು. ಸಯ್ಯದಸಾಬ್ ಶಿಳ್ಳಿನ.


ಉದಯವಾಹಿನಿ ಚಿತ್ರ

ಲಾಲಾಸಾಬ್ ಆರಬಳ್ಳಿನ. ಮಾಬುಸಾಬ್ ಹಿರೇಮನಿ(ಚೆರಮನರು) ಹುಸೇನ್ ಸೊಟ್ಟಪ್ಪ. ದಾವಲಾಸಾಬ್ ಆರಾಬಳ್ಳಿನ. ತಿಮ್ಮರೆಡ್ಡಿ ವಡ್ಡರ. ಹಾಸೆನಸಾಬ್ ಮಂಗಳೂರ್. ಗುಡಸಾಬ್ ರಾಟಿ. ಇನ್ನು ಹಲವಾರು ಯುವಕರು. ಮತ್ತು ಅನೇಕ ಗಣ್ಯರು, ವಿವಿಧ ಸಮಾಜದ ಮುಖಂಡರು ದರ್ಗಾಕ್ಕೆ ಆಗಮಿಸಿ ಭಕ್ತಿಯನ್ನು ಸಮರ್ಪಿಸಿದರು. 3 ದಿನಗಳವರೆಗೆ ಶ್ರದ್ಧಾ, ಭಕ್ತಿ, ವೈಭವದಿಂದ ನಡೆಯುವ ಉರುಸ್ ಕಾರ್ಯಕ್ರಮದಲ್ಲಿ ಹಿಂದೂ-ಮುಸ್ಲಿಂ ಭಾವೈಕ್ಯತೆಯ ಭಕ್ತರೆಲ್ಲರೂ ಪಾಲ್ಗೊಂಡು ಭಾವೈಕ್ಯತೆ ಮೆರೆಯುವುದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಹಿಂದೂ ಭಕ್ತರು ತಮ್ಮ ಚಿಕ್ಕಮಕ್ಕಳ ತೂಕದಷ್ಟು ಸಕ್ಕರೆ, ಹಾಗೂ ಕಾಣಿಕೆಯಾಗಿ ದರ್ಗಾಕ್ಕೆ ಸಮರ್ಪಿಸಿದರು.


## ಕೈಗಾರಿಕಾ ಕೇಂದ್ರ ಜಂಟಿನಿರ್ದೇಶಕರಾಗಿದ್ದ ಆನಂದ್ ಅವರಿಗೆ ಆತ್ಮೀಯ ಬೀಳ್ಕೊಡುಗೆ

• **ಉದಯವಾಹಿನಿ, ಚಿತ್ರದುರ್ಗ**

ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಶನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್, ಬೆಂಗಳೂರು ಇಲ್ಲಿನ ವ್ಯವಸ್ಥಾಪಕ ನಿರ್ದೇಶಕರಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ, ವರ್ಗಾವಣೆಗೊಂಡ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿನಿರ್ದೇಶಕ ಬಿ. ಆನಂದ್ ಅವರಿಗೆ ಕೈಗಾರಿಕೆ ಇಲಾಖೆ ವತಿಯಿಂದ ಶನಿವಾರದಂದು ಆತ್ಮೀಯವಾಗಿ ಬೀಳ್ಕೊಡುಗೆ ನೀಡಲಾಯಿತು.

ಕಳೆದ ನಾಲ್ಕು ವರ್ಷಗಳ ಕಾಲ ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾಗಿ ಚಿತ್ರದುರ್ಗ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿರುವ ಬಿ. ಆನಂದ್ ಅವರು, ಜಿಲ್ಲೆಯಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಮಾತ್ರವಲ್ಲದೆ, ದೊಡ್ಡ ಮಟ್ಟದ ಕೈಗಾರಿಕೆಗಳ ಸ್ಥಾಪನೆಗೂ ಸಹಕಾರ ನೀಡಿ, ಇಲ್ಲಿ ಕೋಟ್ಯಾಂತರ ರೂಪಾಯಿಗಳ ಬಂಡವಾಳ ಹೂಡಿಕೆ, ಉದ್ಯೋಗ ಸೃಜನೆಗೂ ಕಾರಣಕರ್ತರಾಗಿದ್ದರು.

ಇವರ ಗಣನೀಯ ಸೇವೆಯನ್ನು ಗುರುತಿಸಿದ ಸರ್ಕಾರ, ಇವರನ್ನು ಕರ್ನಾಟಕ ರಾಜ್ಯದ ಉದ್ಯಮ ಸಂಸ್ಥೆಯಾಗಿರುವ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಶನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್‌ಗೆ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನೇಮಕಗೊಳಿಸಿ, ವರ್ಗಾವಣೆಗೊಳಿಸಿದ್ದು, ಈಗಾಗಲೆ ಈ ಹುದ್ದೆಯ ಅಧಿಕಾರವನ್ನು ಆನಂದ್ ಅವರು ವಹಿಸಿಕೊಂಡಿದ್ದಾರೆ. ಚಿತ್ರದುರ್ಗ ಕೈಗಾರಿಕೆ ಇಲಾಖೆಯ ಜಂಟಿನಿರ್ದೇಶಕರ ಹುದ್ದೆಯ ಪ್ರಭಾರವನ್ನು ಇದೇ ಕಚೇರಿಯ ಉಪನಿರ್ದೇಶಕರಾದ ಮಂಜುನಾಥ್ ಅವರಿಗೆ ವಹಿಸಿಕೊಡಲಾಗಿದೆ. ಹೀಗಾಗಿ ಚಿತ್ರದುರ್ಗ ಜಿಲ್ಲಾ ಕೈಗಾರಿಕಾ ಕೇಂದ್ರದ ಕಚೇರಿಯ ಅಧಿಕಾರಿ, ಸಿಬ್ಬಂದಿ, ವಿವಿಧ ಕೈಗಾರಿಕೋದ್ಯಮಿಗಳು ಬಿ. ಆನಂದ್ ಅವರಿಗೆ ಶನಿವಾರದಂದು ಕೈಗಾರಿಕೆ ಇಲಾಖೆಯ ಕಚೇರಿಯಲ್ಲಿ ಏರ್ಪಡಿಸಿದ ಸಮಾರಂಭದಲ್ಲಿ ಆತ್ಮೀಯವಾಗಿ ಸನ್ಮಾನಿಸಿ, ಬೀಳ್ಕೊಡುಗೆ ನೀಡಿದರು.


ಉದಯವಾಹಿನಿ ಚಿತ್ರ

## ಹತ್ತಿಕುಣಿ ಭಾಗದ ಕಾಡಾ ನಾಲಾ ಆಧುನೀಕರಣಕ್ಕೆ 68 ಕೋಟಿ ರೂ.ಮಹತ್ವದ ಘೋಷಣೆ

• **ಉದಯವಾಹಿನಿ, ಯಾದಗಿರಿ**



ಗುರುಮಠಕಲ್ ಕ್ಷೇತ್ರದ ಹತ್ತಿಕುಣಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರಿಗೆ ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಮಹತ್ವದ ಘೋಷಣೆ ಹೊರಬಿದ್ದಿದ್ದು, ಕಾಡಾ ನಾಲಾ ಆಧುನೀಕರಣ ಯೋಜನೆಗೆ ಸುಮಾರು 68 ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ ಈ ಯೋಜನೆ ಜಾರಿಗೆ ಬಂದಲ್ಲಿ ಹಲವು ವರ್ಷಗಳಿಂದ ನೀರಾವರಿ ಸಮಸ್ಯೆ ಎದುರಿಸುತ್ತಿದ್ದ ರೈತರಿಗೆ ಬಹುಮುಖ್ಯ ಪರಿಹಾರ ದೊರೆಯಲಿದೆ. ಈ ಯೋಜನೆಯಿಂದ ಹತ್ತಿಕುಣಿ, ಕಟಗಿ ಶಹಾಪುರ, ಹೊನಗೇರಿ, ಯಡ್ಡಳ್ಳಿ, ಬಂದಳ್ಳಿ, ದಸರಾಬಾದ್ ಸೇರಿದಂತೆ ಹಲವು ಗ್ರಾಮಗಳ ಸುಮಾರು 5,400 ಎಕರೆ ಕೃಷಿ ಭೂಮಿಗೆ ಶಾಶ್ವತ ನೀರಾವರಿ ಸೌಲಭ್ಯ ದೊರೆಯಲಿದ್ದು, ರೈತರ ಕೃಷಿ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರೆಯುವ ನಿರೀಕ್ಷೆ ವ್ಯಕ್ತವಾಗಿದೆ. ಕಾಡಾ ನಾಲಾ ಆಧುನೀಕರಣದಿಂದ ನೀರಿನ ಸರಬರಾಜು ಸುಧಾರಣೆಯಾಗುವುದರ ಜೊತೆಗೆ ನೀರಿನ ವ್ಯರ್ಥ ಹರಿವು ಕಡಿಮೆಯಾಗಲಿದೆ. ಈ ಕುರಿತು ಕನ್ನಡಪರ ಹೋರಾಟಗಾರ ಸಿದ್ದು ನಾಯಕ ಹತ್ತಿಕುಣಿ ಪ್ರತಿಕ್ರಿಯೆ ನೀಡಿದ್ದು, ರೈತರ ದೀರ್ಘಕಾಲದ ಬೇಡಿಕೆಗೆ ಸ್ಪಂದಿಸಿ ಈ ಯೋಜನೆಗೆ ಸರ್ಕಾರ ಅನುಮೋದನೆ ನೀಡಿರುವುದು ಸಂತೋಷದ ಸಂಗತಿಯಾಗಿದೆ ಎಂದು ತಿಳಿಸಿದ್ದಾರೆ. ಇದರೊಂದಿಗೆ ಈ ಭಾಗದ ಕೃಷಿ ಅಭಿವೃದ್ಧಿಗೆ ಹೊಸ ದಾರಿಗಳು ತೆರೆಯಲಿವೆ ಎಂದು ಹೇಳಿದ್ದಾರೆ. ಇದಲ್ಲದೆ ರೈತರ ಹಿತದೃಷ್ಟಿಯಿಂದ ಆನೂರು ಕೆ. ಮತ್ತು ಕಂದಳ್ಳಿ ಬ್ರಿಡ್ಜ್-ಕಂ-ಬ್ಯಾರೇಜ್ ಗಳಿಗೆ ಹೈಡ್ರಾಲಿಕ್ ಗೇಟ್ ಅಳವಡಿಸುವ ಕುರಿತು ಸರ್ಕಾರದ ಮಟ್ಟದಲ್ಲಿ ಚರ್ಚೆಗಳು ನಡೆದಿದ್ದು, ಈ ಯೋಜನೆ ಜಾರಿಯಾದರೆ ನೀರಿನ ಸಂಗ್ರಹ ಸಾಮರ್ಥ್ಯ ಹೆಚ್ಚಾಗಿ ರೈತರಿಗೆ ಇನ್ನಷ್ಟು ಅನುಕೂಲವಾಗಲಿದೆ. ಕೃಷಿ ಆಧಾರಿತ ಪ್ರದೇಶವಾಗಿರುವ ಗುರುಮಠಕಲ್ ಕ್ಷೇತ್ರದಲ್ಲಿ ಇಂತಹ ನೀರಾವರಿ ಯೋಜನೆಗಳು ಜಾರಿಯಾಗುವುದರಿಂದ ಗ್ರಾಮೀಣ ಆರ್ಥಿಕತೆಗೆ ಬಲ ಸಿಗಲಿದ್ದು, ರೈತರ ಜೀವನಮಟ್ಟ ಸುಧಾರಣೆಯಾಗಲಿದೆ ಎಂದು ಸ್ಥಳೀಯರು ಆಶಾಭಾವನೆ ವ್ಯಕ್ತಪಡಿಸಿದ್ದಾರೆ.

## ಸಮಾಜದ ಅಭಿವೃದ್ಧಿಗೆ ಮಹಿಳೆಯರು ಮಹತ್ವದ ಕೊಡುಗೆ ನೀಡುತ್ತಿದ್ದಾರೆ: ಸಚಿವ

• **ಉದಯವಾಹಿನಿ, ಬೀದರ**

ಮಹಿಳೆಯರು ಇಂದು ಶಿಕ್ಷಣ, ಉದ್ಯೋಗ, ರಾಜಕೀಯ ಹಾಗೂ ಕ್ರೀಡಾ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮ ಸಾಮರ್ಥ್ಯವನ್ನು ತೋರಿಸಿ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು.

ಅವರು ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಆಯೋಜಿಸಿದ 2025-26ನೇ ಸಾಲಿನ ಬೀದರ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು ಕ್ರೀಡೆಗಳು ಮಹಿಳೆಯರ ಆರೋಗ್ಯ, ಆತ್ಮವಿಶ್ವಾಸ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಇಂತಹ ಕ್ರೀಡಾಕೂಟಗಳು ಗ್ರಾಮೀಣ ಹಾಗೂ ನಗರ ಭಾಗಗಳ ಮಹಿಳೆಯರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗುತ್ತವೆ. ಜಿಲ್ಲೆಯ ಮಹಿಳಾ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಬೇಕು ಎಂದು ಸಚಿವರು ಹಾರೈಸಿದರು.

## ಸೋಲು-ಗೆಲುವು ಸಮಾನವಾಗಿ ಸ್ವೀಕರಿಸಿ: ಗುರುಬಸವ ಪಟ್ಟದ್ದೇವರು

• **ಉದಯವಾಹಿನಿ, ಭಾಲ್ಕಿ**

ವಿದ್ಯಾರ್ಥಿಗಳು, ಸೋಲು-ಗೆಲುವನ್ನು ಲೆಕ್ಕಿಸದೆ ಸ್ಪರ್ಧೆಗಳಲ್ಲಿ ತೊಡಗುವುದರ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು. ಪಟ್ಟಣದ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಅಗಾಧವಾದ ಪ್ರತಿಭೆ ಅಡಗಿದೆ. ಅವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಸೂಕ್ತ ವೇದಿಕೆಯ ಅಗತ್ಯವಿದೆ. ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುವುದರ ಮೂಲಕ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭಾ ಪ್ರದರ್ಶನಕ್ಕೆ ಒಂದು ಒಳ್ಳೆಯ ವೇದಿಕೆ ಕಲ್ಪಿಸಿಕೊಡಲಾಗಿದೆ ಎಂದು ತಿಳಿಸಿದರು. ಪೂಜ್ಯರ ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಮಾನವೀಯ ಕಾರ್ಯಗಳು ಇಂದಿನ ಯುವ ಪೀಳಿಗೆ ಅರಿಯುವುದರ ಮೂಲಕ ದೇಶದ ಸತ್ಪ್ರಜೆಗಳಾಗಿ ರೂಪಗೊಳ್ಳಬೇಕು ಎಂದು ಹೇಳಿದರು.

## ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ

• **ಉದಯವಾಹಿನಿ, ಸುರಪುರ**

ತಾಲ್ಲೂಕಿನಾದ್ಯಂತ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುಂಜಾಗ್ರತೆ ವಹಿಸುವಂತೆ ಶಾಸಕ ರಾಜಾ ವೇಣುಗೋಪಾಲ ನಾಯಕ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಬೇಸಿಗೆ ಕುಡಿಯುವ ನೀರಿನ ಕುರಿತು ನಡೆದ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಈಗಾಗಲೇ ಬೇಸಿಗೆ ಆರಂಭಗೊಂಡಿದ್ದು ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಣಿಸಿಕೊಳ್ಳದಂತೆ ಪಟ್ಟಣ ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ಈಗಿನಿಂದಲೇ ಪರಿಶೀಲನೆ ನಡೆಸಿ ಬೋರ್ವೆಲ್‌ಗಳ ದುರಸ್ತಿ, ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ತಿ ಹಾಗೂ ತೀರ ಸಮಸ್ಯೆ ಉಂಟಾಗುವಂತಹ ಸ್ಥಳಗಳಿಗೆ ಟ್ಯಾಂಕರ್ ಮೂಲಕವೂ ನೀರು ಸರಬರಾಜು ಮಾಡಲು ಎಲ್ಲಾ ರೀತಿಯ ಕ್ರಮ ವಹಿಸುವಂತೆ ತಿಳಿಸಿದರು. ಮುಂಚಿತವಾಗಿಯೇ ಗಮನಿಸದೇ ನಂತರ ಏನಾದರೂ ಸಮಸ್ಯೆ ಕಂಡುಬಂದಲ್ಲಿ ಅದಕ್ಕೆ ಅಧಿಕಾರಿಗಳೆ ನೇರ ಹೊಣೆಯಾಗಲಿದ್ದೀರಿ ಎಂದು ಎಚ್ಚರಿಕೆ ನೀಡಿದರು.

## ಮಹಿಳೆ, ಮಕ್ಕಳ ಮೇಲಿನ ಅಪರಾಧಗಳನ್ನು ತಡೆಗಟ್ಟಲು ಆಗ್ರಹಿಸಿ ಸಹಿ ಸಂಗ್ರಹ

• **ಉದಯವಾಹಿನಿ, ವಿಜಯಪುರ**

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಭಾನುವಾರ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ವಿಜಯಪುರ ಜಿಲ್ಲಾ ಘಟಕವು ಮಹಿಳೆ ಮತ್ತು ಮಕ್ಕಳ ಮೇಲಿನ ಅಪರಾಧಗಳನ್ನು ತಡೆಗಟ್ಟಲು ಆಗ್ರಹಿಸಿ ಸಹಿ ಸಂಗ್ರಹ ಮತ್ತು ಸಾಹಿತ್ಯ ಮಾರಾಟವನ್ನು ನಗರದ ಗಾಂಧಿ ವೃತದಲ್ಲಿ ಹಮ್ಮಿಕೊಳ್ಳಲಾಗಿತ್ತು. ಮಹಿಳೆಯರು ಸಾಕಷ್ಟು ಸಾಧನೆಗಳನ್ನು ಮಾಡಿದ್ದಾರೆ. ಜ್ಞಾನ ಪ್ರಪಂಚಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅದನ್ನೆಲ್ಲ ಲೆಕ್ಕಿಸದೆ ಬರಿ ಹೆಣ್ಣು ಭೋಗದ ವಸ್ತು ಎಂಬಂತೆ ಬಿತ್ತರಿಸಲಾಗುತ್ತಿದೆ. ಸಮಾಜದಲ್ಲಿ ಇನ್ನೂ ಜೀವಂತವಾಗಿರುವ ಊಳಿಗಮಾನ್ಯ ಮೌಲ್ಯಗಳು ಅವಳನ್ನು ದಾಸ್ಯದಲ್ಲಿರಿಸಿದರೆ, ಇಂದಿನ ಕೊಳೆತ ಸಾಂಸ್ಕೃತಿಕ ವ್ಯವಸ್ಥೆಯಿಂದಾಗಿ ಅಶ್ಲೀಲ ಸಿನಿಮಾ ಸಾಹಿತ್ಯ, ಜಾಹೀರಾತುಗಳು, ಸೈಟ್‌ಗಳು , ಮದ್ಯ ಮಾದಕ ವಸ್ತುಗಳ ಹಾವಳಿಯಿಂದಾಗಿ ಸಾಮಾಜಿಕ ವಾತಾವರಣ ಕಲುಷಿತಗೊಂಡು ಅವಳ ಜೀವ -ಜೀವನದ ಮೇಲೆ ನಿರಂತರವಾಗಿ ದಾಳಿಗಳು ಹೆಚ್ಚುತ್ತಿವೆ. ಮಹಿಳೆಯರ ಜ್ವಲಂತ ಸಮಸ್ಯೆಗಳಾದ ಬಾಲ್ಯ ವಿವಾಹ ಸ್ತ್ರೀ ಭ್ರೂಣ ಹತ್ಯೆ , ವರದಕ್ಷಣೆ ಕೊಲೆ, ಲಿಂಗ ತಾರತಮ್ಯ, ಅಪೌಷ್ಟಿಕತೆ, ಅಭದ್ರತೆ ಹಾಗೂ ಕೌಟುಂಬಿಕ ದೌರ್ಜನ್ಯ, ಉದ್ಯೋಗಸ್ಥ ಮಹಿಳೆಯರ ಸಮಸ್ಯೆಗಳ ಪರಿಹಾರಕ್ಕಾಗಿ ಎಲ್ಲಾ ಸ್ತರದ ಮಹಿಳೆಯರನ್ನು ಸಂಘಟಿಸಲಾಗುತ್ತಿದೆ.

ರಾಜ್ಯದಲ್ಲಿ ಮಕ್ಕಳು ಹಾಗೂ ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಗುಂಪು ಅತ್ಯಾಚಾರಗಳು ಕ್ರೂರ ದಾಳಿಗಳು ಜನತೆಯನ್ನು ಆಕ್ರೋಶ ಭರಿತರನ್ನಾಗಿಸಿವೆ . ಕರ್ನಾಟಕದಲ್ಲಿ ಅತ್ಯಾಚಾರ- ಗುಂಪು ಅತ್ಯಾಚಾರದ ಪ್ರಕರಣಗಳು ಗಣನೀಯವಾಗಿ ಏರಿಕೆ ಆಗುತ್ತಲಿವೆ. 2023ರಲ್ಲಿ 600, 2024ರಲ್ಲಿ 739 ಕೇಸುಗಳು ಹಾಗೂ 2025 ಜುಲೈವರೆಗಿನ ಕೇವಲ ಏಳು ತಿಂಗಳಲ್ಲಿ 547 ಪ್ರಕರಣಗಳು ದಾಖಲಾಗಿವೆ. ಅಲ್ಲದೆ ರಾಜ್ಯದಲ್ಲಿ 4 ತಿಂಗಳಲ್ಲಿಯೇ 979 ಬಾಲಕಿಯರ ಮೇಲಿನ ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ. ರಾಜಧಾನಿಯಾದ ಬೆಂಗಳೂರಲ್ಲಿ ಅತಿ ಹೆಚ್ಚು ಎಂದು ಪೊಲೀಸ್ ಇಲಾಖೆ ಬಹಿರಂಗಪಡಿಸಿದೆ. ಇನ್ನು ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಮಿತಿಮೀರುತ್ತಿವೆ, 2025ರ ವರದಿಯ ಪ್ರಕಾರ ಕಳೆದ ಎರಡು ವರ್ಷದಲ್ಲಿ 43000 ಕ್ಕೂ ಅಧಿಕ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ, ಆಡಿ ನಲಿಯಬೇಕಿದ್ದ ಎಳೆಯ ವಯಸ್ಸಿನ ಬಾಲಕಿಯರು ಲೈಂಗಿಕ ದೌರ್ಜನ್ಯಕ್ಕೆ ಬಲಿಯಾಗುವ ಸಂಖ್ಯೆ ಭಾರಿ ಹೆಚ್ಚಳವಾಗಿದೆ. ಎರಡು ವರ್ಷದಲ್ಲಿ ಶೇ. 26 ರಷ್ಟು ಪೋಕ್ಸೊ ಕೇಸುಗಳು ಹೆಚ್ಚಾಗಿದೆ ಎಂದು ವರದಿಯಾಗಿದೆ. ಅದರಂತೆ ದಾಖಲಾಗದ ಅರ್ಧದಷ್ಟು ಪ್ರಕರಣಗಳು ಖುಲಾಸೆಯಾಗುತ್ತಿವೆ. 2022ರಲ್ಲಿ ದಾಖಲಾದ 3209 ಪ್ರಕರಣದಲ್ಲಿ 1567 ಪ್ರಕರಣ ಖುಲಾಸೆಯಾಗಿದೆ. 1224 ಪ್ರಕರಣಗಳು ವಿಚಾರಣಾ ಹಂತದಲ್ಲಿದ್ದರೆ ಕೇವಲ 186 ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗಿದೆ. ಇಂತಹ ಪ್ರಕರಣಗಳಲ್ಲಿ ಶಿಕ್ಷಕರು, ಪ್ರಭಾವಿ ರಾಜಕೀಯ ನಾಯಕರು, ಮಠಾಧೀಶರಂಥವರು ಭಾಗಿಯಾಗಿರುವುದು ನಾಡಿನ ದುರಂತವೇ ಸರಿ ಎಂದರು.


ಉದಯವಾಹಿನಿ ಚಿತ್ರ

**ಸಮಾಜದಲ್ಲಿ ಇನ್ನೂ ಜೀವಂತ**

## ರಾಜ್ಯ ಸರ್ಕಾರದ ಬಜೆಟ್ ಖಾಲಿ ಚೊಂಬು: ಶಾಸಕ

• **ಉದಯವಾಹಿನಿ, ಔರಾದ್**



ಸಿಎಂ ಸಿದ್ದರಾಮಯ್ಯ ಅವರು ಮಂಡಿಸಿರುವ ರಾಜ್ಯ ಬಜೆಟ್ ಜನಸಾಮಾನ್ಯರ ನಿರೀಕ್ಷೆಗಳನ್ನು ಈಡೇರಿಸದ ಖಾಲಿ ಚೊಂಬಿನಂತಿದೆ ಎಂದು ಶಾಸಕ ಪ್ರಭು ಬಿ. ಚವ್ಹಾಣ ಟೀಕಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ರಾಜ್ಯದ ರೈತರು, ಯುವಕರು, ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೆ ಸ್ಪಷ್ಟವಾದ ಯೋಜನೆಗಳನ್ನು ಬಜೆಟ್ ನಲ್ಲಿ ಘೋಷಿಸಿಲ್ಲ. ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಹೆಣಗಾಡುತ್ತಿರುವಂತೆ ಕಾಣುತ್ತಿದೆ ಎಂದಿದ್ದಾರೆ.

ಕಳೆದ ಮೂರು ವರ್ಷಗಳಿಂದ ಅತೀವೃಷ್ಠಿಯಿಂದ ತೀವ್ರ ಬಾಧಿಸಿರುವ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ರಸ್ತೆ, ಸೇತುವೆ, ಕೆರೆ-ಕಟ್ಟೆಗಳು ಒಡೆದು ವಿಪರೀತ ನಷ್ಟ ಸಂಭವಿಸಿದೆ. ಬೆಳೆನಷ್ಟವಾಗಿ ರೈತರು ಕಂಗಾಲಾಗಿದ್ದಾರೆ. ಸರ್ಕಾರ ಅವಶ್ಯಕತೆಗೆ ತಕ್ಕಂತೆ ಅನುದಾನ ಬಿಡುಗಡೆ ಮಾಡುತ್ತಿಲ್ಲ. ನಿಯಮಿತವಾಗಿ ಸಂಬಳ ಸಿಗುತ್ತಿಲ್ಲವೆಂದು ಸರ್ಕಾರಿ ನೌಕರರು ಗೋಳಾಡುತ್ತಿದ್ದಾರೆ.

ಈ ಭಾಗಕ್ಕೆ ಹೊಸ ಯೋಜನೆಯನ್ನು ಘೋಷಿಸುವ ಅಗತ್ಯವಿತ್ತು. ಇದ್ಯಾವುದನ್ನೂ ಮಾಡದೇ ಸರ್ಕಾರ ಅಭಿವೃದ್ಧಿಯನ್ನು ಕೇವಲ ಭಾಷಣಗಳಿಗೆ ಸೀಮಿತ ಗೊಳಿಸಿದಂತೆ ತೋರುತ್ತಿದೆ. ಬೀದರ ಜಿಲ್ಲೆಯಲ್ಲಿ ಪ್ರವಾಸೋದ್ಯಮ, ನೀರಾವರಿ, ಕೈಗಾರಿಕಾ ಕ್ಷೇತ್ರಗಳಿಗೆ ವಿಶೇಷ ಅನುದಾನ ಘೋಷಿಸದೇ ಜನರ ನಿರೀಕ್ಷೆಗಳನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ ನೀರಾವರಿ, ಗ್ರಾಮೀಣ ರಸ್ತೆ, ಕುಡಿಯುವ ನೀರು ಹಾಗೂ ಉದ್ಯೋಗ ಸೃಷ್ಟಿಗೆ ಸಂಬಂಧಿಸಿದಂತೆ ಜನರು ಹೆಚ್ಚಿನ ನಿರೀಕ್ಷೆ ಇಟ್ಟುಕೊಂಡಿದ್ದರು. ಆದರೆ ಈ ಬಜೆಟ್‌ನಲ್ಲಿ ಹೊಸದಾಗಿ ಯಾವುದೇ ಮಹತ್ವದ ಯೋಜನೆಗಳಿಲ್ಲದೆ ಕೇವಲ ಘೋಷಣೆಗಳ ಮಟ್ಟಕ್ಕೆ ಮಾತ್ರ ಸೀಮಿತವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಗೋವುಗಳು ಸೇರಿದಂತೆ ಜಾನುವಾರುಗಳ ಹಿತದೃಷ್ಟಿಯಿಂದ ಹಿಂದೆ ಬಿಜೆಪಿ ನೇತೃತ್ವದ ಸರ್ಕಾರ ಜಾರಿಗೆ ತಂದಿರುವ ಎಲ್ಲಾ ಜನಪ್ರಿಯ ಯೋಜನೆಗಳನ್ನು ಸ್ಥಗಿತಗೊಳಿಸಲಾಗಿದೆ. ಜಿಲ್ಲೆಗೊಂದು ಗೋಶಾಲೆ ಯೋಜನೆಗೆ ಹಣ ನೀಡುತ್ತಿಲ್ಲ. ಜಾನುವಾರುಗಳ ಆರೋಗ್ಯ ಕಾಪಾಡಲು ಜಾರಿಗೆ ತಂದಿದ್ದ ಪಶು ಸಂಜೀವಿನಿ ಆಂಬ್ಯುಲೆನ್ಸ್‌ಗಳು ನಿಂತಲ್ಲೇ ತುಕ್ಕು ಹಿಡಿಯುತ್ತಿವೆ.

ಇರುವ ಗೋಶಾಲೆಗಳು ಮುಚ್ಚುವ ಪರಿಸ್ಥಿತಿಗೆ ಬಂದಿವೆ. ಪುಣ್ಯಕೋಟಿ ದತ್ತು ಯೋಜನೆ ಸ್ಥಗಿತಗೊಂಡಿದೆ. ಗೋವುಗಳನ್ನು ಅಕ್ರಮವಾಗಿ ಕಸಾಯಿ ಖಾನೆಗೆ ಸಾಗಿಸುವ ಧಂಧೆ ಎಗ್ಗಿಲ್ಲದೇ ನಡೆಯುತ್ತಿದೆ. ಜಾನುವಾರುಗಳ ಸಂಖ್ಯೆ ದಿನೇ ದಿನೇ ಕುಸಿಯುತ್ತಿದೆ. ಸರ್ಕಾರ ಜಾನುವಾರು ವಿರೋಧಿಯಾಗಿ ನಡೆದುಕೊಳ್ಳುತ್ತಿದೆ ಎಂದು ಕಿಡಿಕಾರಿದ್ದಾರೆ.

### ಟ್ರಂಪ್ ಒಬ್ಬ ಡಿಕ್ಟೇಟರ್, ಮೋದಿ ಅವರ ಗುಲಾಮ ಎಂದು ಕಟು ಟೀಕಿಸಿದ ಮಲ್ಲಿಕಾರ್ಜುನ ಖರ್ಗೆ

## ಮೋದಿ ದೇಶದ ಮರ್ಯಾದೆ ಹಾಳು ಮಾಡುತ್ತಿದ್ದಾರೆ: ಅಧ್ಯಕ್ಷ

• **ಉದಯವಾಹಿನಿ, ಚಿತ್ತಾಪುರ**

ಪ್ರಧಾನಿ ನರೇಂದ್ರ ಮೋದಿ ತಮ್ಮ ವಿದೇಶಾಂಗ ನೀತಿಯಿಂದಾಗಿ ನಮ್ಮ ದೇಶವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಹಾಳುಮಾಡುತ್ತಿದ್ದಾರೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಟೀಕಿಸಿದರು. ಚಿತ್ತಾಪುರ ಪಟ್ಟಣದಲ್ಲಿ ರೂ 1069 ಕೋಟಿ ವೆಚ್ಚದ ಕಾಮಗಾರಿಗಳು ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಿ ಅವರು ಮಾತನಾಡುತ್ತಿದ್ದರು. '' ಟ್ರಂಪ್ ಒಬ್ಬ ಡಿಕ್ಟೇಟರ್, ಮೋದಿ ಅವರ ಗುಲಾಮ ಎಂದು ಕಟು ಟೀಕಿಸಿದ ಖರ್ಗೆ, ರಷ್ಯಾದಿಂದ ಈಗ ಒಂದು ತಿಂಗಳ ಮಾತ್ರ ತೈಲ ಖರೀದಿಗೆ ಅಮೆರಿಕ ಅನುಮತಿ ನೀಡಿದೆ. ಅಮೇರಿಕದವರು ಹೇಳಿದಂತೆ ಮೋದಿ ಕೇಳುತ್ತಿದ್ದಾರೆ. ಟ್ರಂಪ್ ಜೊತೆ ಸ್ನೇಹ ಮಾಡಿಕೊಂಡು ನಮ್ಮ ದೇಶವನ್ನು ಗಿರಿವಿ ಇಟ್ಟಿದ್ದಾರೆ'' ಎಂದು ಖರ್ಗೆ ಆಕ್ರೋಶ ವ್ಯಕ್ತಪಡಿಸಿದರು. ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ದದ ಬಗ್ಗೆ ಪ್ರಸ್ತಾಪಿಸಿದ ಮಲ್ಲಿಕಾರ್ಜುನ ಖರ್ಗೆ, ಜವಾಹರ್ ಲಾಲ್ ನೆಹರು ಪ್ರಧಾನಿಯಾಗಿದ್ದಾಗ ನಾನ್ ಅಲೈನ್ ಮೆಂಟ್ ಒಪ್ಪಂದ ಮಾಡಿಕೊಂಡಿದ್ದರಿಂದ ಅದು ವಿಶ್ವಶಾಂತಿಗೆ ಕಾರಣವಾಗಿತ್ತು. ಆದರೆ, ಮೋದಿ ಈಗ ಮಾಡುತ್ತಿರುವುದೇನು ? ಮೋದಿ ಇಸ್ರೇಲ್‌ಗೆ ಹೋಗಿ ಬಂದ ನಂತರ ಅದು ಇರಾನ್ ಮೇಲೆ ಬಾಂಬ್ ಹಾಕಿತು. ದೇಶದ ಮುಖ್ಯಸ್ಥ ಖೊಮೇನಿಯನ್ನು ಅಮೆರಿಕ ದವರು ಹತ್ಯೆ ಮಾಡಿದರು. ಒಂದು ದೇಶದ ಮುಖ್ಯಸ್ಥನನ್ನು ಹತ್ಯೆ ಮಾಡಿದರೆ ಆ ದೇಶ ಶಾಂತಿಯಿಂದ ಇರುತ್ತದಯೇ ? ಇದು ವಿಶ್ವ ಶಾಂತಿಯಿಂದ ಇರಲು ಸಾಧ್ಯವಾಗುತ್ತದೆಯಾ ? ಎಂದು ಖರ್ಗೆ ಪ್ರಶ್ನಿಸಿದರು. ಕಾಂಗ್ರೆಸ್ ಅಧಿಕಾರದ 75 ವರ್ಷ ಆದರೂ ಕೂಡಾ ನಮ್ಮ ದೇಶದ ತಂಟೆಗೆ ಯಾರೂ ಬಂದಿರಲಿಲ್ಲ. ಪಾಕಿಸ್ತಾನವನ್ನು ಒಡೆದು ಎರಡು ಭಾಗ ಮಾಡಿದರು. ಅವರಿಗೆ ಇದ್ದಂತ ಧೈರ್ಯ ನಿಮಗೇಕಿಲ್ಲ ? ಎಂದು ಪ್ರಶ್ನಿಸಿದ ಮಲ್ಲಿಕಾರ್ಜುನ ಖರ್ಗೆ, ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಟೀಕಿಸುತ್ತಿರುವ ಬಿಜೆಪಿ ನಾಯಕರ ಮೇಲೆ ಹರಿಹಾಯ್ದರು. ಆರ್ಟಿಕಲ್ 371 ಜೆ ಜಾರಿಗೆ ತಂದಿದ್ದು ನಾವು. ನಮ್ಮ ಬೇಡಿಕೆಗೆ ಅಂದಿನ ಗೃಹ ಸಚಿವ ಅಡ್ವಾಣಿ ಸ್ಪಂದಿಸಲಿಲ್ಲ ಎಂದು ಅಂದಿನ ಬಿಜೆಪಿಯ ಪ್ರತಿರೋಧವನ್ನು ನೆನಪಿಸಿಕೊಂಡ ಖರ್ಗೆ, ನಾನು ಅಂದಿನ ಸಂದರ್ಭದಲ್ಲಿ ನಮ್ಮ ಪರವಾಗಿರಲು 130 ಜನ ಎಂ.ಪಿಗಳಿಗೆ ಹೇಗೆ ಮನವೊಲಿಸಿದ್ದೇನೆ ಅದು ನನಗೆ ಮಾತ್ರ ಗೊತ್ತು. ಆರ್ಟಿಕಲ್ 371 ಎ ನನಗೆ, ನನ್ನ ಮಕ್ಕಳಿಗೆ ಹಾಗೂ ಮೊಮ್ಮಕ್ಕಳಿಗೆ ಅನುಕೂಲವಾಗಲ್ಲ. ಅದು ಅನುಕೂಲವಾಗುವುದು ಜನಸಾಮಾನ್ಯರಿಗೆ. ಇಂದು ಮೆಟಿಕಲ್, ಇಂಜಿನಿಯರಿಂಗ್ ಸೀಟು ಪಡೆದುಕೊಳ್ಳಲು ಅನುಕೂಲವಾಗಿದೆ'' ಎಂದರು. ಕಲಬುರಗಿ ಗೆ ವಿಮಾನ ನಿಲ್ದಾಣ ಮಾಡಲು ಶ್ರೀನಿವಾಸ ಸರಡಗಿ ಗ್ರಾಮದ ಜನರು 1,000 ಎಕರೆ ಜಮೀನು ಕೊಟ್ಟಿದ್ದಾರೆ. ಅವರಿಗೆ ಇಲ್ಲಿಂದಲೆ ನಾನು ನಮಸ್ಕಾರ ಮಾಡುತ್ತೇನೆ. ವಿಮಾನ ನಿಲ್ದಾಣವನ್ನು ಖರ್ಗೆ ಜಾಸ್ತಿ ಓಡಾಡುತ್ತಾರೆ ಎಂದು ಬಂದ್ ಮಾಡಲಾಗಿದೆ. ನಾನು ದಿನಾಲು ಬರುತ್ತೇನಾ ?'' ಎಂದು ಪ್ರಶ್ನಿಸಿದರು.


ಉದಯವಾಹಿನಿ ಚಿತ್ರ

**ಯಾರು ಯಾರು ಎಲ್ಲಿ ಹೋಗಿದ್ದರು ಎನ್ನುವ ಮಾಹಿತಿ ಇದೆ**


ಭಾರತ ದೇಶದ 65% ರೈತರು ಕೃಷಿ ಅವಲಂಬಿತರಾಗಿದ್ದರೆ ಅಮೇರಿಕಾದದಲ್ಲಿ 3% ಅವಲಂಬಿತರಾಗಿದ್ದಾರೆ. ನಮ್ಮ ದೇಶದ ಉತ್ಪನ್ನಗಳಿಗೆ ಅಮೇರಿಕಾದಲ್ಲಿ ಟ್ಯಾಕ್ಸ್ ಇಲ್ಲ. ಆದರೆ, ಅಮೇರಿಕಾದ ಉತ್ಪನ್ನಗಳ ಮೇಲೆ ಮನಬಂದಂತೆ ಟ್ಯಾಕ್ಸ್ ಹಾಕಲಾಗುತ್ತಿದೆ. ಟ್ರಂಪ್ ನನ್ನ ಸ್ನೇಹಿತ ಎನ್ನುತ್ತಾರೆ. ಆದರೆ, ರಷ್ಯಾದಿಂದ ತೈಲ ಖರೀದಿ ಮಾಡದರೆ ನಿಮ್ಮ ಮೇಲೆ ಟ್ಯಾಕ್ಸ್ ಹಾಕುತ್ತೇನೆ ಟ್ರಂಪ್ ಹೇಳುತ್ತಾರೆ. ಟ್ರಂಪ್ ಜೊತೆ ದಿನಾಲೂ ಮಾತನಾಡುತ್ತಿರುವುದಾಗಿ ಮೋದಿ ಹೇಳುತ್ತಾರೆ. ಟ್ಯಾಕ್ಸ್ ಹಾಕುವ ಬಗ್ಗೆನೆ ಮಾತನಾಡುತ್ತಾರ ಎಫ್ಸ್ಟಿನ್ ಫೈಲ್‌ನಲ್ಲಿ ಯಾರು ಯಾರು ಎಲ್ಲಿ ಹೋಗಿದ್ದರು ಎನ್ನುವ ಮಾಹಿತಿ ಇದೆ ಎನ್ನಲಾಗುತ್ತಿದೆ. ಅದನ್ನು ಇಟ್ಟುಕೊಂಡೆ ಟ್ರಂಪ್ ಮೋದಿಗೆ ಹೆದರಿಸುತ್ತಿದ್ದಾರೆ ಎಂದರು.

> ಬಿಜೆಪಿಯರವರಿಗಂತೂ ಕೆಲಸನೇ ಇಲ್ಲ. ಸೋನಿಯಾಗೆ, ರಾಹುಲ್‌ಗೆ, ನನಗೆ, ಪ್ರಿಯಾಂಕ್‌ಗೆ , ಸಿದ್ದರಾಮಯ್ಯಗೆ ಹಾಗೂ ಶಿವಕುಮಾರ್‌ಗೆ ಬೈಯ್ಯುವುದೇ ಕೆಲಸವಾಗಿದೆ. ನಮ್ಮ ಸರ್ಕಾರ ಇದ್ದಾಗ ಮಾಡಿರುವ ಕೆಲಸಗಳ ಬಗ್ಗೆ ಎಲ್ಲರಿಗೂ ಗೊತ್ತಿದೆ. ಗದಗ ವಾಡಿ ರೈಲ್ವೆ ಲೈನ್, ರಸ್ತೆಗಳು, ಹೈವೈಗಳು ಮಾಡುದ್ದು ನಾವೇ ಹೊರತು ನೀವಲ್ಲ.
>
> - ಮಲ್ಲಿಕಾರ್ಜುನ ಖರ್ಗೆ, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ

# ಐಶ್ವರ್ಯ ಭರ್ಜರಿ ಸ್ಟೆಪ್



ಐಶ್ವರ್ಯಾ ರೈ ಮತ್ತು ಅಭಿಷೇಕ್ ಬಚ್ಚನ್ ಅವರು ಸಲ್ಮಾನ್ ಖಾನ್ ಅವರ ಜನಪ್ರಿಯ ಸಲಾಮ್-ಎ-ಇಷ್ಕ್ ಹಾಡಿಗೆ ನೃತ್ಯ ಮಾಡಿದ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಮುದೀತ್ ಅದಾನಿ ಮತ್ತು ಅನನ್ಯ ದಿವಾಂಜಿ ಅವರ ಮದುವೆಯಲ್ಲಿ ಈ ಜೋಡಿ ವೇದಿಕೆಯಲ್ಲಿ ಹೆಜ್ಜೆ ಹಾಕಿದೆ. ಸಲ್ಮಾನ್ ಖಾನ್ ಜೊತೆ ಐಶ್ವರ್ಯಾ ಅವರ ಹಿಂದಿನ ಸಂಬಂಧದ ಹಿನ್ನೆಲೆಯಲ್ಲಿ ಈ ವಿಡಿಯೋ ಹೆಚ್ಚು ಸದ್ದು ಮಾಡುತ್ತಿದೆ. ಸಲ್ಮಾನ್ ಖಾನ್ ಮತ್ತು ಐಶ್ವರ್ಯಾ ರೈ ಒಂದು ಕಾಲದಲ್ಲಿ ಒಟ್ಟಾಗಿ ಸುತ್ತಿದವರು. ಅವರ ಪ್ರೇಮಕಥೆ, ಜಗಳ ಮತ್ತು ಬೇರೆ ಆಗಿದ್ದು ಎಲ್ಲರಿಗೂ ತಿಳಿದಿದೆ. ನಂತರ ಐಶ್ವರ್ಯಾ ಅವರು ಅಭಿಷೇಕ್ ಬಚ್ಚನ್ ಅವರನ್ನು ವಿವಾಹವಾದರು. ಅವರಿಗೆ ಆರಾಧ್ಯ ಎಂಬ ಮಗಳಿದ್ದಾಳೆ. ಮತ್ತೊಂದೆಡೆ, ಸಲ್ಮಾನ್ ಇನ್ನೂ ಒಂಟಿಯಾಗಿದ್ದಾರೆ. ಈಗ, ದಂಪತಿ ಮತ್ತೊಮ್ಮೆ ಸುದ್ದಿಗೆ ಬರಲು ಕಾರಣ ಐಶ್ವರ್ಯಾ ಅವರ ವೈರಲ್ ವಿಡಿಯೋ. ಅವರು ಸಲ್ಲು ಹಾಡಿಗೆ ಡ್ಯಾನ್ಸ್ ಮಾಡಿದ್ದಾರೆ.




ಇತ್ತೀಚೆಗೆ, ಐಶ್ವರ್ಯಾ ತಮ್ಮ ಪತಿಯೊಂದಿಗೆ ಮದುವೆಗೆ ಬಂದಿದ್ದರು. ಈ ಸಮಯದಲ್ಲಿ, ಇಬ್ಬರೂ ವೇದಿಕೆಯಲ್ಲಿ ನೃತ್ಯ ಮಾಡಿದರು. ಈ ಡ್ಯಾನ್ಸ್ ವಿಡಿಯೋ ಪ್ರಸ್ತುತ ಸಾಮಾಜಿಕ ಮಾಧ್ಯಮದಲ್ಲಿ ಟ್ರೆಂಡಿಂಗ್ ಆಗಿದೆ. ಇದಕ್ಕೆ ಕಾರಣವೆಂದರೆ ಈ ವಿಡಿಯೋದಲ್ಲಿ, ಐಶ್ವರ್ಯಾ ಮತ್ತು ಅಭಿಷೇಕ್ ಸಲ್ಮಾನ್ ಖಾನ್ ಅವರ ಹಾಡಿಗೆ ನೃತ್ಯ ಮಾಡಿದ್ದಾರೆ. ಅದು ಕೂಡ ಸಲ್ಮಾನ್ ಖಾನ್ ಹಾಡಿಗೆ.

ಮದುವೆಯಲ್ಲಿ ಐಶ್ವರ್ಯಾ ನೀಲಿ ಬಣ್ಣದ ಸೂಟ್ ಧರಿಸಿದ್ದರೆ, ಅಭಿಷೇಕ್ ನೀಲಿ ಮತ್ತು ಬಿಳಿ ಬಣ್ಣದ ಕುರ್ತಾ ಮತ್ತು ಪೈಜಾಮ ಧರಿಸಿದ್ದಾರೆ. ಮದುವೆಯಲ್ಲಿ ಐಶ್ವರ್ಯಾ ಮತ್ತು ಅಭಿಷೇಕ್ 'ಸಲಾಮ್-ಎ-ಇಷ್ಕ್' ಹಾಡಿಗೆ ಡ್ಯಾನ್ಸ್ ಮಾಡಿದ್ದಾರೆ.

ಇದು ಸಲ್ಮಾನ್ ಖಾನ್ ಅವರ 'ಸಲಾಮ್-ಎ-ಇಷ್ಕ್' ಚಿತ್ರದ ಪ್ರಸಿದ್ಧ ಹಾಡು. ಮುದಿತ್ ಅದಾನಿ ಮತ್ತು ಅನನ್ಯ ದಿವಾಂಜಿ ಅವರ ಮದುವೆಯಲ್ಲಿ ಐಶ್ವರ್ಯಾ ಮತ್ತು ಅಭಿಷೇಕ್ ಡ್ಯಾನ್ಸ್ ಮಾಡಿದರು. ನೀತಾ ಅಂಬಾನಿ ಕೂಡ ಅವರೊಂದಿಗೆ ಇದ್ದರು. ಸಲಾಮ್-ಎ-ಇಷ್ಕ್ ಹಾಡನ್ನು ಶಂಕರ್-ಎಹ್ಸಾನ್-ಲೋಯ್ ಸಂಯೋಜಿಸಿದ್ದಾರೆ ಮತ್ತು ಚಿತ್ರವನ್ನು ನಿಖಿಲ್ ಅಡ್ವಾಣಿ ನಿರ್ದೇಶಿಸಿದ್ದಾರೆ. ಹಾಡಿನ ಸಾಹಿತ್ಯವನ್ನು ಸಮೀರ್ ಅಂಜನ್ ಬರೆದಿದ್ದಾರೆ. ಬಹುತಾರಾಗಣದ ಚಿತ್ರದಲ್ಲಿ ಸಲ್ಮಾನ್ ಖಾನ್, ಪ್ರಿಯಾಂಕಾ ಚೋಪ್ರಾ, ಅನಿಲ್ ಕಪೂರ್, ಜೂಹಿ ಚಾವ್ಲಾ, ಗೋವಿಂದ, ವಿದ್ಯಾ ಬಾಲನ್, ಜಾನ್ ಅಬ್ರಹಾಂ ಮತ್ತು ಶಾನನ್ ಇಸ್ರಾ ನಟಿಸಿದ್ದಾರೆ.

# ಇಂಡಿಯನ್ 3 ಸೀಕ್ವೆಲ್‌ಗೆ ಉತ್ಸುಕ

ಕಮಲ್ ಹಾಸನ್ ಹಾಗೂ ನಿರ್ದೇಶಕ ಶಂಕರ್ 'ಇಂಡಿಯನ್ 2' ಸೋಲಿನ ಹೊರತಾಗಿಯೂ 'ಇಂಡಿಯನ್ 3' ಸೀಕ್ವೆಲ್ ಮಾಡಲು ಉತ್ಸುಕರಾಗಿದ್ದಾರೆ. ಆದರೆ, ಭಾರೀ ನಷ್ಟ ಅನುಭವಿಸಿದ ನಿರ್ಮಾಣ ಸಂಸ್ಥೆ ಲೈಕಾ ಪ್ರೊಡಕ್ಷನ್ಸ್, ಮತ್ತೊಂದು ಸೀಕ್ವೆಲ್‌ಗೆ ಆಸಕ್ತಿ ತೋರಿಸುತ್ತಿಲ್ಲ. ಇದರಿಂದ ಯೋಜನೆ ವಿಳಂಬವಾಗಿದ್ದು, ಶಂಕರ್ ಅಸಮಾಧಾನಗೊಂಡಿದ್ದಾರೆ. ಯಾವುದೇ ಸಿನಿಮಾ ಫ್ಲಾಪ್ ಆದರೆ, ಅದಕ್ಕೆ ಸೀಕ್ವೆಲ್ ಮಾಡಲು ಯಾವ ನಿರ್ಮಾಪಕರೂ ಮುಂದಕ್ಕೆ ಬರೋದಿಲ್ಲ. ಮೊದಲ ಚಿತ್ರದಿಂದ ಆದ ನಷ್ಟವನ್ನೇ ನಿರ್ಮಾಪಕರು ಚೇತರಿಸಿಕೊಳ್ಳಲು ಸಾಧ್ಯವಾಗದೆ ಒದ್ದಾಡುವಾಗ ಮತ್ತೆ ಅದಕ್ಕೆ ಸೀಕ್ವೆಲ್ ಮಾಡುವ ಸಾಹಸ ಮಾಡಿದರೆ ಹೇಗೆ ಈಗ ಇದೇ ಸಾಹಸವನ್ನು ಕಮಲ್ ಹಾಸನ್ (ಕಮಲ್ ಹಾಸನ್) ಹಾಗೂ ನಿರ್ದೇಶಕ ಶಂಕರ್ ಮಾಡಲು ಮುಂದಾಗಿದ್ದರು. ಆದರೆ, ಇದಕ್ಕೆ ನಿರ್ಮಾಣ ಸಂಸ್ಥೆ ಆಸಕ್ತಿ ತೋರಿಸುತ್ತಿಲ್ಲ ಎಂದು ವರದಿ ಆಗಿದೆ. 'ಇಂಡಿಯನ್' ಸಿನಿಮಾ 1996ರಲ್ಲಿ ರಿಲೀಸ್ ಆಯಿತು. 30 ವರ್ಷಗಳ ಹಿಂದೆ ಬಂದ ಈ ಚಿತ್ರಕ್ಕೆ 2024ರಲ್ಲಿ ಸೀಕ್ವೆಲ್ ಬಂತು. ಈ ಚಿತ್ರ ಮೆಚ್ಚುಗೆ ಪಡೆಯಲು ವಿಫಲವಾಯಿತು. ಸಿನಿಮಾ ಹೀನಾಯವಾಗಿ ನಷ್ಟ ಕಂಡಿತು. ಈ ಚಿತ್ರವನ್ನು ಲೈಕಾ ಪ್ರೊಡಕ್ಷನ್ಸ್ ನಿರ್ಮಾಣ ಮಾಡಿದ್ದು, ನಿರ್ಮಾಣ ಸಂಸ್ಥೆಗೆ ಭಾರೀ ನಷ್ಟ ಆಗಿದೆ.



ಆದಾಗ್ಯೂ, ಸಿನಿಮಾದ ಮೂರನೇ ಪಾರ್ಟ್ ತರಲು ನಿರ್ದೇಶಕರು ಹಾಗೂ ಕಮಲ್ ಹಾಸನ್ ಉತ್ಸಾಹ ತೋರಿಸಿದ್ದರು ಎನ್ನಲಾಗಿದೆ. ಆದರೆ, ನಿರ್ಮಾಣ ಸಂಸ್ಥೆ ಈ ಬಗ್ಗೆ ಇನ್ನೂ ಮೀನಾಮೇಷ ಎಣಿಸುತ್ತಿದೆ. ಇದರಿಂದ ಶಂಕರ್ ಕೂಡ ಅಸಮಾಧಾನಗೊಂಡಿದ್ದಾರಂತೆ. ಅವರು ತಮ್ಮ ಮುಂದಿನ ಯೋಜನೆಯನ್ನು ಕೈಗೆತ್ತಿಕೊಳ್ಳಬೇಕಿದೆ. ಆದರೆ, ನಿರ್ಮಾಣ ಸಂಸ್ಥೆಯಿಂದ ಈ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಹೊರ ಬೀಳದೆ ಇರುವುದರಿಂದ ಅವರು ಈ ಯೋಜನೆ ಕೈ ಬಿಡಲು ನಿರ್ಧರಿಸಿದ್ದಾರೆ ಎಂದು ವರದಿ ಆಗಿದೆ.


ನಿರ್ಮಾಣ ಸಂಸ್ಥೆಗೆ 'ಇಂಡಿಯನ್ 3' ಮಾಡಲು ಯಾವುದೇ ಆಸಕ್ತಿ ಇಲ್ಲ. ಈ ಚಿತ್ರವನ್ನು ನೇರವಾಗಿ ನೆಟ್‌ಫ್ಲಿಕ್ಸ್‌ಗೆ ರಿಲೀಸ್ ಮಾಡುವ ಆಲೋಚನೆ ತಂಡಕ್ಕೆ ಇತ್ತು. ಆದರೆ, ಇದಕ್ಕೆ ಶಂಕರ್ ರೆಡಿ ಇಲ್ಲ. ಥಿಯೇಟರ್‌ನಲ್ಲಿ ರಿಲೀಸ್ ಮಾಡುವುದು ಅವರ ಗುರಿ. ಈ ತಿಕ್ಕಾಟದಿಂದ ಯೋಜನೆ ವಿಳಂಬ ಆಗುತ್ತಿತ್ತು. ಈಗ ನಿರ್ಮಾಣ ಸಂಸ್ಥೆ ಜೊತೆ ಶಂಕರ್ ಕೂಡ ಯೋಜನೆಯಿಂದ ಹೊರ ಹೋಗುವ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಹೇಳಲಾಗುತ್ತಾ ಇದೆ.

# ರೇಣುಕಾಸ್ವಾಮಿ ಕೊಲೆ ಕೇಸ್‌ನ ಆಧರಿಸಿ ಸಿನಿಮಾ ಸಿದ್ಧ

ಬಾಸ್ ಸಿನಿಮಾ ಟೀಸರ್ ಬಿಡುಗಡೆಯಾಗಿದ್ದು, ರೇಣುಕಾಸ್ವಾಮಿ ಕೊಲೆ ಪ್ರಕರಣದ ಘಟನೆಗಳನ್ನು ಹೋಲುತ್ತಿದೆ. 'ನೈಜ ಘಟನೆಗಳಿಂದ ಸ್ಫೂರ್ತಿ' ಎಂದು ನಿರ್ದೇಶಕರು ಹೇಳಿದ್ದರೂ, ಸೆಲೆಬ್ರಿಟಿ ಬಂಧನ, ರಾಜಕೀಯ ಬಲಿಪಶು ವಿಷಯಗಳು ಭಾರೀ ಚರ್ಚೆಗೆ ಕಾರಣವಾಗಿವೆ. ಪ್ರಸ್ತುತ ಪ್ರಕರಣವು ನ್ಯಾಯಾಲಯದಲ್ಲಿರುವುದರಿಂದ, ಇಂತಹ ಚಿತ್ರಕ್ಕೆ ಕಾನೂನು ಅಡೆತಡೆಗಳು ಎದುರಾಗುವ ಸಾಧ್ಯತೆಯಿದೆ.

ಯಾವುದಾದರೂ ಒಂದು ಸೆನ್ಸೇಷನ್ ಘಟನೆ ನಡೆಯಿತು ಎಂದರೆ ಅದನ್ನು ಆಧರಿಸಿ ಸಿನಿಮಾ ಮಾಡಲು ಎಲ್ಲರೂ ಮುಂದಾಗುತ್ತಾರೆ. ಸಿನಿಮಾ ಘೋಷಣೆ ಕೂಡ ಮಾಡುತ್ತಾರೆ. ಆದರೆ, ನೈಜ ಘಟನೆ ಆಧಾರಿತ ಸಿನಿಮಾ ಆಗಿರುವುದರಿಂದ ಅದಕ್ಕೆ ಎದುರಾಗುವ ಅಡೆತಡೆಗಳು ಹಲವು. ಈಗ ರೇಣುಕಾಸ್ವಾಮಿ ಕೊಲೆ ಕೇಸ್‌ನ ಆಧರಿಸಿ ಸಿನಿಮಾ ಸಿದ್ಧವಾಯಿತೇ ಎನ್ನುವ ಪ್ರಶ್ನೆ ಮೂಡಿದೆ. ಈ ರೀತಿ ಸಿದ್ಧವಾದ ಚಿತ್ರಕ್ಕೆ 'ಬಾಸ್' ಎಂಬ ಟೈಟಲ್ ಇಟ್ಟಿರುವುದು ಸಾಕಷ್ಟು ಚರ್ಚೆ ಹುಟ್ಟುಹಾಕಿದೆ. 'ನೈಜ ಘಟನೆಯಿಂದ ಸ್ಫೂರ್ತಿ ಪಡೆದು ಸಿನಿಮಾ ಮಾಡಲಾಗಿದೆ' ಎಂದ ಸಾಲುಗಳ ಮೂಲಕ 'ಬಾಸ್' ಟೀಸರ್ ಆರಂಭ ಆಗುತ್ತದೆ. 'ನನ್ನ ಹೆಂಡ್ತಿ ಪ್ರೆಗ್ನೆಂಟ್, ನನ್ನ ಬಿಟ್ಬಿಡಿ' ಎಂದು ಪುರುಷನೋರ್ವ ಬೇಡಿಕೊಳ್ಳುತ್ತಾನೆ. ಆದರೆ, ಆತನ ಸಾಯಿಸಲಾಗುತ್ತದೆ. ನಂತರ ಮೋರಿ ಪಕ್ಕ ಹೆಣ ಸಿಕ್ಕಿದೆ ಎಂದು ಪೊಲೀಸರು ವಾಕಿ ಟಾಕಿಯಲ್ಲಿ ಮಾತನಾಡೋದು ಕೇಳಿಸುತ್ತದೆ.

# ತ್ರಿಷಾಗೆ ಸೆಲೆಬ್ರಿಟಿಗಳ ಸಾಥ್



ಚಿತ್ರ ನಿರ್ದೇಶಕ ವಿಕ್ರಮ್ ಭಟ್ ತಳಪತಿ ವಿಜಯ್ ಮತ್ತು ತ್ರಿಷಾ ಕೃಷ್ಣನ್ ಅವರ ಬಗ್ಗೆ ಹರಡಿರುವ ವದಂತಿಗಳ ಬಗ್ಗೆ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ. ಇತ್ತೀಚೆಗೆ ಈ ವಿಷಯ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ಚರ್ಚೆಯಾಗುತ್ತಿದೆ. ವಿಕ್ರಮ್ ಭಟ್ ಅವರ ಪತ್ನಿ ಶ್ವೇತಾಂಬರಿ ಸೋನಿ ಸಂಬಂಧಿಸಿದ ಬಹು ಕೋಟಿ ವಂಚನೆ ಪ್ರಕರಣದಲ್ಲಿ ಭಟ್ ಅವರಿಗೆ ಫೆಬ್ರವರಿ 19, 2026 ರಂದು ಜಾಮೀನು ದೊರೆತಿದೆ. ಅವರು ಸಾಮಾಜಿಕ ಜಾಲತಾಣದಲ್ಲಿ ಈ ವದಂತಿಗಳ ಬಗ್ಗೆ ವಿವರವಾಗಿ ಮಾತನಾಡಿದ್ದಾರೆ. ಮಾರ್ಚ್ 9 ರಂದು ಇನ್‌ಸ್ಟಾಗ್ರಾಂನಲ್ಲಿ ಭಟ್ ಅವರು ವಿಜಯ್ ಮತ್ತು ತ್ರಿಶಾ ಅವರ ಬಗ್ಗೆ ಹರಡಿರುವ ವದಂತಿಗಳ ಕುರಿತು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ. ಈ ವದಂತಿಗಳು ನಿಜವೋ ಅಲ್ಲವೋ ಗೊತ್ತಿಲ್ಲ ಎಂದು ಸ್ಪಷ್ಟಪಡಿಸಿದರೂ, ಭಾವನೆಗಳನ್ನು ಅಡಗಿಸದೆ ಒಪ್ಪಿಕೊಳ್ಳುವ ಧೈರ್ಯವನ್ನು ಅವರು ಮೆಚ್ಚಿದ್ದಾರೆ. 'ವಿಜಯ್ ಮತ್ತು ತ್ರಿಶಾದಲ್ಲಿ ನನಗೆ ಮೆಚ್ಚುವಂತಹದ್ದು ಇದೆ. ಏನೂ ಇಲ್ಲ ಅಂತ ನಾಟಕ ಮಾಡದೆ ಇರುವುದನ್ನು ನೋಡಿದರೆ ಅದರಲ್ಲಿ ನನಗೆ ಗೌರವ ಇದೆ. ಪ್ರೀತಿಯನ್ನು ಪಾಪದಂತೆ ಅಡಗಿಸದೆ ಇರುವುದರಲ್ಲಿ ಗೌರವ ಇದೆ' ಎಂದು ಅವರು ಬರೆದಿದ್ದಾರೆ.

ಸಮಾಜದಲ್ಲಿ ಬಹಿರಂಗವಾಗಿ ಜನರನ್ನು ಜಡ್ಜ್ ಮಾಡಲಾಗುತ್ತದೆ ಆದರೆ ಖಾಸಗಿ ಜೀವನದಲ್ಲಿ ಅದೇ ವರ್ತನೆಗೆ ಗಮನ ಕೊಡಲಾಗುವುದಿಲ್ಲ ಎಂದು ಭಟ್ ಹೇಳಿದ್ದಾರೆ. ಡೇಟಿಂಗ್ ಆ್ಯಪ್‌ಗಳಲ್ಲಿ ಅಜ್ಞಾತವಾಗಿ ಪ್ರೊಫೈಲ್ ಇಟ್ಟುಕೊಳ್ಳುವವರು ಅಥವಾ ಸಂಬಂಧಗಳನ್ನು ಅಡಗಿಸುವವರಿಗೆ, ತಮ್ಮ ಭಾವನೆಗಳನ್ನು ಬಹಿರಂಗಪಡಿಸುವವರನ್ನು ಟೀಕಿಸುವ ಇರಾದೆ ಇದೆ ಎಂದು ಅವರು ಹೇಳಿದ್ದಾರೆ.

'ನನ್ನನ್ನು ಕೇಳಿದರೆ ಪ್ರೀತಿ ಇಲ್ಲದ ಸಂಬಂಧದಿಂದ ನಾನು ಹೊರಬರುತ್ತೇನೆ. ನಾನು ಹಣವನ್ನಾಗಲಿ, ಆಸ್ತಿಯನ್ನಾಗಲಿ ತೆಗೆದುಕೊಂಡು ಹೋಗಬಹುದು.

# ಫ್ಯಾನ್ಸ್‌ಗೆ ಎನ್‌ಟಿಆರ್ ಎಚ್ಚರಿಕೆ



ಜೂನಿಯರ್ ಎನ್‌ಟಿಆರ್ ಬೆಂಗಳೂರಿನ ಕಿಮ್ಸ್ ಆಸ್ಪತ್ರೆ ಹೊಸ ಘಟಕ ಉದ್ಘಾಟನೆಗೆ ಆಗಮಿಸಿದ್ದರು. ವೇದಿಕೆ ಮೇಲೆ ಭಾಷಣ ಮಾಡುವಾಗ ಅಭಿಮಾನಿಗಳು ಜೋರಾಗಿ ಕೂಗಿದ್ದಕ್ಕೆ, ಮೌನ ವಹಿಸುವಂತೆ ಖಡಕ್ ಎಚ್ಚರಿಕೆ ನೀಡಿದರು. ಮಹಿಳಾ ದಿನಾಚರಣೆ ಪ್ರಯುಕ್ತ ಮಹಿಳೆಯರಿಗೆ ಗೌರವ ನೀಡುವ ಬಗ್ಗೆ ಮಾತನಾಡಿದ ಜೂ. ಎನ್‌ಟಿಆರ್, ಕಿಮ್ಸ್ ಜೊತೆ ತನಗಿರುವ ವೈಯಕ್ತಿಕ ನಂಟನ್ನೂ ಸ್ಮರಿಸಿದರು.

ಟಾಲಿವುಡ್ ನಟ ಜೂನಿಯರ್ ಎನ್‌ಟಿಆರ್ ಅವರು ಭಾನುವಾರ ಬೆಂಗಳೂರಿಗೆ ಆಗಮಿಸಿದ್ದರು. ಕಿಮ್ಸ್ ಆಸ್ಪತ್ರೆಯ ಹೊಸ ಘಟಕದ ಉದ್ಘಾಟನೆಗಾಗಿ ಅವರು ಇಲ್ಲಿಗೆ ಬಂದಿದ್ದರು. ಈ ವೇಳೆ ವೇದಿಕೆ ಮೇಲೆ ಮಾತನಾಡುವಾಗ ಅಭಿಮಾನಿಗಳು ಇದಕ್ಕೆ ಅವಕಾಶ ಕೊಡಲಿಲ್ಲ. ಒಂದೇ ಸಮನೆ ಕೂಗುತ್ತಿದ್ದರು.

ಆಗ ಜೂನಿಯರ್ ಎನ್‌ಟಿಆರ್ ಅವರು ಖಡಕ್ ಎಚ್ಚರಿಕೆ ನೀಡಿದರು. ಈ ಸಂದರ್ಭದ ವಿಡಿಯೋ ವೈರಲ್ ಆಗಿದೆ.

ಜೂನಿಯರ್ ಎನ್‌ಟಿಆರ್ ಕಿಮ್ಸ್ ಘಟಕ ಉದ್ಘಾಟನೆಗೆ ಬರಲು ಒಂದು ಕಾರಣವೂ ಇತ್ತು. 1983ರಲ್ಲಿ ಜೂ ಎನ್‌ಟಿಆರ್ ಅವರ ತಾತ ಎನ್‌ಟಿಆರ್ ಅವರೇ ಕಿಮ್ಸ್‌ಗೆ ಅಡಿಗಲ್ಲು ಹಾಕಿದ್ದರು. 2009ರಲ್ಲಿ ಜೂ ಎನ್‌ಟಿಆರ್ ಭಾರಿ ರಸ್ತೆ ಅಪಘಾತಕ್ಕೆ ಒಳಗಾದಾಗ ಅವರು ಕಿಮ್ಸ್‌ನಲ್ಲಿಯೇ ಚಿಕಿತ್ಸೆ ಪಡೆದಿದ್ದರು. ಇದೇ ಕಾರಣಕ್ಕೆ ಇಂದು ಕಿಮ್ಸ್‌ನ ಹೊಸ ಘಟಕದ ಉದ್ಘಾಟನೆಗೆ ಅವರು ಆಗಮಿಸಿದ್ದರು. ಅವರನ್ನು ಅಭಿಮಾನಿಗಳು ಖುಷಿಯಿಂದ ಸ್ವಾಗತಿಸಿದರು. ಅವರನ್ನು ನೋಡಲು ಜನ ಸಾಗರವೇ ನೆರೆದಿತ್ತು. ಮಾರ್ಚ್ 8 ಮಹಿಳಾ ದಿನಾಚರಣೆ ಆಗಿತ್ತು. ಹೀಗಾಗಿ ಆ ಬಗ್ಗೆ ಅವರು ಮಾತನಾಡಿದರು. 'ಮಹಿಳೆಯರನ್ನು ಹೇಗೆ ಗೌರವಿಸಬೇಕು ಎಂದು ಪದೇ ಪದೇ ಹೇಳುವುದು ತನಗೆ ಇಷ್ಟವಿಲ್ಲ. ಪ್ರತಿಯೊಬ್ಬ ಪುರುಷನೂ ಆ ಸಂಸ್ಕೃತಿಯೊಂದಿಗೆ ಹುಟ್ಟಬೇಕು' ಎಂದರು. ಅಲ್ಲದೆ, ತಮ್ಮ ಮಕ್ಕಳಿಗೂ ಮಹಿಳೆಯರನ್ನು ಗೌರವಿಸುವುದನ್ನು ಹೇಳಿಕೊಡೋದಾಗಿ ಹೇಳಿದರು. ಸಿನಿಮಾ ಮಾತ್ರವಲ್ಲದೆ ಹೊರಗೆಯೂ ತುಂಬಾ ಸಾಧಾರಣವಾಗಿ ವರ್ತಿಸುವ ಎನ್‌ಟಿಆರ್, ಮಹಿಳೆಯರ ಸುರಕ್ಷತೆ ಮತ್ತು ಗೌರವದ ಬಗ್ಗೆ ತುಂಬಾ ಚೆನ್ನಾಗಿ ಮಾತನಾಡಿದ್ದಕ್ಕಾಗಿ ಪ್ರಶಂಸೆಗೆ ಪಾತ್ರರಾಗಿದ್ದಾರೆ.

# ಚಾಂಪಿಯನ್ ಭಾರತಕ್ಕೆ ಸಿಕ್ಕಿದೆಷ್ಟು



2026ರ ಟಿ20 ವಿಶ್ವಕಪ್‌ನಲ್ಲಿ ಭಾರತ ನ್ಯೂಜಿಲೆಂಡ್ ತಂಡವನ್ನು ಸೋಲಿಸಿ ಮೂರನೇ ಬಾರಿಗೆ ಪ್ರಶಸ್ತಿ ಗೆದ್ದಿದೆ. ತವರಿನಲ್ಲಿ ಟಿ20 ವಿಶ್ವಕಪ್ ಗೆದ್ದ ಮೊದಲ ತಂಡವಾಗಿ ಭಾರತ ದಾಖಲೆ ಸೃಷ್ಟಿಸಿದೆ. ಈ ಐತಿಹಾಸಿಕ ಗೆಲುವಿಗೆ ಟೀಂ ಇಂಡಿಯಾಗೆ 27.48 ಕೋಟಿ ಬಹುಮಾನ ದೊರೆತಿದ್ದು, ರನ್ನರ್ ಅಪ್ ನ್ಯೂಜಿಲೆಂಡ್ ತಂಡಕ್ಕೆ 14.65 ಕೋಟಿ ಲಭಿಸಿದೆ.

ಪಂದ್ಯದಲ್ಲಿ ಸಂಜು ಸ್ಯಾಮ್ಸನ್, ಜಸ್ಪ್ರೀತ್ ಬುಮ್ರಾ ಪ್ರಮುಖ ಪಾತ್ರ ವಹಿಸಿದರು. ಟೀಂ ಇಂಡಿಯಾ ಅಭಿಮಾನಿಗಳು ಯಾವುದನ್ನು ನಿರೀಕ್ಷಿಸಿದ್ದರೋ ಅದೇ ಆಗಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ 2026 ರ ಟಿ20 ವಿಶ್ವಕಪ್ ಫೈನಲ್‌ನಲ್ಲಿ ಭಾರತ ತಂಡ, ನ್ಯೂಜಿಲೆಂಡ್ ತಂಡವನ್ನು ಸೋಲಿಸಿ ಮೂರನೇ ಬಾರಿಗೆ ಟ್ರೋಫಿ ಎತ್ತಿಹಿಡಿದಿದೆ. ಇದರೊಂದಿಗೆ ಟೀಂ ಇಂಡಿಯಾ ತವರಿನಲ್ಲಿ ಟಿ20 ವಿಶ್ವಕಪ್ ಗೆದ್ದ ಮೊದಲ ತಂಡವೆಂಬ ದಾಖಲೆಯನ್ನು ನಿರ್ಮಿಸಿದೆ. ತವರಿನ ಅಭಿಮಾನಿಗಳ ಮುಂದೆ ಐತಿಹಾಸಿಕ ಸಾಧನೆ ಮಾಡಿದ ಟೀಂ ಇಂಡಿಯಾಗೆ ಐಸಿಸಿ ವತಿಯಿಂದ ಟ್ರೋಫಿ ಜೊತೆಗೆ ದೊಡ್ಡ ಮೊತ್ತದ ಬಹುಮಾನವು ಸಿಗಲಿದೆ. ಟೀಂ ಇಂಡಿಯಾಗೆ ಮಾತ್ರವಲ್ಲದೆ, ರನ್ನರ್ ಅಪ್ ತಂಡವಾದ ಕಿವೀಸ್‌ಗೂ ಕೋಟಿ ಕೋಟಿ ಹಣ ಸಿಗಲಿದೆ. ಹಾಗಿದ್ದರೆ, ಈ ಎರಡು ತಂಡಗಳಿಗೆ ಐಸಿಸಿ ಖಜಾನೆಯಿಂದ ಎಷ್ಟೆಷ್ಟು ಹಣ ಸಿಗಲಿದೆ ಎಂಬುದನ್ನು ನೋಡುವುದಾದರೆ.. 2026 ರ ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾಕ್ಕೆ ಸುಮಾರು 27.48 ಕೋಟಿ ರೂ. ಬಹುಮಾನ ಸಿಕ್ಕಿದೆ. ಇದು ಹಿಂದಿನ ಆವೃತ್ತಿಗಳಿಗೆ ಹೋಲಿಸಿದರೆ, ಬಹುಮಾನದ ಗಾತ್ರದಲ್ಲಿ ಗಮನಾರ್ಹ ಹೆಚ್ಚಳವಾಗಿದೆ.

**ಉಳಿದ 19 ತಂಡಗಳಿಗೂ ಕೋಟಿ ಹಣ**

ಏಕೆಂದರೆ ಕಳೆದ ಆವೃತ್ತಿಯ ಚಾಂಪಿಯನ್ ಆಗಿದ್ದ ಭಾರತ ತಂಡಕ್ಕೆ 20.42 ಕೋಟಿ ರೂ. ಬಹುಮಾನ ಪಡೆದಿತ್ತು. ಆದರೆ ಈ ಆವೃತ್ತಿಯಲ್ಲಿ ಭಾರತಕ್ಕೆ 7 ಕೋಟಿ ರೂ. ಅಧಿಕವಾಗಿ ಸಿಕ್ಕಿದೆ.

ಮತ್ತೊಂದೆಡೆ ಫೈನಲ್‌ನಲ್ಲಿ ಸೋತ ನ್ಯೂಜಿಲೆಂಡ್ ತಂಡಕ್ಕೂ ಸುಮಾರು ರೂ. 14.65 ಕೋಟಿ ರೂ. ಬಹುಮಾನ ಸಿಕ್ಕಿದೆ. ಉಳಿದಂತೆ ಸೆಮಿಫೈನಲ್‌ನಲ್ಲಿ ಸೋತ ದಕ್ಷಿಣ ಆಫ್ರಿಕಾ ಮತ್ತು ಇಂಗ್ಲೆಂಡ್ ತಂಡಗಳಿಗೂ ತಲಾ 7.24 ಕೋಟಿ ರೂ. ಬಹುಮಾನ ನೀಡಲಾಗಿದೆ.

ಇದಲ್ಲದೆ, ಸೂಪರ್ 8 ಹಂತವನ್ನು ತಲುಪಿದ ಆದರೆ ಸೆಮಿಫೈನಲ್ ತಲುಪಲು ವಿಫಲವಾದ ಪ್ರತಿ ತಂಡಕ್ಕೂ ಸುಮಾರು 3.48 ಕೋಟಿ ರೂ. ಬಹುಮಾನ ನೀಡಲಾಗಿದೆ. ಹಾಗೆಯೇ ಗುಂಪು ಹಂತದಲ್ಲಿ ಭಾಗವಹಿಸಿದ ಎಲ್ಲಾ ತಂಡಗಳಿಗೆ ಸುಮಾರು 2.29 ಕೋಟಿ ರೂ. ಹಣ ಸಿಕ್ಕಿದೆ. ಇನ್ನು ಈ ಫೈನಲ್‌ನಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಭಾರತ ಅದ್ಭುತ ಪ್ರದರ್ಶನ ನೀಡಿತು. ಸಂಜು ಸ್ಯಾಮ್ಸನ್ 46 ಎಸೆತಗಳಲ್ಲಿ 89 ರನ್ ಗಳಿಸಿ ತಂಡವು 5 ವಿಕೆಟ್‌ಗೆ 255 ರನ್ ಗಳಿಸಲು ಸಹಾಯ ಮಾಡಿದರು. ಉತ್ತರವಾಗಿ, ನ್ಯೂಜಿಲೆಂಡ್ 159 ರನ್‌ಗಳಿಗೆ ಆಲೌಟ್ ಆಯಿತು. ಜಸ್ಪ್ರೀತ್ ಬುಮ್ರಾ 15 ರನ್‌ಗಳಿಗೆ 4 ವಿಕೆಟ್‌ಗಳನ್ನು ಪಡೆದರೆ, ಅಕ್ಷರ್ ಪಟೇಲ್ 3 ವಿಕೆಟ್‌ಗಳನ್ನು ಪಡೆದರು.

# ನನ್ನ ಮನೆಗೇನು ತರಲ್ಲ ಅಮೀರ್ ಕಿಡಿ


ಈ ಮೂಲಕ ಭಾರತ ತಂಡವು 96 ರನ್‌ಗಳ ಅಮೋಘ ಗೆಲುವು ದಾಖಲಿಸಿ ಚಾಂಪಿಯನ್ ಪಟ್ಟ ಅಲಂಕರಿಸಿದೆ.

ಟಿ20 ವಿಶ್ವಕಪ್‌ನ ಆರಂಭದಿಂದಲೂ ಈ ಬಾರಿ ಭಾರತ ತಂಡ ಚಾಂಪಿಯನ್ ಪಟ್ಟಕ್ಕೇರಲ್ಲ ಎಂದು ಭವಿಷ್ಯ ನುಡಿಯುತ್ತಾ ಬಂದಿದ್ದ ಪಾಕಿಸ್ತಾನ್ ಕ್ರಿಕೆಟಿಗ ಮೊಹಮ್ಮದ್ ಅಮಿರ್ ಇದೀಗ ಪೇಚಿಗೆ ಸಿಲುಕಿದ್ದಾರೆ. ಅದರಲ್ಲೂ ಸೆಮಿಫೈನಲ್ ತಲುಪಲ್ಲ ಎಂದಿದ್ದ ಅಮಿರ್ ಲೆಕ್ಕಾಚಾರವನ್ನು ಟೀಮ್ ಇಂಡಿಯಾ ತಲೆ ಕೆಳಗೆ ಮಾಡಿತ್ತು.

ಇದಾಗ್ಯೂ ಸೆಮಿಫೈನಲ್‌ನಲ್ಲಿ ಭಾರತದ ವಿರುದ್ಧ ಇಂಗ್ಲೆಂಡ್ ಗೆದ್ದೇ ಗೆಲ್ಲುತ್ತೆ ಎಂದು ಮೊಹಮ್ಮದ್ ಅಮಿರ್ ಖಾಸಗಿ ಚಾನೆಲ್‌ನಲ್ಲಿ ಹೇಳಿಕೊಂಡಿದ್ದರು.

ಆದರೆ ಅಲ್ಲೂ ಕೂಡ ಅವರ ಲೆಕ್ಕಾಚಾರ ತಲೆಕೆಳಗಾಯಿತು. ಇಂಗ್ಲೆಂಡ್ ವಿರುದ್ಧ 7 ರನ್‌ಗಳ ಜಯದೊಂದಿಗೆ ಟೀಮ್ ಇಂಡಿಯಾ ಫೈನಲ್‌ಗೇರಿತು. ಇನ್ನು ಫೈನಲ್ ಪಂದ್ಯದಲ್ಲಿ ಗೆಲ್ಲುವ ಫೇವರೇಟ್ ತಂಡ ಯಾವುದು ಎಂಬ ಪ್ರಶ್ನೆಗೂ ಮೊಹಮ್ಮದ್ ಅಮಿರ್ ಕಡೆಯಿಂದ ಬಂದಂತಹ ಉತ್ತರ ನ್ಯೂಝಿಲೆಂಡ್. ಭಾರತ ತಂಡವನ್ನು ನ್ಯೂಝಿಲೆಂಡ್ ಸೋಲಿಸಿಯೇ ಸೋಲಿಸುತ್ತದೆ ಎಂದು ಪಾಕ್ ಕ್ರಿಕೆಟಿಗ ಭವಿಷ್ಯ ನುಡಿದಿದ್ದರು. ಈ ಭವಿಷ್ಯವನ್ನು ಕೂಡ ಟೀಮ್ ಇಂಡಿಯಾ ಸುಳ್ಳಾಗಿಸಿದೆ.

ಈ ಗೆಲುವಿನ ಬೆನ್ನಲ್ಲೇ ಖಾಸಗಿ ಚಾನೆಲ್‌ನ ಕಾರ್ಯಕ್ರಮದ ನಡುವೆ ಮೊಹಮ್ಮದ್ ಅಮಿರ್ ಜೊತೆ ವ್ಯಕ್ತಿಯೋರ್ವರು ಪಂದ್ಯದ ಫಲಿತಾಂಶದ ಬಗ್ಗೆ ಕೇಳಿದ್ದಾರೆ.



ನಿಮ್ಮ ಭವಿಷ್ಯ ಸುಳ್ಳಾಗಿದೆ, ಭಾರತ ತಂಡ ಗೆಲುವು ದಾಖಲಿಸಿದೆ. ಈ ಬಗ್ಗೆ ಈಗ ನೀವೇನು ಹೇಳುತ್ತೀರಾ ಎಂಬ ಪ್ರಶ್ನೆಯನ್ನು ಅಮಿರ್ ಮುಂದಿಡಲಾಗಿತ್ತು. ಈ ಸರಳ ಪ್ರಶ್ನೆಗೆ ಕುಪಿತಗೊಂಡ ಮೊಹಮ್ಮದ್ ಅಮಿರ್, ''ಅವರು (ಭಾರತ) ಗೆದ್ದರೆ ಟ್ರೋಫಿಯನ್ನು ನನ್ನ ಮನೆಗೆ ತರುವುದಿಲ್ಲ, ಅವರ ಮನೆಗೆ ತೆಗೆದುಕೊಂಡು ಹೋಗುತ್ತಾರೆ. ನಾನು ನನ್ನ ಅಭಿಪ್ರಾಯ ಹೇಳಿದ್ದೇನೆ ಅಷ್ಟೆ,'' ಎಂದು ಕಿಡಿಕಾರಿದ್ದಾರೆ.

# ಸದ್ದಿಲ್ಲದೇ ನಿಂತ ಸ್ಯಾಂಟ್ನರ್!



ಟಿ20 ವಿಶ್ವಕಪ್ ಫೈನಲ್ ಪಂದ್ಯದ ಆರಂಭಕ್ಕೂ ಮುನ್ನ ಅಹದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಭಾರತೀಯ ಪ್ರೇಕ್ಷಕರ ಸದ್ದಗಿಸುವುದೇ ನಮ್ಮ ಗುರಿ ಎಂದಿದ್ದ ನ್ಯೂಝಿಲೆಂಡ್ ತಂಡದ ನಾಯಕ ಮಿಚೆಲ್ ಸ್ಯಾಂಟ್ನರ್ ಪಂದ್ಯದ ಬಳಿಕ ಸ್ತಬ್ಧರಾಗಿ ನಿಂತಿರುವುದು ಕಂಡು ಬಂದಿದೆ.

ಈ ಪಂದ್ಯಕ್ಕೂ ಮುನ್ನ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ್ದ ಮಿಚೆಲ್ ಸ್ಯಾಂಟ್ನರ್, 2023ರ ಏಕದಿನ ವಿಶ್ವಕಪ್ ಫೈನಲ್‌ನಲ್ಲಿ ಪ್ಯಾಟ್ ಕಮ್ಮಿನ್ಸ್ ಹೇಳಿದಂತೆಯೇ, ಲಕ್ಷಾಂತರ ಭಾರತೀಯ ಅಭಿಮಾನಿಗಳ ಮುಂದೆ ಆಡುವಾಗ ''ಸ್ಟೇಡಿಯಂನಲ್ಲಿರುವ ಅಭಿಮಾನಿಗಳನ್ನು ಮೌನಗೊಳಿಸುವುದೇ ನಮ್ಮ ಗುರಿ'' ಎಂದಿದ್ದರು. ಈ ಮೂಲಕ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಟೀಮ್ ಇಂಡಿಯಾ ಅಭಿಮಾನಿಗಳ ಸದ್ದಡಗಿಸಿ ಟ್ರೋಫಿ ಗೆಲ್ಲುವ ವಿಶ್ವಾಸವನ್ನು ಸ್ಯಾಂಟ್ನರ್ ವ್ಯಕ್ತಪಡಿಸಿದ್ದರು. ಆದರೆ ಫೈನಲ್ ಪಂದ್ಯವನ್ನು ಟೀಮ್ ಇಂಡಿಯಾ ಏಕಪಕ್ಷೀಯವಾಗಿ ಮುಗಿಸುತ್ತಿದ್ದಂತೆ ಇತ್ತ ನಾಯಕ ಮಿಚೆಲ್ ಸ್ಯಾಂಟ್ನರ್ ಭಾವುಕರಾಗಿ ಕಂಡು ಬಂದರು. ಅದರಲ್ಲೂ ಮ್ಯಾಚ್ ಮುಗಿದ ಬಳಿಕ ನಿಶ್ಶಬ್ಧರಾಗಿ ಮೈದಾನದಲ್ಲಿ ಏಕಾಂಗಿಯಾಗಿ ನಿಂತಿದ್ದರು. ಇದೀಗ ಟಿ20 ವಿಶ್ವಕಪ್ ಬಳಿಕ ''ಕಣ್ಣೀರು ತುಂಬಿದ ಕಣ್ಣುಗಳು''ಗಳೊಂದಿಗೆ ಕಾಣಿಸಿಕೊಂಡ ಮಿಚೆಲ್ ಸ್ಯಾಂಟ್ನರ್ ಅವರ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಈ ವೈರಲ್ ಫೋಟೋಗೆ ಸದ್ದಡಗಿಸಲು ಬಂದು ಸದ್ದಿಲ್ಲದೇ ನಿಂತಿದ್ದಾರಾ ಎಂಬಾರ್ಥದಲ್ಲಿ ಅನೇಕರು ಪ್ರತಿಕ್ರಿಯಿಸಿ ಕಾಲೆಳೆದಿದ್ದಾರೆ.

# ಸೂರ್ಯಕುಮಾರ್ ನಾಯಕತ್ವಕ್ಕೆ ಕುತ್ತು!

ಚಾಂಪಿಯನ್ಸ್ ಟ್ರೋಫಿ ಗೆದ್ದ ಬಳಿಕ ಏಕದಿನ ತಂಡದ ನಾಯಕನ ಸ್ಥಾನದಿಂದ ರೋಹಿತ್ ಶರ್ಮಾ ಅವರನ್ನು ಕೆಳಗಿಳಿಸಲಾಗಿತ್ತು. ಇದೀಗ ಟಿ20 ವಿಶ್ವಕಪ್‌ನಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿದ ಟೀಮ್ ಇಂಡಿಯಾದ ಕ್ಯಾಪ್ಟನ್ ಕೂಡ ಬದಲಾಗುವ ಸುಳಿವು ಸಿಕ್ಕಿದೆ. ಅದರಂತೆ ಮುಂದಿನ ಸರಣಿಯಲ್ಲಿ ಭಾರತ ತಂಡವನ್ನು ಹೊಸ ನಾಯಕ ಮುನ್ನಡೆಸುವ ಸಾಧ್ಯತೆ ಹೆಚ್ಚಿದೆ. ಟಿ20 ವಿಶ್ವಕಪ್ ಟೂರ್ನಿಯಲ್ಲಿ ಭಾರತ ತಂಡವನ್ನು ಸೂರ್ಯಕುಮಾರ್ ಯಾದವ್ ಯಶಸ್ವಿಯಾಗಿ ಮುನ್ನಡೆಸಿದ್ದಾರೆ. ಈ ಯಶಸ್ಸಿನೊಂದಿಗೆ ಟೀಮ್ ಇಂಡಿಯಾ 3ನೇ ಬಾರಿಗೆ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಚಾಂಪಿಯನ್ ಪಟ್ಟದ ಹೊರತಾಗಿಯೂ ಸೂರ್ಯಕುಮಾರ್ ಯಾದವ್ ಟೀಮ್ ಇಂಡಿಯಾದ ನಾಯಕನಾಗಿ ಮುಂದುವರೆಯುವುದು ಅನುಮಾನ. ಏಕೆಂದರೆ ಬಿಸಿಸಿಐ 2026ರ ಟಿ20 ವಿಶ್ವಕಪ್‌ಗಾಗಿ ಸೂರ್ಯಕುಮಾರ್ ಯಾದವ್ ಅವರನ್ನು ನಾಯಕನನ್ನಾಗಿ ನೇಮಿಸಿದೆ.



ಇದೀಗ ಅವರು ವಯಸ್ಸು 35 ವರ್ಷ. ಮುಂಬರುವ ಟಿ20 ವಿಶ್ವಕಪ್‌ನಲ್ಲಿ ಅವರು ಕಣಕ್ಕಿಳಿಯುವುದಿಲ್ಲ ಎಂದೇ ಹೇಳಬಹುದು. ಇದಕ್ಕೂ ಮುನ್ನ 2024ರ ಟಿ20 ವಿಶ್ವಕಪ್ ಮುಕ್ತಾಯದ ಬೆನ್ನಲ್ಲೇ ರೋಹಿತ್ ಶರ್ಮಾ ಅವರನ್ನು ಕ್ಯಾಪ್ಟನ್ ಪಟ್ಟದಿಂದ ಕೆಳಗಿಳಿಸುವ ಸೂಚನೆ ನೀಡಲಾಗಿತ್ತು. ಹೀಗಾಗಿ ಹಿಟ್‌ಮ್ಯಾನ್ ಟಿ20 ವಿಶ್ವಕಪ್ ಗೆದ್ದ ಬೆನ್ನಲ್ಲೇ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದರು. ಇತ್ತ ಸೂರ್ಯಕುಮಾರ್ ಯಾದವ್‌ಗೂ ಇದೇ ರೀತಿಯ ಸೂಚನೆ ನೀಡಲಾಗಿದೆ ಎಂದು ತಿಳಿದು ಬಂದಿದೆ. ಇದಾಗ್ಯೂ ಅವರು ಭಾರತ ಟಿ20 ತಂಡದಲ್ಲಿ ಮುಂದುವರೆಯಲು ಇಚ್ಛಿಸಿದ್ದಾರೆ.

ಹೀಗಾಗಿ ಮುಂದಿನ ಸರಣಿಯಲ್ಲೂ ಸೂರ್ಯಕುಮಾರ್ ಯಾದವ್ ಕಾಣಿಸಿಕೊಳ್ಳಲಿದ್ದಾರೆ. ಆದರೆ ಅವರು ನಾಯಕನಾಗಿ ಕಣಕ್ಕಿಳಿಯುವುದು ಡೌಟ್ ಎನ್ನಲಾಗುತ್ತಿದೆ.

ಸೂರ್ಯಕುಮಾರ್ ಯಾದವ್ ಬದಲಿಗೆ ಹೊಸ ನಾಯಕನನ್ನು ಆಯ್ಕೆ ಮಾಡಲು ಬಿಸಿಸಿಐ ಚಿಂತಿಸಿದೆ. ಅದರಲ್ಲೂ ಮೂರು ಸ್ವರೂಪಗಳ ತಂಡಕ್ಕೆ ಏಕೈಕ ನಾಯಕ ಇರಬೇಕೆಂಬ ಆಶಯವನ್ನು ಬಿಸಿಸಿಐ ಹೊಂದಿದೆ. ಹೀಗಾಗಿ ಏಕದಿನ ಹಾಗೂ ಟೆಸ್ಟ್ ತಂಡದ ನಾಯಕನಾಗಿರುವ ಶುಭ್‌ಮನ್ ಗಿಲ್‌ಗೆ ಕ್ಯಾಪ್ಟನ್ ಪಟ್ಟ ನೀಡಬಹುದು. ಆದರೆ ಅದಕ್ಕೂ ಮುನ್ನ ಗಿಲ್ ಭಾರತ ಟಿ20 ತಂಡಕ್ಕೆ ಕಂಬ್ಯಾಕ್ ಮಾಡಬೇಕಿದೆ.

ಹೀಗೆ ಕಂಬ್ಯಾಕ್ ಮಾಡಲು ಶುಭ್‌ಮನ್ ಗಿಲ್ ಮುಂದಿರುವ ದಾರಿ ಈ ಬಾರಿ ಇಂಡಿಯನ್ ಪ್ರೀಮಿಯರ್ ಲೀಗ್. ಅಂದರೆ ಈ ಬಾರಿಯ ಐಪಿಎಲ್‌ನಲ್ಲಿ ಗಿಲ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದರೆ ಭಾರತ ಟಿ20 ತಂಡಕ್ಕೆ ಕಂಬ್ಯಾಕ್ ಮಾಡುವುದು ಖಚಿತ. ಅದರಲ್ಲೂ ಸ್ಥಿರ ಪ್ರದರ್ಶನದೊಂದಿಗೆ ಗುಜರಾತ್ ಟೈಟಾನ್ಸ್ ತಂಡವನ್ನು ಯಶಸ್ವಿಯಾಗಿ ಮುನ್ನಡೆಸಿದರೆ ಭಾರತ ಟಿ20 ತಂಡದ ನಾಯಕನಾಗಿ ಶುಭ್‌ಮನ್ ಗಿಲ್ ಆಯ್ಕೆಯಾಗಲಿದ್ದಾರೆ. ಇಲ್ಲದಿದ್ದರೆ ಹಾರ್ದಿಕ್ ಪಾಂಡ್ಯಗೆ ಕ್ಯಾಪ್ಟನ್ ನೀಡಬಹುದು. ಅಂದರೆ ಮುಂಬರುವ ಟಿ20 ಸರಣಿಗೂ ಮುನ್ನ ವಿಶ್ವ ಚಾಂಪಿಯನ್ ಟೀಮ್ ಇಂಡಿಯಾದ ನಾಯಕ ಬದಲಾಗುವ ಸಾಧ್ಯತೆ ಹೆಚ್ಚಿದೆ. ಈ ಮೂಲಕ 2028 ರ ಟಿ20 ವಿಶ್ವಕಪ್‌ಗೆ ಈಗಲೇ ನಾಯಕನನ್ನು ರೂಪಿಸಲು ಬಿಸಿಸಿಐ ಪ್ಲ್ಯಾನ್ ರೂಪಿಸುತ್ತಿದೆ. ಅದರಂತೆ ಸೂರ್ಯಕುಮಾರ್ ಯಾದವ್ ಅವರ ಉತ್ತರಾಧಿಕಾರಿಯಾಗಿ ಟೀಮ್ ಇಂಡಿಯಾವನ್ನು ಮುನ್ನಡೆಸುವವರು ಯಾರೆಂಬುದು ಖಚಿತವಾಗಲು ಐಪಿಎಲ್ ಮುಗಿಯುವವರೆಗೆ ಕಾಯಲೇಬೇಕು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966